Volume : 9 | Issue : 179 | October : 03 : 2026 : Saturday
ಸಂಪುಟ : 9 | ಸಂಚಿಕೆ : 179 | ಅಕ್ಟೋಬರ್ : 03 : 2026 : ಶನಿವಾರ



# ವಿಕ್ರಮ ವಾಹಿನಿ

www.VIKRAMAVAHINI.com
— ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ —
ಪುಟ 4 ₹2 || ಕನ್ನಡ ದಿನಪತ್ರಿಕೆ ||
VIKRAMA VAHINI
PRGI NO: KARKAN/2018/78481



ಬಾಲಿವುಡ್ ನಟಿ ನುಸ್ರತ್ ಭರೂಚಾ ಅವರು ಇಂಡೋನೇಷ್ಯಾದ ಬಾಲಿಯಲ್ಲಿ ಚಿತ್ರೀಕರಣದ ವೇಳೆ ಅಪಘಾತಕ್ಕೀಡಾಗಿ ಬೆನ್ನುಮೂಳೆಗೆ ಗಾಯಗೊಂಡಿದ್ದಾರೆ. ಸ್ಥಳೀಯ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವ ಅವರನ್ನು ಹೆಚ್ಚಿನ ಚಿಕಿತ್ಸೆಗಾಗಿ ಮುಂಬೈಗೆ ಕರೆತರಲು ಸಿದ್ಧತೆ ನಡೆದಿದೆ.

ಎಸ್ಐಆರ್‌ಗೆ ಕಾಂಗ್ರೆಸ್ ಭಯಪಡುತ್ತಿರುವುದೇಕೆ?: ಸಿ.ಟಿ.ರವಿ ಪುಟ 2

'50 ಲಕ್ಷ ಮತದಾರರ ಹೆಸರು ಕೈಬಿಡುವ ಸಂಚು ಸಾಬೀತುಪಡಿಸಿ' ಪುಟ 3

## ■ ಸುದ್ದಿ ಚುಟುಕು

### ರೂ 927 ಕೋಟಿ ವಂಚನೆ ಆರೋಪ: ಓಜೋನ್ ಅರ್ಬಾನಾ ಸಿಎಂಡಿ ಬಂಧನ

● ವಿಕ್ರಮ ವಾಹಿನಿ । ಬೆಂಗಳೂರು

ಮನೆ ಖರೀದಿದಾರರಿಂದ ಸಂಗ್ರಹಿಸಿದ ಹಣವನ್ನು ದುರುಪಯೋಗಪಡಿಸಿಕೊಂಡು, ನಿಗದಿತ ಅವಧಿಯಲ್ಲಿ ಫ್ಲ್ಯಾಟ್‌ಗಳನ್ನು ಹಸ್ತಾಂತರಿಸದ ಆರೋಪದ ಪ್ರಕರಣದಲ್ಲಿ ಓಜೋನ್ ಅರ್ಬಾನಾ ಇನ್ಫ್ರಾ ಡೆವಲಪರ್ಸ್ ಪ್ರೈವೇಟ್ ಲಿಮಿಟೆಡ್‌ನ ಅಧ್ಯಕ್ಷ ಹಾಗೂ ವ್ಯವಸ್ಥಾಪಕ ನಿರ್ದೇಶಕ ಎಸ್. ವಾಸುದೇವನ್ ಅವರನ್ನು ಜಾರಿ ನಿರ್ದೇಶನಾಲಯ (ಇಡಿ) ಬಂಧಿಸಿದೆ. ಸೆ.30ರಂದು ಬಂಧಿಸಲಾದ ಅವರನ್ನು ಬೆಂಗಳೂರಿನ ವಿಶೇಷ ಪಿಎಂಎಲ್ಎ ನ್ಯಾಯಾಲಯ ಅ.1ರಂದು 14 ದಿನಗಳ ಇಡಿ ಕಸ್ಟಡಿಗೆ ಒಪ್ಪಿಸಿದೆ.

ಇಡಿ ಪ್ರಕಾರ, ಕಂಪನಿ ಹಾಗೂ ಅದರ ಪ್ರವರ್ತಕರು ಸುಮಾರು ರೂ 927.22 ಕೋಟಿ ಹಣವನ್ನು ಮನೆ ಖರೀದಿದಾರರಿಂದ ಸಂಗ್ರಹಿಸಿದ್ದರು. ನಿರ್ಮಾಣ ಪೂರ್ಣಗೊಳಿಸಿ ಫ್ಲ್ಯಾಟ್‌ಗಳ ಹಸ್ತಾಂತರ ಮಾಡುವುದಾಗಿ ಹಾಗೂ ಸ್ವಾಧೀನ ದೊರೆಯುವವರೆಗೆ ನಿರ್ಮಾಣ ಪೂರ್ವದ ಇಎಂಐ ಪಾವತಿಸುವುದಾಗಿ ಖರೀದಿದಾರರಿಗೆ ಭರವಸೆ ನೀಡಲಾಗಿತ್ತು. ಆದರೆ ಯೋಜನೆ ಪೂರ್ಣಗೊಳ್ಳದೆ, ಫ್ಲ್ಯಾಟ್‌ಗಳ ಹಸ್ತಾಂತರ ಅಥವಾ ಠೇವಣಿ ಹಣದ ಮರುಪಾವತಿ ಆಗಿಲ್ಲ ಎಂದು ತನಿಖಾ ಸಂಸ್ಥೆ ಆರೋಪಿಸಿದೆ.

ಮನೆ ಖರೀದಿದಾರರ ವಂಚನೆಗೆ ಸಂಬಂಧಿಸಿದಂತೆ ಬೆಂಗಳೂರಿನ ವಿವಿಧ ಪೊಲೀಸ್ ಠಾಣೆಗಳಲ್ಲಿ ದಾಖಲಾಗಿದ್ದ ಪ್ರಕರಣಗಳ ಆಧಾರದಲ್ಲಿ ಇಡಿ ತನಿಖೆ ಆರಂಭಿಸಿತ್ತು. ಸುಪ್ರೀಂ ಕೋರ್ಟ್ ನಿರ್ದೇಶನದ ಮೇರೆಗೆ ಸಿಬಿಐನ ಆರ್ಥಿಕ ಅಪರಾಧಗಳ ವಿಭಾಗವೂ ಕಂಪನಿ ಮತ್ತು ಅದರ ಪ್ರವರ್ತಕರ ವಿರುದ್ಧ ಪ್ರಕರಣ ದಾಖಲಿಸಿದೆ. ಪ್ರಕರಣಕ್ಕೆ ಸಂಬಂಧಿಸಿದಂತೆ 2025ರ ಆಗಸ್ಟ್‌ನಲ್ಲಿ ಇಡಿ ಹಲವು ಸ್ಥಳಗಳಲ್ಲಿ ಶೋಧ ನಡೆಸಿ ದಾಖಲೆಗಳನ್ನು ವಶಪಡಿಸಿಕೊಂಡಿತ್ತು. ಬಳಿಕ ಸುಮಾರು ರೂ 423.37 ಕೋಟಿ ಮೌಲ್ಯದ ಸ್ಥಿರಾಸ್ತಿಗಳನ್ನು ತಾತ್ಕಾಲಿಕವಾಗಿ ಜಪ್ತಿ ಮಾಡಿತ್ತು. ಮನೆ ಖರೀದಿದಾರರಿಂದ ಸಂಗ್ರಹಿಸಿದ ಹಣವನ್ನು ವಿವಿಧ ಕಂಪನಿಗಳು ಹಾಗೂ ವ್ಯಕ್ತಿಗಳ ಮೂಲಕ ಬೇರೆಡೆ ವರ್ಗಾಯಿಸಲಾಗಿದೆ ಎಂಬ ಆರೋಪದ ಕುರಿತು ತನಿಖೆ ಮುಂದುವರಿದಿದೆ.

ಓಜೋನ್ ಇನ್ಫ್ರಾ ಡೆವಲಪರ್ಸ್, ಓಜೋನ್ ರಿಯಾಲ್ಟರ್ಸ್ ಹಾಗೂ ಓಜೋನ್ ಪ್ರಾಜೆಕ್ಟ್ಸ್ ವಿರುದ್ಧ ದಾಖಲಾಗಿರುವ ಪ್ರತ್ಯೇಕ ಪ್ರಕರಣಗಳನ್ನೂ ಇಡಿ ಪರಿಶೀಲಿಸುತ್ತಿದ್ದು, ಹಣದ ಮೂಲ, ವರ್ಗಾವಣೆ ಹಾಗೂ ಬಳಕೆಯ ಕುರಿತು ತನಿಖೆ ನಡೆಸುತ್ತಿದೆ.

### 7,500 ಮತದಾರರ ಹೆಸರು ಅಳಿಸಲು ಯತ್ನ: ಎಫ್ಐಆರ್

● ವಿಕ್ರಮ ವಾಹಿನಿ । ಬಳ್ಳಾರಿ

ವಿಶೇಷ ತೀವ್ರ ಪರಿಷ್ಕರಣೆ (ಎಸ್ಐಆರ್) ವೇಳೆ ಬಳ್ಳಾರಿ ನಗರ ವಿಧಾನಸಭಾ ಕ್ಷೇತ್ರದ 7,561 ಮತದಾರರ ಹೆಸರುಗಳನ್ನು ಮತದಾರರ ಪಟ್ಟಿಯಿಂದ ಅಳಿಸಲು ಯತ್ನಿಸಲಾಗಿದೆ ಎಂಬ ಆರೋಪದ ಹಿನ್ನೆಲೆಯಲ್ಲಿ ಬಿಜೆಪಿ ಬೂತ್ ಮಟ್ಟದ ಏಜೆಂಟ್ (ಬಿಎಲ್ಎ–1) ಹಾಗೂ ಮಹಾನಗರ ಪಾಲಿಕೆ ಅಧಿಕಾರಿಗಳು ಸೇರಿದಂತೆ ಹಲವರ ವಿರುದ್ಧ ಬ್ರೂಸ್‌ಪೇಟೆ ಠಾಣೆಯಲ್ಲಿ ಎಫ್ಐಆರ್ ದಾಖಲಾಗಿದೆ.

ಕಾಂಗ್ರೆಸ್ ಬಿಎಲ್ಎ ಗೌತಮ್ ನೀಡಿದ ದೂರಿನ ಮೇರೆಗೆ ಬಿಜೆಪಿ ಬಿಎಲ್ಎ–1 ಶ್ರೀನಿವಾಸ ಮೋತ್ಕರ್, ಪಾಲಿಕೆ ಸಹಾಯಕ ಆಯುಕ್ತ ನಂದೀಶ್, ಬಿಎಲ್‌ಒಗಳಾದ ಸುಮಲತಾ ಹಾಗೂ ಶರಣಬಸವ ಸೇರಿದಂತೆ ಇತರರ ವಿರುದ್ಧ ಬಿಎನ್ಎಸ್‌ನ ವಿವಿಧ ಸೆಕ್ಷನ್‌ಗಳಡಿ ಪ್ರಕರಣ ದಾಖಲಿಸಲಾಗಿದೆ.

ಬಳ್ಳಾರಿ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಅಲ್ಲಂ ಪ್ರಶಾಂತ್ ಸುದ್ದಿಗೋಷ್ಠಿಯಲ್ಲಿ, 7,561 ಮತದಾರರ ಹೆಸರುಗಳನ್ನು ಮರುಪರಿಶೀಲನೆ ಹೆಸರಿನಲ್ಲಿ ಅಳಿಸಲು ಚುನಾವಣಾಧಿಕಾರಿಗಳಿಗೆ ಮನವಿ ಸಲ್ಲಿಸಲಾಗಿತ್ತು ಎಂದು ಆರೋಪಿಸಿದ್ದರು. ಪಟ್ಟಿಯಲ್ಲಿರುವ ಬಹುತೇಕರು ಅಲ್ಪಸಂಖ್ಯಾತ ಸಮುದಾಯಕ್ಕೆ ಸೇರಿದವರು ಹಾಗೂ ಕಾಂಗ್ರೆಸ್ ಬೆಂಬಲಿಗರು ಎಂದು ಅವರು ದೂರಿದ್ದರು. ಈ ಆರೋಪಗಳನ್ನು ತನಿಖೆ ಬಳಿಕವೇ ದೃಢಪಡಿಸಬೇಕಿದೆ. ತಮ್ಮ ಹೆಸರುಗಳನ್ನು ಅಳಿಸಲು ಯತ್ನಿಸಲಾ ಗುತ್ತಿದೆ ಎಂದು ಕೆಲ ಮತದಾರರು ಆಕ್ಷೇಪ ವ್ಯಕ್ತಪಡಿಸಿದ್ದು, ಹಲವು ವರ್ಷಗಳಿಂದ ಬಳ್ಳಾರಿಯಲ್ಲೇ ವಾಸವಿದ್ದು ಅಗತ್ಯ ದಾಖಲೆಗಳಿದ್ದರೂ ಅಧಿಕಾರಿಗಳು ದಾಖಲೆ ಪರಿಶೀಲನೆ ನಡೆಸುತ್ತಿದ್ದಾರೆ ಎಂದು ತಿಳಿಸಿದ್ದಾರೆ. 2ನೇ ಪುಟಕ್ಕೆ...

# 44 ವರ್ಷಗಳ ಬಳಿಕ ಹಾಕಿ ಜಯಭೇರಿ: ಒಂದೇ ನಿಮಿಷದಲ್ಲಿ 2 ಸ್ವರ್ಣ!

● ವಿಕ್ರಮ ವಾಹಿನಿ । ಗಿಫು (ಜಪಾನ್)



ಭಾರತೀಯ ಮಹಿಳಾ ಹಾಕಿ ತಂಡ 44 ವರ್ಷಗಳ ಬಳಿಕ ಏಷ್ಯನ್ ಗೇಮ್ಸ್‌ನಲ್ಲಿ ಚಿನ್ನದ ಪದಕ ಗೆದ್ದು ಇತಿಹಾಸ ನಿರ್ಮಿಸಿದೆ. ಶುಕ್ರವಾರ ನಡೆದ ಫೈನಲ್‌ನಲ್ಲಿ ಹಾಲಿ ಚಾಂಪಿಯನ್ ಚೀನಾವನ್ನು 1–0 ಗೋಲಿನಿಂದ ಮಣಿಸಿ ಪ್ರಶಸ್ತಿ ಮುಡಿಗೇರಿಸಿಕೊಂಡ ಭಾರತ, 2028ರ ಲಾಸ್ ಏಂಜಲೀಸ್ ಒಲಿಂಪಿಕ್ಸ್‌ಗೆ ನೇರ ಅರ್ಹತೆಯನ್ನೂ ಪಡೆದುಕೊಂಡಿತು. ಭಾರತದ ಪರ ಲಾಲ್ರೆಮ್ಸಿಯಾಮಿ 10ನೇ ನಿಮಿಷದಲ್ಲಿ ದಾಖಲಿಸಿದ ಗೋಲು ನಿರ್ಣಾಯಕವಾಯಿತು. ಇದು ಅವರ 200ನೇ ಅಂತಾರಾಷ್ಟ್ರೀಯ ಪಂದ್ಯವಾಗಿದ್ದು, ವಿಶೇಷ ಸಾಧನೆಯೊಂದಿಗೆ ನೆನಪಿನಲ್ಲಿ ಉಳಿಯಿತು. ಚೀನಾ ಹಲವು ಬಾರಿ ಆಕ್ರಮಣ ನಡೆಸಿದರೂ ಭಾರತದ ರಕ್ಷಣಾ ಪಡೆ ಮುನ್ನಡೆ ಕಾಯ್ದುಕೊಂಡಿತು.

ವಿಶೇಷವಾಗಿ ಚೀನಾಕ್ಕೆ ದೊರೆತ ಪೆನಾಲ್ಟಿ ಸ್ಟ್ರೋಕ್ ಅನ್ನು ಗೋಲ್‌ಕೀಪರ್ ಸವಿತಾ ಪುನಿಯಾ ಅದ್ಭುತವಾಗಿ ತಡೆದು ಭಾರತಕ್ಕೆ ಮುನ್ನಡೆ ಉಳಿಸಿಕೊಳ್ಳಲು ನೆರವಾದರು. ಅಂತಿಮ ಹಂತದಲ್ಲಿಯೂ ಚೀನಾದ ಒತ್ತಡವನ್ನು ಸಮರ್ಥವಾಗಿ ಎದುರಿಸಿದ ಭಾರತ 1–0 ಅಂತರದ ಗೆಲುವು ಸಾಧಿಸಿತು.

1982ರಲ್ಲಿ ದೆಹಲಿಯಲ್ಲಿ ನಡೆದ ಏಷ್ಯನ್ ಗೇಮ್ಸ್‌ನಲ್ಲಿ ಮಹಿಳಾ ಹಾಕಿ ಚಿನ್ನ ಗೆದ್ದಿದ್ದ ಭಾರತ, ಬಳಿಕ 1998 ಹಾಗೂ 2018ರಲ್ಲಿ ಬೆಳ್ಳಿ ಪದಕಕ್ಕೆ ತೃಪ್ತಿಪಟ್ಟಿತ್ತು. ಇದೀಗ ಎರಡನೇ ಬಾರಿಗೆ ಚಿನ್ನ ಗೆಲ್ಲುವ ಮೂಲಕ 44 ವರ್ಷಗಳ ಕಾಯುವಿಕೆಗೆ ತೆರೆ ಎಳೆದಿದೆ. ಈ ಗೆಲುವಿನೊಂದಿಗೆ 2026ರ ಏಷ್ಯನ್ ಗೇಮ್ಸ್‌ನಲ್ಲಿ ಭಾರತದ ಚಿನ್ನದ ಪದಕಗಳ ಸಂಖ್ಯೆ 16ಕ್ಕೆ ಏರಿದೆ. ಶುಕ್ರವಾರದ ದಿನ ಭಾರತಕ್ಕೆ ಲಭಿಸಿದ ಆರನೇ ಚಿನ್ನ ಇದಾಗಿದ್ದು, ಮಹಿಳಾ ಹಾಕಿ ತಂಡದ ಸಾಧನೆ 2028ರ ಒಲಿಂಪಿಕ್ಸ್ ಸಿದ್ಧತೆಯಲ್ಲೂ ಮಹತ್ವದ ಹೆಜ್ಜೆಯಾಗಿದೆ.

## 75 ಪದಕಗಳೊಂದಿಗೆ ಪಟ್ಟಿಯಲ್ಲಿ 5ನೇ ಸ್ಥಾನದ ಹಿರಿಮೆ

● ವಿಕ್ರಮ ವಾಹಿನಿ । ಗಿಫು

ಏಷ್ಯನ್ ಗೇಮ್ಸ್‌ನಲ್ಲಿ ಭಾರತ ಶುಕ್ರವಾರ ಒಂದೇ ನಿಮಿಷದ ಅಂತರದಲ್ಲಿ ಎರಡು ಚಿನ್ನದ ಪದಕಗಳನ್ನು ಗೆದ್ದು ಗಮನಾರ್ಹ ಸಾಧನೆ ಮಾಡಿತು. ಪುರುಷರ 65 ಕೆ.ಜಿ. ಫ್ರೀಸ್ಟೈಲ್ ಕುಸ್ತಿಯಲ್ಲಿ ಸುಜೀತ್ ಕಲ್ಕಲ್ ಚಿನ್ನ ಗೆದ್ದ ಬೆನ್ನಲ್ಲೇ, ಪುರುಷರ 80 ಕೆ.ಜಿ. ಬಾಕ್ಸಿಂಗ್ ವಿಭಾಗದಲ್ಲಿ ಅಂಕುಶ್ ಪಂಗಲ್ ಸ್ವರ್ಣ ಪದಕಕ್ಕೆ ಮುತ್ತಿಕ್ಕಿದರು.

ಇದಕ್ಕೂ ಮೊದಲು ಬಾಕ್ಸಿಂಗ್‌ನಲ್ಲಿ ಪರ್ವೀನ್ ಹೂಡಾ ಮಹಿಳೆಯರ 65 ಕೆ.ಜಿ. ಹಾಗೂ ಲವ್ಲಿನಾ ಬೊರ್ಗೊಹೈನ್ ಮಹಿಳೆಯರ 75 ಕೆ.ಜಿ. ವಿಭಾಗದಲ್ಲಿ ಚಿನ್ನ ಗೆದ್ದಿದ್ದರು. ಏಷ್ಯನ್ ಗೇಮ್ಸ್‌ನಲ್ಲಿ ಇದೇ ಮೊದಲ ಬಾರಿಗೆ ಭಾರತದ ಮೂವರು ಬಾಕ್ಸರ್‌ಗಳು ಚಾಂಪಿಯನ್ ಆಗಿರುವ ಸಾಧನೆ ದಾಖಲಾಯಿತು.

ಮಹಿಳೆಯರ ರಿಕರ್ವ್ ತಂಡ ಸ್ಪರ್ಧೆಯಲ್ಲೂ ಭಾರತ ಸ್ವರ್ಣ ಪದಕ ಗೆದ್ದುಕೊಂಡಿತು.

ಈ ಫಲಿತಾಂಶಗಳೊಂದಿಗೆ ಭಾರತದ ಒಟ್ಟು ಚಿನ್ನದ ಪದಕಗಳ ಸಂಖ್ಯೆ 15ಕ್ಕೆ ಏರಿದ್ದು, ಒಟ್ಟು 75 ಪದಕಗಳೊಂದಿಗೆ ಪದಕ ಪಟ್ಟಿಯಲ್ಲಿ 5ನೇ ಸ್ಥಾನಕ್ಕೇರಿದೆ.

ಇದೇ ವೇಳೆ ಮಹಿಳಾ ಹಾಕಿ ಫೈನಲ್‌ನಲ್ಲಿ ಭಾರತ ಹಾಗೂ ಚೀನಾ ಮುಖಾಮುಖಿಯಾಗಿದ್ದು, ಭಾರತ 1–0 ಮುನ್ನಡೆ ಕಾಯ್ದುಕೊಂಡಿತ್ತು.

## ಎಸ್ಐಆರ್ ವಿರೋಧಿಸಿ ಸಿಜೆಪಿ ಸೇರಿ ಹಲ ಸಂಘಟನೆಗಳ ಹೋರಾಟ; ದಿಲ್ಲಿಯಲ್ಲಿ 700ಕ್ಕೂ ಹೆಚ್ಚು ಮಂದಿ ವಶಕ್ಕೆ

● ವಿಕ್ರಮ ವಾಹಿನಿ । ನವದೆಹಲಿ/ಮುಂಬೈ

ಮುಖ್ಯ ಚುನಾವಣಾ ಆಯುಕ್ತ (ಸಿಇಸಿ) ಜ್ಞಾನೇಶ್ ಕುಮಾರ್ ರಾಜೀನಾಮೆಗೆ ಆಗ್ರಹಿಸಿ ಹಾಗೂ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ (ಎಸ್ಐಆರ್) ಪ್ರಕ್ರಿಯೆಯಲ್ಲಿ ಅಕ್ರಮ ನಡೆದಿದೆ ಎಂದು ಆರೋಪಿಸಿ ದೆಹಲಿ ಮತ್ತು ಮುಂಬೈನಲ್ಲಿ ಶುಕ್ರವಾರ ಪ್ರತಿಭಟನೆಗಳು ನಡೆದವು. ದೆಹಲಿಯಲ್ಲಿ ಜಂತರ್ ಮಂತರ್ ಕಡೆ ತೆರಳಲು ಯತ್ನಿಸಿದ 700ಕ್ಕೂ ಹೆಚ್ಚು ಪ್ರತಿಭಟನಾಕಾರರನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ.

**ಸಿಜೆಪಿಯ ಪ್ರಮುಖ ಬೇಡಿಕೆಗಳು:**
- ಸಿಇಸಿ ಜ್ಞಾನೇಶ್ ಕುಮಾರ್ ರಾಜೀನಾಮೆ ಹಾಗೂ ಕ್ರಿಮಿನಲ್ ವಿಚಾರಣೆ.
- ಎಸ್ಐಆರ್ ಪ್ರಕ್ರಿಯೆ ಸ್ಥಗಿತಗೊಳಿಸಿ ಹಿಂದಿನ ಮತದಾರರ ಪಟ್ಟಿಯನ್ನು ಮರುಸ್ಥಾಪಿಸುವುದು.
- ಮತದಾರರ ಪಟ್ಟಿ ಪರಿಷ್ಕರಣೆ ಕುರಿತು ಸ್ವತಂತ್ರ ತನಿಖೆ.
- ಚುನಾವಣಾ ಆಯುಕ್ತರ ನೇಮಕ ಪ್ರಕ್ರಿಯೆಯಲ್ಲಿ ಹೆಚ್ಚಿನ ಪಾರದರ್ಶಕತೆ.

ಕಾಕ್ರೋಚ್ ಜನತಾ ಪಾರ್ಟಿ (ಸಿಜೆಪಿ) ನೇತೃತ್ವದಲ್ಲಿ ಮುಂಬೈನ ಶಿವಾಜಿ ಪಾರ್ಕ್‌ನಲ್ಲಿ ಪ್ರತಿಭಟನೆ ನಡೆಯಿತು. ಸಿಇಸಿ ಜ್ಞಾನೇಶ್ ಕುಮಾರ್ ರಾಜೀನಾಮೆ ನೀಡಬೇಕು, ಎಸ್ಐಆರ್ ಪ್ರಕ್ರಿಯೆಯನ್ನು ತಡೆಹಿಡಿಯಬೇಕು ಮತ್ತು ಮತದಾರರ ಪಟ್ಟಿಗೆ ಸಂಬಂಧಿಸಿದ ಆರೋಪಗಳ ಕುರಿತು ಸ್ವತಂತ್ರ ತನಿಖೆ ನಡೆಸಬೇಕು ಎಂಬುದು ಸಂಘಟನೆಯ ಪ್ರಮುಖ ಬೇಡಿಕೆಗಳಾಗಿವೆ. ಸಿಇಸಿ ವಿರುದ್ಧ ಕ್ರಿಮಿನಲ್ ವಿಚಾರಣೆ ನಡೆಸಬೇಕು ಹಾಗೂ ಚುನಾವಣಾ ಆಯುಕ್ತರ ನೇಮಕ ಪ್ರಕ್ರಿಯೆಯನ್ನು ಹೆಚ್ಚು ಸ್ವತಂತ್ರ ಮತ್ತು ಪಾರದರ್ಶಕಗೊಳಿಸಬೇಕು ಎಂದೂ ಸಿಜೆಪಿ ಆಗ್ರಹಿಸಿದೆ. ಸಂಘಟನೆಯ ಸಂಸ್ಥಾಪಕ ಅಭಿಜೀತ್ ದಿಪ್ಕೆ, ಪ್ರತಿಭಟನೆಯನ್ನು ದೇಶದ ವಿವಿಧ ನಗರಗಳಿಗೆ ವಿಸ್ತರಿಸುವುದಾಗಿ ತಿಳಿಸಿದ್ದಾರೆ.

ದೆಹಲಿಯಲ್ಲಿ ಎಎಪಿ ನಾಯಕರು, ವಿದ್ಯಾರ್ಥಿ ಸಂಘಟನೆಗಳು ಹಾಗೂ ಇತರ ಸಂಘಟನೆಗಳ ಕಾರ್ಯಕರ್ತರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು. ಮಾಜಿ ಮುಖ್ಯಮಂತ್ರಿ ಆತಿಶಿ, ಎಎಪಿ ನಾಯಕ ಸೌರಭ್ ಭಾರದ್ವಾಜ್ ಸೇರಿದಂತೆ ಹಲವು ಮುಖಂಡರನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ.

ಜಂತರ್ ಮಂತರ್‌ನಲ್ಲಿ ಪ್ರತಿಭಟನೆಗೆ ಪೊಲೀಸರು ಅನುಮತಿ ನಿರಾಕರಿಸಿದ್ದ ಹಿನ್ನೆಲೆಯಲ್ಲಿ ನಿಷೇಧಾಜ್ಞೆ ಜಾರಿಗೊಳಿಸಿ ಭದ್ರತೆ ಹೆಚ್ಚಿಸಲಾಗಿತ್ತು. ಹಲವು ಪ್ರಮುಖ ರಸ್ತೆಗಳು ಮತ್ತು ಮೆಟ್ರೊ ನಿಲ್ದಾಣಗಳಲ್ಲಿ ಸಂಚಾರ ನಿರ್ಬಂಧ, ಮಾರ್ಗ ಬದಲಾವಣೆ ಹಾಗೂ ಬ್ಯಾರಿಕೇಡ್‌ಗಳನ್ನು ಅಳವಡಿಸಲಾಗಿತ್ತು.

## 'ಮತದಾರರ ಪಟ್ಟಿ ಮರುಪರಿಶೀಲನೆಗೆ ಆಯೋಗ ಸೂಚನೆ: ಇದು ಪ್ರಜಾಪ್ರಭುತ್ವದ ಗೆಲುವು'

● ವಿಕ್ರಮ ವಾಹಿನಿ । ಬೆಂಗಳೂರು

ವಿಶೇಷ ಸಮಗ್ರ ಪರಿಷ್ಕರಣೆ (ಎಸ್ಐಆರ್) ಬಳಿಕ ಮತದಾರರ ಪಟ್ಟಿಯಿಂದ ಹೊರಗುಳಿದಿರುವ ಅರ್ಹ ಮತದಾರರ ಹೆಸರುಗಳನ್ನು ಮರುಪರಿಶೀಲಿಸಿ ಸೇರ್ಪಡೆಗೊಳಿಸುವಂತೆ ಕೇಂದ್ರ ಚುನಾವಣಾ ಆಯೋಗ ಎಲ್ಲ ರಾಜ್ಯಗಳ ಮುಖ್ಯ ಚುನಾವಣಾಧಿಕಾರಿಗಳಿಗೆ ಸೂಚಿಸಿರುವುದು ದೇಶದ ಮತದಾರರ ಹಕ್ಕಿಗೆ ಸಂದ ಜಯ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೇಳಿದರು.

ವಿಧಾನಸೌಧದ ಬಳಿ ಶುಕ್ರವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಗುರುವಾರ ಕಾಂಗ್ರೆಸ್ ನಡೆಸಿದ ಪ್ರತಿಭಟನೆಯ ಬೆನ್ನಲ್ಲೇ ಚುನಾವಣಾ ಆಯೋಗ ಈ ನಿರ್ದೇಶನ ನೀಡಿರುವುದನ್ನು ಸ್ವಾಗತಿಸಿದರು. ಇದು ಕಾಂಗ್ರೆಸ್ ಪಕ್ಷ ಅಥವಾ ಸರ್ಕಾರದ ಗೆಲುವಲ್ಲ, ಕರ್ನಾಟಕ ಸೇರಿದಂತೆ ದೇಶದ ಎಲ್ಲ ಮತದಾರರ ಗೆಲುವು. ಅರ್ಹ ಮತದಾರರ ಹಕ್ಕು ಕಸಿಯುವ ಪ್ರಯತ್ನದ ವಿರುದ್ಧದ ಹೋರಾಟಕ್ಕೆ ಸಂದ ಜಯವಾಗಿದೆ ಎಂದು ಹೇಳಿದರು.

ಮತದಾರರ ಪಟ್ಟಿಯಿಂದ ಸಾಮೂಹಿಕವಾಗಿ ಹೆಸರು ತೆಗೆದುಹಾಕಿರುವ ದೂರುಗಳನ್ನು ಪರಿಶೀಲಿಸಬೇಕು. ಫಾರ್ಮ್–7 ಮೂಲಕ ಹೆಸರು ಅಳಿಸುವ ಪ್ರಕ್ರಿಯೆಯಲ್ಲಿ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು. ಮೊದಲ ಬಾರಿಗೆ ಮತದಾರರಾಗುವ ಯುವಕರ ಹೆಸರು ಸೇರ್ಪಡೆಗೆ ವಿಶೇಷ ಶಿಬಿರಗಳನ್ನು ಆಯೋಜಿಸಬೇಕು. ಕಾರ್ಮಿಕರು, ನಿರಾಶ್ರಿತರು ಹಾಗೂ ರಾತ್ರಿ ಆಶ್ರಯ ತಾಣಗಳಲ್ಲಿ ವಾಸಿಸುವವರಿಗೂ ಮತದಾರರ ಪಟ್ಟಿಯಲ್ಲಿ ಹೆಸರು ಸೇರ್ಪಡೆಗೊಳಿಸಲು ಬೂತ್ ಮಟ್ಟದ ಶಿಬಿರಗಳನ್ನು ನಡೆಸುವಂತೆ ಆಯೋಗ ಸೂಚಿಸಿದೆ ಎಂದು ತಿಳಿಸಿದರು.

**ಬಿಜೆಪಿ ವಿರುದ್ಧ ಆರೋಪ:** ಸಮಾಜದ ದುರ್ಬಲ ವರ್ಗಗಳು, ದಲಿತರು ಮತ್ತು ಅಲ್ಪಸಂಖ್ಯಾತರ ಮತಗಳನ್ನು ತೆಗೆದುಹಾಕಲು ಬಿಜೆಪಿ ಅರ್ಜಿಗಳನ್ನು ಸಲ್ಲಿಸಿರುವುದು ನಾಚಿಕೆಗೇಡಿನ ಸಂಗತಿ. ಸುಮಾರು 25 ಸಾವಿರ ಅರ್ಜಿಗಳನ್ನು ಸಲ್ಲಿಸಿರುವುದಾಗಿ ಬಿಜೆಪಿ ನಾಯಕರೇ ಒಪ್ಪಿಕೊಂಡಿದ್ದಾರೆ. ಮತದಾರರ ಹಕ್ಕು ಮೊಟಕುಗೊಳಿಸುವ ಇಂತಹ ಪ್ರಯತ್ನಗಳು ಪ್ರಜಾಪ್ರಭುತ್ವಕ್ಕೆ ವಿರುದ್ಧವಾಗಿವೆ ಎಂದು ಆರೋಪಿಸಿದರು.

ಮತಗಳ್ಳತನದ ಪಿತಾಮಹರು ತಾವೇ ಎಂದು ಒಪ್ಪಿಕೊಂಡಿರುವುದಕ್ಕೆ ಪ್ರತಿಪಕ್ಷ ನಾಯಕ ಆರ್. ಅಶೋಕ್ ಮತ್ತು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಅವರನ್ನು ಅಭಿನಂದಿಸುತ್ತೇನೆ. ಇದು ಕ್ರಿಮಿನಲ್ ಸಂಚಿನ ತಪ್ಪೊಪ್ಪಿಗೆಯಾಗಿದ್ದು, ಅವರ ವಿರುದ್ಧ ದೂರು ದಾಖಲಿಸಿ ಕ್ರಮ ಕೈಗೊಳ್ಳಬೇಕು. ಅಗತ್ಯವಿದ್ದರೆ ಬಂಧನವೂ ಆಗಬೇಕು ಎಂದು ಆಗ್ರಹಿಸಿದರು.

**ಮತದಾನದ ಹಕ್ಕು ರಕ್ಷಣೆ ಕರ್ತವ್ಯ:** ಮತದಾನದ ಹಕ್ಕು ದೇಶದ ಪ್ರತಿಯೊಬ್ಬ ಪ್ರಜೆಯ ಮೂಲಭೂತ ಹಕ್ಕುಗಳ ರಕ್ಷಣೆಯೊಂದಿಗೆ ಸಂಬಂಧ ಹೊಂದಿದೆ. ಮತದಾರರ ಹಕ್ಕು ಉಳಿಸುವುದು ಮುಖ್ಯಮಂತ್ರಿಯಾಗಿ ನನ್ನ ಕರ್ತವ್ಯ. ಈ ಅಕ್ರಮದ ಕುರಿತು ಕಾಂಗ್ರೆಸ್ ಕಾರ್ಯಕರ್ತರ ಜತೆಗೆ ವಿಶೇಷ ತಂಡ ಹಾಗೂ ಸಿಟಿಜನ್ಸ್ ಫೋರಂ ರಾಜ್ಯಾದ್ಯಂತ ಮಾಹಿತಿ ಸಂಗ್ರಹಿಸಿ ವರದಿ ನೀಡಿವೆ. ಅವುಗಳನ್ನು ಸ್ವತಂತ್ರ ಮೂಲಗಳಿಂದಲೂ ಪರಿಶೀಲಿಸಲಾಗಿದೆ ಎಂದು ಹೇಳಿದರು.

ಮತದಾರರ ಹಕ್ಕುಗಳ ರಕ್ಷಣೆಗೆ ರಾಹುಲ್ ಗಾಂಧಿ ಮತ್ತು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ನಡೆಸಿದ ಹೋರಾಟಕ್ಕೂ ಚುನಾವಣಾ ಆಯೋಗದ ನಿರ್ದೇಶನ ಜಯ ತಂದಿದೆ. ನನ್ನ ರಾಜೀನಾಮೆ ಕೇಳುವ ಬದಲು, 25 ಸಾವಿರ ಅರ್ಜಿಗಳನ್ನು ಸಲ್ಲಿಸಿರುವುದಾಗಿ ಒಪ್ಪಿಕೊಂಡಿರುವ ಬಿಜೆಪಿ ನಾಯಕರು ಅದರ ಬಗ್ಗೆ ಉತ್ತರಿಸಲಿ. ನನ್ನ ವಿರುದ್ಧ ಯಾವುದೇ ದೂರು ನೀಡಿದರೂ ಸ್ವಾಗತಿಸುತ್ತೇನೆ. ತಪ್ಪು ಸಾಬೀತಾದರೆ ಕಾನೂನು ಕ್ರಮ ಎದುರಿಸಲು ಸಿದ್ಧನಿದ್ದೇನೆ ಎಂದು ಸವಾಲು ಹಾಕಿದರು.



ಮತದಾರರ ಪಟ್ಟಿಯಲ್ಲಿನ ಅಕ್ರಮಗಳ ಕುರಿತು ರಾಷ್ಟ್ರಮಟ್ಟದಲ್ಲಿ ಚರ್ಚೆಯಾಗಬೇಕು. ಮಾಧ್ಯಮಗಳು ಸಾಮಾನ್ಯ ಜನರ ಮತದಾನದ ಹಕ್ಕುಗಳ ರಕ್ಷಣೆಗೆ ಧ್ವನಿಯಾಗಬೇಕು ಎಂದು ಮನವಿ ಮಾಡಿದರು.

# "ಬೈಕ್‌ನಲ್ಲಿ ಮೂವರು ಇದ್ದರೂ ವಿಮಾ ಪರಿಹಾರ ನಿರಾಕರಿಸುವಂತಿಲ್ಲ"

● ವಿಕ್ರಮ ವಾಹಿನಿ । ಬೆಂಗಳೂರು

ದ್ವಿಚಕ್ರ ವಾಹನದಲ್ಲಿ ನಿಯಮ ಮೀರಿ ಮೂವರು ಪ್ರಯಾಣಿಸುತ್ತಿದ್ದರು ಎಂಬ ಕಾರಣವೊಂದನ್ನೇ ಮುಂದಿಟ್ಟುಕೊಂಡು ಅಪಘಾತ ಪರಿಹಾರ ನೀಡುವ ಹೊಣೆಗಾರಿಕೆಯಿಂದ ವಿಮಾ ಕಂಪನಿ ನುಣುಚಿಕೊಳ್ಳಲು ಸಾಧ್ಯವಿಲ್ಲ ಎಂದು ಹೈಕೋರ್ಟ್ ಸ್ಪಷ್ಟಪಡಿಸಿದೆ.

ಹರಪನಹಳ್ಳಿ–ಹರಿಹರ ರಸ್ತೆಯಲ್ಲಿ ಜೀಪ್ ಹಾಗೂ ಬೈಕ್ ನಡುವೆ ಸಂಭವಿಸಿದ್ದ ಅಪಘಾತಕ್ಕೆ ಸಂಬಂಧಿಸಿದಂತೆ ನ್ಯಾಷನಲ್ ಇನ್ಶೂರೆನ್ಸ್ ಕಂಪನಿ ಸಲ್ಲಿಸಿದ್ದ ಮೇಲ್ಮನವಿಯನ್ನು ವಿಚಾರಿಸಿದ ನ್ಯಾಯಮೂರ್ತಿ ರವಿ ವಿ. ಹೊಸಮನಿ ಅವರ ಪೀಠ, ಹೆಚ್ಚುವರಿ ಸವಾರರಿದ್ದದ್ದು ಕಾನೂನು ಉಲ್ಲಂಘನೆಯಾಗಬಹುದು.

ಆದರೆ, ಅದೇ ಅಪಘಾತಕ್ಕೆ ನೇರ ಕಾರಣ ಎಂಬುದನ್ನು ಸಾಬೀತುಪಡಿಸುವ ಸಾಕ್ಷ್ಯವಿಲ್ಲದಿದ್ದರೆ ಅದನ್ನು ಸವಾರನ ನಿರ್ಲಕ್ಷ್ಯವೆಂದು ಪರಿಗಣಿಸ



ಬೈಕ್‌ನಲ್ಲಿ ಮೂವರು ಪ್ರಯಾಣಿಸಿದ್ದು ಕಾನೂನು ಉಲ್ಲಂಘನೆಯಾಗಬಹುದು. ಆದರೆ, ಅದೇ ಅಪಘಾತಕ್ಕೆ ಕಾರಣವೆಂದು ಸಾಬೀತಾಗದಿದ್ದರೆ ವಿಮಾ ಪರಿಹಾರ ನಿರಾಕರಿಸಲಾಗದು ಎಂದು ಹೈಕೋರ್ಟ್ ಸ್ಪಷ್ಟಪಡಿಸಿದೆ.

ಲಾಗದು ಎಂದು ಹೇಳಿದೆ. 2010ರ ನವೆಂಬರ್ 18ರಂದು ಮನ್ನಾ ಖಾನ್ ಸಾದಿಕ್ ಅವರು ಮತ್ತಿಬ್ಬರು ಹಿಂಬದಿ ಸವಾರರೊಂದಿಗೆ ಬೈಕ್‌ನಲ್ಲಿ ತೆರಳುತ್ತಿದ್ದಾಗ ಎದುರಿನಿಂದ ಬಂದ ಜೀಪ್ ಡಿಕ್ಕಿ ಹೊಡೆದಿತ್ತು. ಅಪಘಾತದಲ್ಲಿ ಬೈಕ್ ಸವಾರ ಮೃತಪಟ್ಟಿದ್ದು, ಇಬ್ಬರು ಹಿಂಬದಿ ಸವಾರರು ಗಾಯಗೊಂಡಿದ್ದರು.

ಈ ಪ್ರಕರಣದಲ್ಲಿ ಹರಪನಹಳ್ಳಿ ನ್ಯಾಯಾಲಯವು ಸಂತ್ರಸ್ತರಿಗೆ ಒಟ್ಟು 15.7 ಲಕ್ಷಕ್ಕೂ ಅಧಿಕ ಪರಿಹಾರವನ್ನು ಬಡ್ಡಿ ಸಮೇತ ಪಾವತಿಸುವಂತೆ ವಿಮಾ ಕಂಪನಿಗೆ ಆದೇಶಿಸಿತ್ತು. ಇದನ್ನು ಪ್ರಶ್ನಿಸಿ ವಿಮಾ ಸಂಸ್ಥೆ ಹೈಕೋರ್ಟ್ ಮೆಟ್ಟಿಲೇರಿತ್ತು.

ಜೀಪ್ ಚಾಲಕನ ಅತಿವೇಗ ಮತ್ತು ನಿರ್ಲಕ್ಷ್ಯವೇ ಅಪಘಾತಕ್ಕೆ ಕಾರಣವೆಂದು ತನಿಖೆಯಿಂದ ತಿಳಿದುಬಂದಿರುವ ಹಿನ್ನೆಲೆಯಲ್ಲಿ, ವಿಚಾರಣಾ ನ್ಯಾಯಾಲಯದ ಆದೇಶದಲ್ಲಿ ಹಸ್ತಕ್ಷೇಪದ ಅಗತ್ಯವಿಲ್ಲ ಎಂದು ಹೈಕೋರ್ಟ್ ಹೇಳಿ ವಿಮಾ ಕಂಪನಿಯ ಮೇಲ್ಮನವಿಯನ್ನು ವಜಾಗೊಳಿಸಿತು.

# *ಬಸ್ ಕೈಕೊಟ್ಟರೂ ನೆರವಿಲ್ಲ; ವಿದ್ಯಾರ್ಥಿನಿಗೆ 33,700 ರೂ ಪರಿಹಾರ*

**ಮಾರ್ಗಮಧ್ಯೆ ಸ್ಲೀಪರ್ ಬಸ್ ಕೆಟ್ಟು ನಿಂತರೂ ಪರ್ಯಾಯ ವ್ಯವಸ್ಥೆ ಮಾಡದ ಕೆಕೆಆರ್‌ಟಿಸಿ ವಿರುದ್ಧ ವಿದ್ಯಾರ್ಥಿನಿ ಕಾನೂನು ಹೋರಾಟ ನಡೆಸಿದ್ದು, ಖಾಸಗಿ ಕಾರಿಗೆ ಮಾಡಿದ 18,700 ವೆಚ್ಚ, ಮಾನಸಿಕ ಕಿರಿಕಿರಿ ಹಾಗೂ ಕಾನೂನು ಹೋರಾಟದ ವೆಚ್ಚ ಸೇರಿ ಒಟ್ಟು 33,700 ಪರಿಹಾರ ನೀಡುವಂತೆ ಜಿಲ್ಲಾ ಗ್ರಾಹಕರ ಆಯೋಗ ಆದೇಶಿಸಿದೆ.**

● ವಿಕ್ರಮ ವಾಹಿನಿ । ಕಲಬುರಗಿ

*ಮಾರ್ಗಮಧ್ಯೆ ಕೆಟ್ಟು ನಿಂತ ಕೆಕೆಆರ್‌ಟಿಸಿ ಸ್ಲೀಪರ್ ಬಸ್‌ನ ಪ್ರಯಾಣಿಕರಿಗೆ ಪರ್ಯಾಯ ವ್ಯವಸ್ಥೆ ಕಲ್ಪಿಸದ ಪ್ರಕರಣದಲ್ಲಿ ವಿದ್ಯಾರ್ಥಿನಿಯೊಬ್ಬರು ನಡೆಸಿದ ಕಾನೂನು ಹೋರಾಟಕ್ಕೆ ಜಯ ಸಿಕ್ಕಿದ್ದು, ಆಕೆಗೆ ಒಟ್ಟು ರೂ 33,700 ಪರಿಹಾರ ನೀಡುವಂತೆ ಜಿಲ್ಲಾ ಗ್ರಾಹಕರ ಆಯೋಗ ಕೆಕೆಆರ್‌ಟಿಸಿಗೆ ಆದೇಶಿಸಿದೆ.*

***ಪರೀಕ್ಷೆಗೆ ತೆರಳುತ್ತಿದ್ದ ವಿದ್ಯಾರ್ಥಿನಿ:*** *ಬೀದರ್ ಮೂಲದ ತೇಜಸ್ವಿನಿ ಬಸವರಾಜ ಅವರು 2025ರ ನ.16ರಂದು ಬೀದರ್‌ನಿಂದ ದಾವಣಗೆರೆಗೆ ಪ್ರಯಾಣಿಸಲು ಕೆಕೆಆರ್‌ಟಿಸಿ ಸ್ಲೀಪರ್ ಬಸ್‌ನಲ್ಲಿ ಟಿಕೆಟ್ ಕಾಯ್ದಿರಿಸಿದ್ದರು. ಮರುದಿನ ಬೆಳಗ್ಗೆ 6 ಗಂಟೆಗೆ ದಾವಣಗೆರೆಯಲ್ಲಿ ಪರೀಕ್ಷೆ ಇದ್ದ ಕಾರಣ, ಸಮಯಕ್ಕೆ ತಲುಪುವುದು ಅವರಿಗೆ ಅನಿವಾರ್ಯವಾಗಿತ್ತು.*

*ನಿಗದಿತ ಸಮಯಕ್ಕೆ ಹೊರಟ ಬಸ್ ಹುಮ್ನಾಬಾದ್ ಬಳಿ ಮಾರ್ಗಮಧ್ಯೆ ಕೆಟ್ಟು ನಿಂತಿದೆ. ಬಳಿಕ ಬಸ್ ಅನ್ನು ಕಲಬುರಗಿ ಡಿಪೋಗೆ ಕೊಂಡೊಯ್ದರೂ ದುರಸ್ತಿ ಸಾಧ್ಯವಾಗಲಿಲ್ಲ. ಪರೀಕ್ಷೆ ತಪ್ಪಿಹೋಗುವ ಆತಂಕದಲ್ಲಿದ್ದ ತೇಜಸ್ವಿನಿ, ಪರ್ಯಾಯ ಪ್ರಯಾಣದ ವ್ಯವಸ್ಥೆ ಮಾಡುವಂತೆ ಡಿಪೋ ಅಧಿಕಾರಿಗಳಿಗೆ ಮನವಿ ಮಾಡಿದರೂ ಸೂಕ್ತ ಸ್ಪಂದನೆ ದೊರೆಯಲಿಲ್ಲ ಎಂದು ದೂರಿನಲ್ಲಿ ತಿಳಿಸಿದ್ದರು.*

***ರೂ 18,700 ನೀಡಿ ಬಾಡಿಗೆ ಕಾರು:*** *ಪರೀಕ್ಷೆಗೆ ಸಮಯಕ್ಕೆ ತಲುಪುವ ಅನಿವಾರ್ಯತೆಯಿಂದ ತೇಜಸ್ವಿನಿ ಅವರು ಕಲಬುರಗಿಯಿಂದ ದಾವಣಗೆರೆಗೆ ರೂ 18,700 ಪಾವತಿಸಿ ಖಾಸಗಿ ಕಾರಿನಲ್ಲಿ ಪ್ರಯಾಣಿಸಬೇಕಾಯಿತು. ಕೆಕೆಆರ್‌ಟಿಸಿಯ ಸೇವಾ ನ್ಯೂನತೆಯಿಂದ ಹೆಚ್ಚುವರಿ ವೆಚ್ಚ ಹಾಗೂ ಮಾನಸಿಕ ತೊಂದರೆ ಅನುಭವಿಸಿದ್ದಾಗಿ ಆರೋಪಿಸಿ ಜಿಲ್ಲಾ ಗ್ರಾಹಕರ ಆಯೋಗದ ಮೊರೆ ಹೋದರು.*




***ಬಡ್ಡಿಯೊಂದಿಗೆ ಹಣ ಮರುಪಾವತಿ:*** *ಪ್ರಕರಣದ ವಿಚಾರಣೆ ನಡೆಸಿದ ಜಿಲ್ಲಾ ಗ್ರಾಹಕರ ಆಯೋಗದ ಅಧ್ಯಕ್ಷೆ ಮಾಲತಿ ಗುರುಣ್ಣ ಹಾಗೂ ಸದಸ್ಯ ಎಂ. ಲೋಕೇಶ್ ಅವರ ಪೀಠ, ಕೆಕೆಆರ್‌ಟಿಸಿಯ ಸೇವೆಯಲ್ಲಿ ನ್ಯೂನತೆ ಕಂಡು ಪರಿಹಾರ ನೀಡುವಂತೆ ಆದೇಶಿಸಿದೆ. ತೇಜಸ್ವಿನಿ ಅವರು ಬಾಡಿಗೆ ಕಾರಿಗೆ ಖರ್ಚು ಮಾಡಿದ ರೂ 18,700 ಅನ್ನು 2026ರ ಜ.3ರಿಂದ ಪಾವತಿಸುವ ದಿನದವರೆಗೆ ಶೇ.6ರ ಬಡ್ಡಿಯೊಂದಿಗೆ ಮರುಪಾವತಿಸಬೇಕು. ಮಾನಸಿಕ ಕಿರಿಕಿರಿ ಹಾಗೂ ಸೇವಾ ನ್ಯೂನತೆಗೆ ರೂ 10,000 ಮತ್ತು ಪ್ರಕರಣದ ಕಾನೂನು ಹೋರಾಟದ ವೆಚ್ಚವಾಗಿ ರೂ 5,000 ಪಾವತಿಸಬೇಕು ಎಂದು ಆಯೋಗ ನಿರ್ದೇಶಿಸಿದೆ. ಇದರೊಂದಿಗೆ ವಿದ್ಯಾರ್ಥಿನಿಗೆ ಒಟ್ಟು ರೂ 33,700 ಪರಿಹಾರ ದೊರೆಯಲಿದ್ದು, ಪ್ರಯಾಣಿಕರಿಗೆ ಪರ್ಯಾಯ ವ್ಯವಸ್ಥೆ ಕಲ್ಪಿಸುವಲ್ಲಿ ಸಾರಿಗೆ ಸಂಸ್ಥೆಗಳ ಹೊಣೆಗಾರಿಕೆಯನ್ನು ಈ ಆದೇಶ ಮತ್ತೊಮ್ಮೆ ಒತ್ತಿಹೇಳಿದೆ.*

www.VIKRAMAVAHINI.com || ಕನ್ನಡ ದಿನಪತ್ರಿಕೆ ||
PRGI NO: KARKAN/2018/78481
ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ
ವಿಕ್ರಮ ವಾಹಿನಿ

## ಸವಿ ವಾಹಿನಿ

ಮುಖದಲ್ಲೊಂದು ನಗು ಹಾಗೂ ಯಾರ ಮಾತಿಗೂ ತಲೆಕೆಡಿಸಿಕೊಳ್ಳದೆ ನಮ್ಮ ಇಚ್ಛೆಯಂತೆ ಬದುಕುವುದರಲ್ಲಿ ಜೀವನದ ನೆಮ್ಮದಿ ಅಡಗಿದೆ...

## ದಿನ ಪಂಚಾಂಗ

ಅಕ್ಟೋಬರ್, 03-2026, ಶನಿವಾರ ವರ್ಷ ಋತು,
ಭಾದ್ರಪದ ಮಾಸ, ಬಹುಳ ಪಕ್ಷ
ಸಪ್ತಮಿ ತಿಥಿ ಬೆ.10:03
ಆದ್ರಾ ನಕ್ಷತ್ರ ರಾ.4:07
ರಾಹುಕಾಲ ಬೆ 9:08-10:38
ಅನಧ್ಯಯನ ದ್ವಯ, ವಿಶ್ವ ಆವಾಸಸ್ಥಾನ ದಿನ,
ತಲಕಾಡು ಭಾರತೀಸ್ವಾಮಿ ಆರಾಧನೆ, ಚಿಕ್ಕೋಡಿ ।
ಡೋಣೆವಾಡಿ ಅಪ್ಪಾ ಮಹಾರಾಜ ಪುಣ್ಯದಿನ

## ಆರೋಗ್ಯ

# ಹೊಟ್ಟೆಯ ಕೊಬ್ಬು ಕರಗಿಸಲು ಕಾಮಕಸ್ತೂರಿ ಬೀಜ ಸಹಕಾರಿಯೇ?

ಕಾಮಕಸ್ತೂರಿ ಬೀಜ ಅಥವಾ ಸಬ್ಜಾ ಬೀಜಗಳನ್ನು ನೀರಿನಲ್ಲಿ ನೆನೆಸಿ ಸೇವಿಸುವುದು ಆರೋಗ್ಯಕರ ಆಹಾರದ ಒಂದು ಭಾಗವಾಗಬಹುದು. ಇದರಲ್ಲಿ ಆಹಾರದ ಫೈಬರ್ ಇರುವುದರಿಂದ ಹೊಟ್ಟೆ ಹೆಚ್ಚು ಸಮಯ ತುಂಬಿದ ಅನುಭವ ನೀಡಲು ಹಾಗೂ ಒಟ್ಟಾರೆ ಆಹಾರ ಸೇವನೆಯನ್ನು ನಿಯಂತ್ರಿಸಲು ನೆರವಾಗಬಹುದು. ಆದರೆ ಸಬ್ಜಾ ಬೀಜಗಳನ್ನು ಸೇವಿಸುವುದರಿಂದ ಮಾತ್ರ ಹೊಟ್ಟೆಯ ಸುತ್ತಲಿನ ಕೊಬ್ಬು ನೇರವಾಗಿ ಕರಗುತ್ತದೆ ಎಂಬುದಕ್ಕೆ ಸಾಕಷ್ಟು ವೈಜ್ಞಾನಿಕ ಪುರಾವೆಗಳಿಲ್ಲ.

**ಏನಿದು ಸಬ್ಜಾ ಬೀಜ?:** ಸಬ್ಜಾ ಬೀಜಗಳನ್ನು ತುಳಸಿ ಬೀಜ ಅಥವಾ ಕಾಮಕಸ್ತೂರಿ ಬೀಜ ಎಂದೂ ಕರೆಯಲಾಗುತ್ತದೆ. ಸಾಮಾನ್ಯವಾಗಿ ಈ ಬೀಜಗಳನ್ನು ನೀರಿನಲ್ಲಿ ನೆನೆಸಿ ಪಾನೀಯಗಳು ಹಾಗೂ ವಿವಿಧ ಆಹಾರಗಳಲ್ಲಿ ಬಳಸಲಾಗುತ್ತದೆ.



ನೀರಿನಲ್ಲಿ ನೆನೆಸಿದಾಗ ಬೀಜಗಳ ಸುತ್ತ ಜೆಲ್‌ನಂತಹ ಪದರ ರೂಪುಗೊಳ್ಳುತ್ತದೆ. ಇದರಲ್ಲಿರುವ ಫೈಬರ್ ಜೀರ್ಣಕ್ರಿಯೆಗೆ ನೆರವಾಗುವುದರ ಜತೆಗೆ ಹೊಟ್ಟೆ ತುಂಬಿದ ಅನುಭವ ನೀಡಬಹುದು.

**ತೂಕ ನಿಯಂತ್ರಣಕ್ಕೆ ಹೇಗೆ ನೆರವು?:** ಸಬ್ಜಾ ಬೀಜದಲ್ಲಿರುವ ಫೈಬರ್ ನೀರನ್ನು ಹೀರಿಕೊಳ್ಳುವುದರಿಂದ ಹೆಚ್ಚು ಸಮಯ ಹೊಟ್ಟೆ ತುಂಬಿರುವಂತೆ ಅನಿಸಬಹುದು. ಇದರಿಂದ ಪದೇಪದೇ ತಿನ್ನುವ ಅಭ್ಯಾಸ ಅಥವಾ ಅನಗತ್ಯ ತಿಂಡಿಗಳ ಸೇವನೆ ಕಡಿಮೆಯಾಗಲು ನೆರವಾಗಬಹುದು. ಹೀಗಾಗಿ ಒಟ್ಟಾರೆ ಕ್ಯಾಲೊರಿ ಸೇವನೆಯನ್ನು ನಿಯಂತ್ರಿಸುವ ಮೂಲಕ ತೂಕ ನಿರ್ವಹಣೆಯಲ್ಲಿ ಪರೋಕ್ಷವಾಗಿ ಸಹಕಾರಿಯಾಗಬಹುದು.

ಆದರೆ, ದೇಹದ ನಿರ್ದಿಷ್ಟ ಭಾಗದಲ್ಲಿರುವ ಕೊಬ್ಬನ್ನು ಮಾತ್ರ ಕರಗಿಸುವ ಆಹಾರ ಎಂಬುದು ವೈಜ್ಞಾನಿಕವಾಗಿ ಸಾಬೀತಾಗಿಲ್ಲ. ಹೊಟ್ಟೆಯ ಸುತ್ತಲಿನ ಕೊಬ್ಬು ಕಡಿಮೆಯಾಗಲು ಒಟ್ಟಾರೆ ದೇಹದ ತೂಕ ಮತ್ತು ಕೊಬ್ಬಿನ ಪ್ರಮಾಣ ಕಡಿಮೆಯಾಗಬೇಕು. ಇದಕ್ಕಾಗಿ ಸಮತೋಲಿತ ಆಹಾರ, ಸಾಕಷ್ಟು ಪ್ರೋಟೀನ್ ಮತ್ತು ಫೈಬರ್, ನಿಯಮಿತ ದೈಹಿಕ ಚಟುವಟಿಕೆ ಹಾಗೂ ಉತ್ತಮ ನಿದ್ರೆ ಮುಖ್ಯ.

**ಹೇಗೆ ಸೇವಿಸಬೇಕು?:** ಸಬ್ಜಾ ಬೀಜಗಳನ್ನು ಮೊದಲು ನೀರಿನಲ್ಲಿ ನೆನೆಸಿ ಬಳಿಕ ಸೇವಿಸುವುದು ಸಾಮಾನ್ಯ ವಿಧಾನ. ಒಣ ಬೀಜಗಳನ್ನು ಹೆಚ್ಚಿನ ಪ್ರಮಾಣದಲ್ಲಿ ನೇರವಾಗಿ ಸೇವಿಸುವುದನ್ನು ತಪ್ಪಿಸುವುದು ಸೂಕ್ತ. ಫೈಬರ್‌ಯುಕ್ತ ಆಹಾರ ಸೇವಿಸುವಾಗ ಸಾಕಷ್ಟು ನೀರು ಕುಡಿಯುವುದು ಸಹ ಮುಖ್ಯ.

ಆಹಾರದಲ್ಲಿ ಫೈಬರ್ ಪ್ರಮಾಣವನ್ನು ಏಕಾಏಕಿ ಹೆಚ್ಚಿಸಿದರೆ ಕೆಲವರಿಗೆ ಆರಂಭದಲ್ಲಿ ಹೊಟ್ಟೆ ಉಬ್ಬರ, ಗ್ಯಾಸ್ ಅಥವಾ ಅಸ್ವಸ್ಥತೆ ಉಂಟಾಗಬಹುದು. ಹೀಗಾಗಿ ಕಡಿಮೆ ಪ್ರಮಾಣದಿಂದ ಆರಂಭಿಸಿ ದೇಹದ ಪ್ರತಿಕ್ರಿಯೆಯನ್ನು ಗಮನಿಸುವುದು ಸೂಕ್ತ.

**ಎಲ್ಲರಿಗೂ ಸೂಕ್ತವೇ?:** ಹೆಚ್ಚಿನ ಜನರಿಗೆ ಸಬ್ಜಾ ಬೀಜಗಳನ್ನು ಆಹಾರದ ಭಾಗವಾಗಿ ಸೇವಿಸುವುದು ಸಾಮಾನ್ಯವಾಗಿ ಸಾಧ್ಯವಾದರೂ, ನಿರ್ದಿಷ್ಟ ಆರೋಗ್ಯ ಸಮಸ್ಯೆ ಹೊಂದಿರುವವರು ಅಥವಾ ನಿಯಮಿತವಾಗಿ ಔಷಧಿ ಸೇವಿಸುವವರು ಆಹಾರದಲ್ಲಿ ಹೆಚ್ಚಿನ ಪ್ರಮಾಣದ ಫೈಬರ್ ಸೇರಿಸುವ ಮುನ್ನ ವೈದ್ಯರು ಅಥವಾ ಪೌಷ್ಟಿಕ ತಜ್ಞರ ಸಲಹೆ ಪಡೆಯುವುದು ಒಳಿತು.

ಸಬ್ಜಾ ಬೀಜಗಳನ್ನು ತೂಕ ಇಳಿಸುವ ಔಷಧಿ ಅಥವಾ 'ಫ್ಯಾಟ್ ಬರ್ನರ್' ಎಂದು ಪರಿಗಣಿಸಬಾರದು. ತೂಕ ಮತ್ತು ಹೊಟ್ಟೆಯ ಕೊಬ್ಬನ್ನು ನಿಯಂತ್ರಿಸಲು ದೀರ್ಘಕಾಲಿಕ ಆರೋಗ್ಯಕರ ಆಹಾರ ಪದ್ಧತಿ, ನಿಯಮಿತ ವ್ಯಾಯಾಮ, ಸಮರ್ಪಕ ನಿದ್ರೆ ಹಾಗೂ ಅಗತ್ಯವಿದ್ದರೆ ಕ್ಯಾಲೊರಿ ನಿಯಂತ್ರಣವೇ ಪ್ರಮುಖವಾಗಿವೆ.

# 7,500 ಮತದಾರರ ಹೆಸರು ಅಳಿಸಲು ಯತ್ನ: ಎಫ್‌ಐಆರ್

1ನೇ ಪುಟದಿಂದ

ದೂರಿನ ಬಳಿಕ ಎಫ್‌ಐಆರ್ ದಾಖಲಿಸಲು ವಿಳಂಬವಾಗಿದೆ ಎಂದು ಕಾಂಗ್ರೆಸ್ ಮುಖಂಡರು ಆರೋಪಿಸಿ ಠಾಣೆ ಎದುರು ಪ್ರತಿಭಟನೆ ನಡೆಸಿದ್ದರು. ಬಳಿಕ ಪೊಲೀಸ್ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದು, ತಡರಾತ್ರಿ ಪ್ರಕರಣ ದಾಖಲಿಸಲಾಗಿದೆ. ಎಸ್‌ಐಆರ್ ವೇಳೆ ನಕಲಿ ಅಥವಾ ಸುಳ್ಳು ಫಾರ್ಮ್-7 ಅರ್ಜಿಗಳ ಮೂಲಕ ಮತದಾರರ ಹೆಸರು ಅಳಿಸಲು ಯತ್ನಿಸಿದ ಆರೋಪಗಳ ಕುರಿತು ರಾಜ್ಯದ ವಿವಿಧೆಡೆ ಪ್ರಕರಣಗಳು ದಾಖಲಾಗಿರುವ ಹಿನ್ನೆಲೆಯಲ್ಲಿ ತನಿಖೆ ಮುಂದುವರಿದಿದೆ.

ಪೊಲೀಸರು ಎಫ್‌ಐಆರ್ ದಾಖಲಿಸಿಕೊಂಡ ಬಳಿಕ, ವಿವಾದಿತ ಅರ್ಜಿಗಳ ಸ್ವರೂಪ, ಅವುಗಳನ್ನು ಸಲ್ಲಿಸಿದವರು ಹಾಗೂ ಮತದಾರರ ಹೆಸರುಗಳನ್ನು ಅಳಿಸಲು ನೀಡಲಾಗಿದ್ದ ದಾಖಲೆಗಳ ಕುರಿತು ಪರಿಶೀಲನೆ ನಡೆಸುವ ಸಾಧ್ಯತೆ ಇದೆ. ಅರ್ಜಿಗಳಲ್ಲಿನ ಮಾಹಿತಿಯ ಸತ್ಯಾಸತ್ಯತೆ ಮತ್ತು ಸಂಬಂಧಪಟ್ಟವರ ಪಾತ್ರವನ್ನು ತನಿಖೆಯ ಮೂಲಕ ಪತ್ತೆಹಚ್ಚಲಾಗುವುದು.

ಮತದಾರರ ಪಟ್ಟಿಯ ಪರಿಷ್ಕರಣೆ ಸಂದರ್ಭದಲ್ಲಿ ಆಕ್ಷೇಪಣೆಗಳು ಅಥವಾ ಹೆಸರು ಸೇರ್ಪಡೆ/ತೆಗೆದುಹಾಕುವ ಅರ್ಜಿಗಳನ್ನು ಸಲ್ಲಿಸಲು ಚುನಾವಣಾ ನಿಯಮಗಳಲ್ಲಿ ಅವಕಾಶವಿದೆ. ಆದರೆ, ಸುಳ್ಳು ಮಾಹಿತಿ ಅಥವಾ ನಕಲಿ ದಾಖಲೆಗಳ ಆಧಾರದಲ್ಲಿ ಅರ್ಜಿ ಸಲ್ಲಿಸಿರುವುದು ತನಿಖೆಯಲ್ಲಿ ಸಾಬೀತಾದರೆ ಸಂಬಂಧಪಟ್ಟವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳುವ ಸಾಧ್ಯತೆ ಇದೆ.

ಈ ಪ್ರಕರಣದ ಹಿನ್ನೆಲೆಯಲ್ಲಿ ಎಸ್‌ಐಆರ್ ಪ್ರಕ್ರಿಯೆಯಲ್ಲಿ ಸಲ್ಲಿಕೆಯಾಗಿರುವ ಅರ್ಜಿಗಳ ಪರಿಶೀಲನೆಗೆ ಹೆಚ್ಚಿನ ಮಹತ್ವ ಬಂದಿದೆ. ಬಳ್ಳಾರಿ ಪ್ರಕರಣದ ತನಿಖೆಯ ಪ್ರಗತಿ ಹಾಗೂ ಪರಿಶೀಲನೆಯ ಬಳಿಕ ಎಷ್ಟು ಅರ್ಜಿಗಳು ನಿಯಮಬದ್ಧವಾಗಿವೆ, ಎಷ್ಟು ಅರ್ಜಿಗಳಲ್ಲಿ ಅಕ್ರಮದ ಅಂಶಗಳಿವೆ ಎಂಬುದು ಸ್ಪಷ್ಟವಾಗಲಿದೆ.



ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ವಿಧಾನಸೌಧದ ಆವರಣದಲ್ಲಿ ರಾಷ್ಟ್ರಪಿತ ಮಹಾತ್ಮ ಗಾಂಧೀಜಿ ಹಾಗೂ ಮಾಜಿ ಪ್ರಧಾನಿ ಲಾಲ್ ಬಹಾದ್ದೂರ್ ಶಾಸ್ತ್ರಿ ಅವರ ಪ್ರತಿಮೆಗೆ ಪುಷ್ಪನಮನ ಸಲ್ಲಿಸಿದರು. ಸಚಿವ ಕೆ ಎಚ್ ಮುನಿಯಪ್ಪ, ದೆಹಲಿಯಲ್ಲಿ ರಾಜ್ಯ ಸರಕಾರದ ವಿಶೇಷ ಪ್ರತಿನಿಧಿ ಟಿ.ಬಿ.ಜಯಚಂದ್ರ, ಹಿರಿಯ ಮುಖಂಡ, ಶಾಸಕ ಅಪ್ಪಾಜಿ ನಾಡಗೌಡ ಮತ್ತಿತರರು ಉಪಸ್ಥಿತರಿದ್ದರು.

# 'ನೈಸ್ ಯೋಜನೆ ಖರೀದಿಗೆ ಡಿಕೆಶಿ-ಉದ್ಯಮಿ ಡೀಲ್'

## ಮಹೇಶ್ ರೆಡ್ಡಿ ಜತೆ ಸೇರಿ ಭೂಮಿ ಲೂಟಿಗೆ ಸಂಚು; ಆರೋಪ ಸಾಬೀತಾದರೆ ರಾಜಕೀಯ ನಿವೃತ್ತಿ: ಕೇಂದ್ರ ಸಚಿವ

● ವಿಕ್ರಮ ವಾಹಿನಿ । ಬೆಂಗಳೂರು

ನೈಸ್ ಯೋಜನೆ ವ್ಯಾಪ್ತಿಯ ಭೂಮಿಯನ್ನು ಲೂಟಿ ಮಾಡಲು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಹೈದರಾಬಾದ್ ಮೂಲದ ಉದ್ಯಮಿ ಮಹೇಶ್ ರೆಡ್ಡಿ ಸೇರಿದಂತೆ ಕೆಲವರೊಂದಿಗೆ ಸೇರಿ ಸಂಚು ರೂಪಿಸಿದ್ದಾರೆ ಎಂದು ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಆರೋಪಿಸಿದರು. ನೈಸ್ ಯೋಜನೆಯಿಂದ ಭೂಮಿ ಕಳೆದುಕೊಂಡವರ ಅಹವಾಲು ಸ್ವೀಕರಿಸಿದ ಬಳಿಕ ಅವರು ಸುದ್ದಿಗಾರರೊಂದಿಗೆ ಮಾತನಾಡಿದರು.

ಮಾದಾವರದಿಂದ ಎಲೆಕ್ಟ್ರಾನಿಕ್ ಸಿಟಿವರೆಗೆ ನೈಸ್ ರಸ್ತೆಯುದ್ದಕ್ಕೂ ಸಂಚರಿಸಿದ ಕುಮಾರಸ್ವಾಮಿ, 30ಕ್ಕೂ ಹೆಚ್ಚು ಗ್ರಾಮಗಳ ಭೂ ಸಂತ್ರಸ್ತರನ್ನು ಭೇಟಿ ಮಾಡಿ ಅಹವಾಲು ಆಲಿಸಿದರು. ರೈತರ ಭೂಮಿಯನ್ನು ವಾಪಸ್ ಕೊಡಿಸುವವರೆಗೆ ಹೋರಾಟ ಮುಂದುವರಿಸುವುದಾಗಿ ಭರವಸೆ ನೀಡಿದರು.

ಮಹೇಶ್ ರೆಡ್ಡಿ ಯಾರು, ಅವರೊಂದಿಗೆ ಎಷ್ಟು ಮೊತ್ತದ ವ್ಯವಹಾರ ನಡೆಯುತ್ತಿದೆ ಎಂಬ ದಾಖಲೆಗಳು ತಮ್ಮ ಬಳಿ ಇವೆ. ಸೂಕ್ತ ಸಮಯದಲ್ಲಿ ಅವುಗಳನ್ನು ಬಿಡುಗಡೆ ಮಾಡುವುದಾಗಿ ಹೇಳಿದ ಅವರು, ನೈಸ್ ಯೋಜನೆಯ ಭೂಮಿಯನ್ನು ರಿಯಲ್ ಎಸ್ಟೇಟ್ ಉದ್ದೇಶಕ್ಕೆ ಬಳಸಲಾಗುತ್ತಿದೆ ಎಂದು ಆರೋಪಿಸಿದರು.

ಬಿ.ಎಂ. ಕಾವಲ್ ಪ್ರದೇಶದಲ್ಲಿ ಸುಮಾರು 200ರಿಂದ 300 ಎಕರೆ ಭೂಮಿ ಖರೀದಿಸಿರುವ ಬಗ್ಗೆ ಪ್ರಶ್ನಿಸಿದ ಕುಮಾರಸ್ವಾಮಿ, ನೈಸ್ ಯೋಜನೆಗೆ ಸಂಬಂಧಿಸಿದ ಭೂಮಿಯ ವಹಿವಾಟುಗಳ ಕುರಿತು ಸಮಗ್ರ ತನಿಖೆ ನಡೆಯಬೇಕು ಎಂದು ಒತ್ತಾಯಿಸಿದರು. ನೈಸ್ ಯೋಜನೆಗೆ ಸಂಬಂಧಿಸಿದಂತೆ ತಾವು ಬಿಡುಗಡೆ ಮಾಡಿರುವ ದಾಖಲೆಗಳು ಮೊದಲ ಹಂತದ್ದಾಗಿದ್ದು, ಮುಂದಿನ ದಿನಗಳಲ್ಲಿ ಇನ್ನಷ್ಟು ದಾಖಲೆಗಳನ್ನು ಬಿಡುಗಡೆ ಮಾಡುವುದಾಗಿ ತಿಳಿಸಿದರು.

**ಭೂಮಿ ಖರೀದಿಸಿದ್ದರೆ ರಾಜಕೀಯ ನಿವೃತ್ತಿ:** ನೈಸ್ ಯೋಜನೆ ವ್ಯಾಪ್ತಿಯಲ್ಲಿ ತಾವು ಯಾವುದೇ ಭೂಮಿ ಖರೀದಿಸಿರುವುದನ್ನು ಸಾಬೀತುಪಡಿಸಿದರೆ ರಾಜಕೀಯ ನಿವೃತ್ತಿ ಪಡೆಯುವುದಾಗಿ ಕುಮಾರಸ್ವಾಮಿ ಸವಾಲು ಹಾಕಿದರು. ಬಿಡದಿಯಲ್ಲಿ ರಾಜಕೀಯಕ್ಕೆ



ಬರುವ ಮೊದಲೇ 44 ಎಕರೆ ಭೂಮಿ ಖರೀದಿಸಿದ್ದು, ಅಲ್ಲಿ ಕೃಷಿ ಹಾಗೂ ಪಶುಸಂಗೋಪನೆ ನಡೆಸುತ್ತಿರುವುದಾಗಿ ಹೇಳಿದರು. ಹೋರಾಟವನ್ನು ಶಾಂತಿಯುತವಾಗಿ ಮುಂದುವರಿಸಿ, ಮುಂದಿನ ಹಂತದ ಬಗ್ಗೆ ಶೀಘ್ರದಲ್ಲೇ ಸಭೆ ನಡೆಸಲಾಗುವುದು ಎಂದು ಅವರು ಹೇಳಿದರು.

ನೈಸ್ ಯೋಜನೆಯ ಗುತ್ತಿಗೆದಾರ ಅಶೋಕ್ ಖೇಣಿ ವಿರುದ್ಧವೂ ಆರೋಪ ಮಾಡಿದ ಕುಮಾರಸ್ವಾಮಿ, ಅವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು. ನೈಸ್ ಯೋಜನೆ ಕುರಿತು ರಾಜ್ಯ ಹೈಕೋರ್ಟ್ ವ್ಯಕ್ತಪಡಿಸಿರುವ ಅಭಿಪ್ರಾಯಗಳಿಗೆ ಸಂಬಂಧಿಸಿದ ಅರ್ಜಿ ಸುಪ್ರೀಂ ಕೋರ್ಟ್‌ನಲ್ಲಿ ವಿಚಾರಣೆಗೆ ಬರಲಿದ್ದು, ಅದರ ಬಳಿಕ ಮುಂದಿನ ಹೋರಾಟದ ರೂಪುರೇಷೆ ನಿರ್ಧರಿಸಲಾಗುವುದು ಎಂದರು. ಸುಪ್ರೀಂ ಕೋರ್ಟ್‌ನ ಅ.5ರ ವಾರದ ವಿಚಾರಣೆಗಳ ಪಟ್ಟಿ ಪ್ರಕಟವಾಗಿರುವುದೂ ಅಧಿಕೃತವಾಗಿ ಲಭ್ಯವಿದೆ.

ನೈಸ್ ವಿಚಾರವಾಗಿ ಕುಮಾರಸ್ವಾಮಿ ಮತ್ತು ಶಿವಕುಮಾರ್ ನಡುವೆ ಇತ್ತೀಚಿನ ದಿನಗಳಲ್ಲಿ ಆರೋಪ-ಪ್ರತ್ಯಾರೋಪಗಳು ತೀವ್ರಗೊಂಡಿದ್ದು, ಕುಮಾರಸ್ವಾಮಿ ಅವರ ಆರೋಪಗಳನ್ನು ಶಿವಕುಮಾರ್ ಈಗಾಗಲೇ ತಳ್ಳಿಹಾಕಿದ್ದಾರೆ.

# ಗಾಂಧೀಜಿ ಹೆಸರು, ವಿಚಾರಧಾರೆ ಅಳಿಸಲು ಯಾರಿಂದಲೂ ಸಾಧ್ಯವಿಲ್ಲ: ಡಿಕೆಶಿ

● ವಿಕ್ರಮ ವಾಹಿನಿ । ಬೆಂಗಳೂರು

ಮಹಾತ್ಮ ಗಾಂಧೀಜಿ ಅವರನ್ನು ಇಡೀ ವಿಶ್ವವೇ ಒಪ್ಪಿಕೊಂಡಿದ್ದು, ಅವರ ಹೆಸರು ಹಾಗೂ ವಿಚಾರಧಾರೆಯನ್ನು ಯಾರಿಂದಲೂ ಅಳಿಸಲು ಸಾಧ್ಯವಿಲ್ಲ ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೇಳಿದರು.

ಗಾಂಧಿ ಜಯಂತಿ ಅಂಗವಾಗಿ ಶುಕ್ರವಾರ ವಿಧಾನಸೌಧದ ಆವರಣದಲ್ಲಿರುವ ಗಾಂಧಿ ಪ್ರತಿಮೆಗೆ ಪುಷ್ಪನಮನ ಸಲ್ಲಿಸಿದ ಅವರು, ಕೆಪಿಸಿಸಿ ಕಚೇರಿಯಲ್ಲಿ ಪೌರಕಾರ್ಮಿಕರನ್ನು ಸನ್ಮಾನಿಸಿದರು. ಬಳಿಕ ಸರ್ಕಾರಿ ಕಲಾ ಕಾಲೇಜಿನಲ್ಲಿ ಗಾಂಧಿ ಸ್ಮಾರಕ ಸ್ತಂಭ ಅನಾವರಣಗೊಳಿಸಿ, ಗಾಂಧಿ ಭವನದಲ್ಲಿ ನಡೆದ ಮಹಾತ್ಮ ಗಾಂಧಿ ಸೇವಾ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಮಾತನಾಡಿದರು.

ಗಾಂಧೀಜಿ ಭಾರತದ ಆತ್ಮದಂತಿದ್ದು, ವಿಶ್ವಕ್ಕೆ ಶಾಂತಿ, ಸಹಬಾಳ್ವೆ ಹಾಗೂ ಅಹಿಂಸೆಯ ಸಂದೇಶ ನೀಡಿದ ಶ್ರೇಷ್ಠ ನಾಯಕ. ವ್ಯಕ್ತಿ ಮರೆಯಾದರೂ ಅವರ ವಿಚಾರಧಾರೆಗಳು ಉಳಿಯುತ್ತವೆ. ವಿಶ್ವದ ಹಲವು ದೇಶಗಳಲ್ಲಿ ಗಾಂಧೀಜಿ ಪ್ರತಿಮೆಗಳಿದ್ದು, ಅವರ ಚಿಂತನೆಗಳ ಕುರಿತು ವಿಶ್ವವಿದ್ಯಾಲಯಗಳಲ್ಲಿ




ಅಧ್ಯಯನ ನಡೆಯುತ್ತಿದೆ ಎಂದು ಹೇಳಿದರು.

ಗಾಂಧೀಜಿ ತತ್ವಗಳನ್ನು ಯುವ ಪೀಳಿಗೆ ಗಂಭೀರವಾಗಿ ಅರಿತು ಅಹಿಂಸೆ ಹಾಗೂ ಶಾಂತಿಯ ಮಾರ್ಗವನ್ನು ಅಳವಡಿಸಿಕೊಳ್ಳಬೇಕು. ಯಾವುದೇ ರಾಜಕೀಯ ಪಕ್ಷದವರೂ ಗಾಂಧಿ ವಿಚಾರಧಾರೆಯನ್ನು ಒಪ್ಪಿಕೊಳ್ಳಲು ಹಿಂಜರಿಯಬಾರದು ಎಂದು ಶಿವಕುಮಾರ್ ಹೇಳಿದರು.

"ಕುರ್ಚಿಯಿಂದ ದೊರೆಯುವ ಗೌರವ ಶಾಶ್ವತವಲ್ಲ; ಸೇವೆಯಿಂದ ದೊರೆಯುವ ಗೌರವ ಶಾಶ್ವತ" ಎಂಬ ಗಾಂಧೀಜಿ ಅವರ ಸಂದೇಶವನ್ನು ಸ್ಮರಿಸಿದ ಅವರು, ಸಂಪೂರ್ಣ ಶ್ರಮದಿಂದ ಕೆಲಸ ಮಾಡುವುದೇ ಯಶಸ್ಸಿನ ದಾರಿ ಎಂದರು. ಸ್ವಾತಂತ್ರ್ಯಕ್ಕಾಗಿ ನಿರ್ಭೀತರಾಗಿರಬೇಕು ಎಂಬ ಗಾಂಧೀಜಿ ಅವರ ಆಶಯದಂತೆ ತಾವು ಯಾವುದೇ ಕೆಲಸಕ್ಕೂ ಹೆದರುವವರಲ್ಲ ಎಂದು ಹೇಳಿದರು.

ತಮ್ಮ ರಾಜಕೀಯ ಪ್ರವೇಶಕ್ಕೂ ಗಾಂಧಿವಾದಿ ಎಸ್. ಕರಿಯಪ್ಪ ಅವರ ಪ್ರೇರಣೆ ಕಾರಣ ಎಂದು ಶಿವಕುಮಾರ್ ಸ್ಮರಿಸಿದರು. ಬಾಲ್ಯದಲ್ಲಿ ಕರಿಯಪ್ಪ ಅವರನ್ನು ಭೇಟಿಯಾಗಿದ್ದ ಸಂದರ್ಭದಲ್ಲಿ ಅವರ ಸರಳತೆ ಹಾಗೂ ಜನರು ನೀಡುತ್ತಿದ್ದ ಗೌರವದಿಂದ ಪ್ರಭಾವಿತರಾಗಿ, ಜನಸೇವೆಯ ಉದ್ದೇಶದಿಂದ ರಾಜಕೀಯಕ್ಕೆ ಬರಬೇಕೆಂಬ ಆಲೋಚನೆ ಮೂಡಿತು ಎಂದರು. ದೇಶಕ್ಕೆ ಗಾಂಧೀಜಿ ಅವರ ತತ್ವಗಳನ್ನು ಅರಿತಿರುವ ಯುವ ನಾಯಕತ್ವದ ಅಗತ್ಯವಿದೆ. ನಾಯಕರನ್ನು ಬೆಳೆಸುವ ಮೂಲಕ ದೇಶದ ಪ್ರಜಾಪ್ರಭುತ್ವವನ್ನು ಬಲಪಡಿಸುವ ಕೆಲಸ ಮುಂದುವರಿಯಬೇಕು ಎಂದು ಅವರು ಹೇಳಿದರು.

# ಎಸ್‌ಐಆರ್‌ಗೆ ಕಾಂಗ್ರೆಸ್ ಭಯಪಡುತ್ತಿರುವುದೇಕೆ?: ಸಿ.ಟಿ.ರವಿ

● ವಿಕ್ರಮ ವಾಹಿನಿ । ಬೆಂಗಳೂರು

ಮತದಾರರ ಪಟ್ಟಿ ಸಮಗ್ರ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆ ಬಗ್ಗೆ ಕಾಂಗ್ರೆಸ್‌ಗೆ ಭೀತಿ ಏಕೆ ಎಂದು ವಿಧಾನ ಪರಿಷತ್ ಸದಸ್ಯ ಸಿ.ಟಿ. ರವಿ ಪ್ರಶ್ನಿಸಿದರು.

ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಎಸ್‌ಐಆರ್ ಬಿಜೆಪಿ ಸರ್ಕಾರದ ಅವಧಿಯಲ್ಲಿ ಆರಂಭವಾದ ಪ್ರಕ್ರಿಯೆಯಲ್ಲ. ದೇಶದಲ್ಲಿ ಈ ಹಿಂದೆ ಹಲವು ಬಾರಿ ನಡೆದಿರುವ ಕಾನೂನುಬದ್ಧ ಪ್ರಕ್ರಿಯೆಯಾಗಿದೆ. ಮೃತರು, ಸ್ಥಳಾಂತರಗೊಂಡವರು, ದ್ವಂದ್ವ ಮತದಾರರು ಹಾಗೂ ಅನರ್ಹರ ಹೆಸರುಗಳನ್ನು ಪರಿಶೀಲಿಸಿ ಮತದಾರರ ಪಟ್ಟಿಯನ್ನು ಪರಿಷ್ಕರಿಸುವುದು ಇದರ ಉದ್ದೇಶ ಎಂದರು.

ಎಸ್‌ಐಆರ್ ಪ್ರಕ್ರಿಯೆಯ ಬಹುತೇಕ ಕಾರ್ಯವನ್ನು ರಾಜ್ಯ ಸರ್ಕಾರದ ಕಂದಾಯ, ಶಿಕ್ಷಣ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳೇ ನಿರ್ವಹಿಸುತ್ತಾರೆ. ಹೀಗಿರುವಾಗ ಪ್ರಕ್ರಿಯೆಯಲ್ಲಿ ಲೋಪವಾದರೆ ರಾಜ್ಯ ಸರ್ಕಾರವೇ ಹೊಣೆಗಾರಿಕೆಯಿಂದ ಉತ್ತರಿಸಬೇಕು ಎಂದು ಹೇಳಿದರು.

ಬಾಂಗ್ಲಾದೇಶದ ಅಕ್ರಮ ವಲಸಿಗರು ಸೇರಿದಂತೆ ಅನರ್ಹರು ಮತದಾರರ ಪಟ್ಟಿಗೆ ಸೇರ್ಪಡೆಯಾಗಿರುವ ಬಗ್ಗೆ ದೂರುಗಳಿದ್ದರೆ ಅವುಗಳನ್ನು ಪರಿಶೀಲಿಸಬೇಕು. ಬೆಂಗಳೂರು ಸೇರಿದಂತೆ ವಿವಿಧೆಡೆ ಅಕ್ರಮ ವಲಸಿಗರು ಇರುವ ಕುರಿತು ವರದಿಗಳಿದ್ದರೂ ರಾಜ್ಯ ಸರ್ಕಾರ ವಿಶೇಷ ತನಿಖೆ ನಡೆಸಿಲ್ಲ ಎಂದು ಆರೋಪಿಸಿದರು.

ಫಾರ್ಮ್-6 ಮೂಲಕ ಅರ್ಹ ಹೊಸ ಮತದಾರರು ಹೆಸರು ನೋಂದಾಯಿಸಿಕೊಳ್ಳಬಹುದು. ಫಾರ್ಮ್-7 ಮೂಲಕ ಮತದಾರರ ಪಟ್ಟಿಯಲ್ಲಿರುವ ಹೆಸರುಗಳ ಕುರಿತು ಆಕ್ಷೇಪಣೆ ಸಲ್ಲಿಸಬಹುದು. ಅರ್ಜಿ ಸಲ್ಲಿಸಿದ ಮಾತ್ರಕ್ಕೆ ಯಾವುದೇ ಹೆಸರು ತೆಗೆದುಹಾಕುವುದಿಲ್ಲ. ಬಿಎಲ್‌ಒ ಹಾಗೂ ಸಂಬಂಧಪಟ್ಟ ಚುನಾವಣಾಧಿಕಾರಿಗಳು ಪರಿಶೀಲನೆ ನಡೆಸಿ ಕ್ರಮ ಕೈಗೊಳ್ಳಬೇಕು ಎಂದು ತಿಳಿಸಿದರು.

ಎಸ್‌ಐಆರ್ ಕುರಿತು ದೂರು ನೀಡುವವರ ವಿರುದ್ಧ ಎಫ್‌ಐಆರ್ ದಾಖಲಿಸುವ ಬದಲು, ಸಲ್ಲಿಕೆಯಾಗಿರುವ ಆಕ್ಷೇಪಣೆಗಳ ಸತ್ಯಾಸತ್ಯತೆ ಪರಿಶೀಲಿಸಬೇಕು. ಚುನಾವಣಾ ಆಯೋಗದ ಅಧಿಕಾರಿಗಳು ಯಾವುದೇ ರಾಜಕೀಯ ಒತ್ತಡಕ್ಕೆ ಮಣಿಯದೆ ನಿಯಮಾನುಸಾರ ಕಾರ್ಯನಿರ್ವಹಿಸಬೇಕು ಎಂದು ಆಗ್ರಹಿಸಿದರು.

ಮತದಾರರ ಪಟ್ಟಿಯಲ್ಲಿನ ಕೆಲವು ಹೆಸರುಗಳು, ವಯಸ್ಸು ಹಾಗೂ ನೋಂದಣಿ ಕುರಿತು ಬಿಜೆಪಿ ಆಕ್ಷೇಪಣೆಗಳನ್ನು ಸಲ್ಲಿಸಿದೆ. ಇವುಗಳನ್ನು ಪರಿಶೀಲಿಸುವುದು ಚುನಾವಣಾ ಅಧಿಕಾರಿಗಳ ಕರ್ತವ್ಯ. ಮಸೀದಿ, ಕಲ್ಯಾಣ ಮಂಟಪ ಸೇರಿದಂತೆ ವಿವಿಧೆಡೆ ಸಾಮೂಹಿಕವಾಗಿ ಎನ್ಯೂಮರೇಷನ್ ಫಾರಂ ವಿತರಿಸಿರುವ ಬಗ್ಗೆ ದೂರುಗಳಿದ್ದರೆ ಅವುಗಳನ್ನೂ ಪರಿಶೀಲಿಸಬೇಕು ಎಂದು ಹೇಳಿದರು.

ಇದೇ ವೇಳೆ, ಇವಿಎಂ ಕುರಿತು ಕಾಂಗ್ರೆಸ್ ನಾಯಕರು ಮಾಡಿರುವ ಆರೋಪಗಳಿಗೂ ಸಾಕ್ಷ್ಯ ಒದಗಿಸಿಲ್ಲ ಎಂದು ಟೀಕಿಸಿದ ಸಿ.ಟಿ. ರವಿ, ಸಾಂವಿಧಾನಿಕ ಸಂಸ್ಥೆಗಳ ಬಗ್ಗೆ ಆಧಾರರಹಿತ ಅನುಮಾನ ಮೂಡಿಸುವುದು ಸರಿಯಲ್ಲ ಎಂದರು. ಡಿ.ಕೆ. ಶಿವಕುಮಾರ್ ಸೇರಿದಂತೆ ಕಾಂಗ್ರೆಸ್ ನಾಯಕರು ತಮ್ಮ ಹಿಂದಿನ ಆರೋಪಗಳಿಗೆ ಸಾರ್ವಜನಿಕವಾಗಿ ಸ್ಪಷ್ಟನೆ ನೀಡಬೇಕು ಎಂದು ಆಗ್ರಹಿಸಿದರು.

ಅಕ್ರಮ ಮತದಾರರ ಕುರಿತು ದೂರುಗಳಿದ್ದರೆ ಸಾವಿರಾರು ಆಕ್ಷೇಪಣೆಗಳನ್ನಾದರೂ ಸಲ್ಲಿಸುತ್ತೇವೆ. ಅರ್ಹ ಮತದಾರರ ಹಕ್ಕು ರಕ್ಷಿಸುವುದರ ಜತೆಗೆ ಅನರ್ಹ ಹೆಸರುಗಳನ್ನು ನಿಯಮಾನುಸಾರ ಪರಿಶೀಲಿಸಿ ಪಟ್ಟಿಯನ್ನು ಶುದ್ಧೀಕರಿಸಬೇಕು ಎಂದು ಹೇಳಿದರು.

## 'ದಲಿತರಿಗೆ ರಕ್ಷಣೆ ನೀಡಲು ಸಾಧ್ಯವಾಗದಿದ್ದರೆ ಸಿಎಂ ರಾಜೀನಾಮೆ ನೀಡಲಿ'

● ವಿಕ್ರಮ ವಾಹಿನಿ । ಬೆಂಗಳೂರು

ರಾಜ್ಯದಲ್ಲಿ ಪರಿಶಿಷ್ಟ ಜಾತಿಯವರ ಮೇಲಿನ ದೌರ್ಜನ್ಯ ಹಾಗೂ ಕೊಲೆ ಪ್ರಕರಣಗಳು ಹೆಚ್ಚುತ್ತಿದ್ದು, ಸರ್ಕಾರ ಅವರಿಗೆ ರಕ್ಷಣೆ ನೀಡಲು ವಿಫಲವಾಗಿದೆ ಎಂದು ಆರೋಪಿಸಿರುವ ಮಾಜಿ ಕೇಂದ್ರ ಸಚಿವ ಎ. ನಾರಾಯಣಸ್ವಾಮಿ, ಪರಿಸ್ಥಿತಿ ನಿಯಂತ್ರಿಸಲು ಸಾಧ್ಯವಾಗದಿದ್ದರೆ ಮುಖ್ಯಮಂತ್ರಿ ಹಾಗೂ ಗೃಹ ಸಚಿವರು ರಾಜೀನಾಮೆ ನೀಡಬೇಕು ಎಂದು ಆಗ್ರಹಿಸಿದರು. ಮಲ್ಲೇಶ್ವರದ ಬಿಜೆಪಿ ರಾಜ್ಯ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಶುಕ್ರವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಆಡಳಿತ ಮತ್ತು ಭ್ರಷ್ಟಾಚಾರದ ವಿರುದ್ಧ ಧ್ವನಿ ಎತ್ತಿದ್ದ ಮಾದಿಗ ಸಮುದಾಯದ ಕಾರ್ಯಕರ್ತನ ಕೊಲೆ ಪ್ರಕರಣದಲ್ಲಿ ಒಬ್ಬ ಆರೋಪಿಯನ್ನು ಮಾತ್ರ ಬಂಧಿಸಲಾಗಿದ್ದು, ಉಳಿದವರ ವಿರುದ್ಧ ಕ್ರಮ ಕೈಗೊಂಡಿಲ್ಲ ಎಂದು ದೂರಿದರು. ಕಲಬುರಗಿ, ರಾಯಚೂರು, ಸಿರವಾರ, ಲಿಂಗಸುಗೂರು, ಮಾನ್ವಿ ಸೇರಿದಂತೆ ವಿವಿಧೆಡೆ ದಲಿತರ ಮೇಲಿನ ದೌರ್ಜನ್ಯ ಹಾಗೂ ಕೊಲೆ ಪ್ರಕರಣಗಳು ನಡೆದಿವೆ. ನಂಜನಗೂಡಿನ ಮಹಾದೇವಮ್ಮ ಅವರ ಸಾವಿನ ಪ್ರಕರಣದಲ್ಲೂ ಎಫ್‌ಐಆರ್ ದಾಖಲಿಸಿಲ್ಲ ಎಂದು ಆರೋಪಿಸಿದರು.




2023ರಿಂದ 2026ರವರೆಗೆ ಪರಿಶಿಷ್ಟ ಜಾತಿಯವರ ಮೇಲಿನ ದೌರ್ಜನ್ಯ ಪ್ರಕರಣಗಳ ಕುರಿತು ಗೃಹ ಸಚಿವರು ಸಮಗ್ರ ಮಾಹಿತಿ ಪಡೆದು ಹಿರಿಯ ಪೊಲೀಸ್ ಅಧಿಕಾರಿಗಳ ಸಭೆ ನಡೆಸಬೇಕು. ಪರಿಶಿಷ್ಟ ಜಾತಿ ಆಯೋಗವು ಸಂತ್ರಸ್ತರಿಗೆ ನ್ಯಾಯ ದೊರಕಿಸುವ ಜತೆಗೆ ಆತ್ಮಸ್ಥೈರ್ಯ ತುಂಬುವ ಕೆಲಸ ಮಾಡಬೇಕು ಎಂದು ಒತ್ತಾಯಿಸಿದರು.

ಲಿಂಗಸುಗೂರಿನಲ್ಲಿ ಹೋಟೆಲ್‌ನಲ್ಲಿ ಚಹಾ ಸೇವಿಸಲು ವಿರೋಧ ವ್ಯಕ್ತಪಡಿಸಿದ ಘಟನೆ ಹಾಗೂ ಟಿ. ನರಸೀಪುರದಲ್ಲಿ ಯೂಟ್ಯೂಬರ್ ಮಂಜುನಾಥ್ ವಿರುದ್ಧ ಸ್ವಯಂಪ್ರೇರಿತ ಪ್ರಕರಣ ದಾಖಲಿಸಿರುವುದನ್ನೂ ಪ್ರಸ್ತಾಪಿಸಿ, ಸರ್ಕಾರದ ಕ್ರಮವನ್ನು ನಾರಾಯಣಸ್ವಾಮಿ ಟೀಕಿಸಿದರು.

ಗುತ್ತಿಗೆದಾರರಿಗೆ ಬಾಕಿ ಇರುವ ಸುಮಾರು 35 ಸಾವಿರ ಕೋಟಿ ಬಿಡುಗಡೆ ಮಾಡದಿದ್ದರೆ ಶೇ.70ರಷ್ಟು ಶಾಸಕರ ಭ್ರಷ್ಟಾಚಾರದ ಮಾಹಿತಿ ಬಹಿರಂಗಪಡಿಸುವುದಾಗಿ ಗುತ್ತಿಗೆದಾರರು ಹೇಳುತ್ತಿದ್ದಾರೆ ಎಂದು ಅವರು ಆರೋಪಿಸಿದರು. ಈ ಬಗ್ಗೆ ಹೈಕೋರ್ಟ್ ಸ್ವಯಂಪ್ರೇರಿತವಾಗಿ ಪ್ರಕರಣ ದಾಖಲಿಸಿಕೊಂಡು ಪರಿಶೀಲಿಸಬೇಕು ಎಂದು ಆಗ್ರಹಿಸಿದರು. ರಾಜ್ಯ ಸರ್ಕಾರ ಆರ್ಥಿಕ ಸಂಕಷ್ಟದಲ್ಲಿದ್ದು, ಹಲವು ಅಭಿವೃದ್ಧಿ ಕಾಮಗಾರಿಗಳು ಹಾಗೂ ಯೋಜನೆಗಳು ಬಾಕಿ ಉಳಿದಿವೆ. ಶಾಲೆಗಳಲ್ಲಿ ಮೂಲಸೌಕರ್ಯ ಕೊರತೆ, ಶಿಕ್ಷಕರ ನೇಮಕಾತಿ ವಿಳಂಬ ಮತ್ತು ವಿವಿಧ ನಿಗಮಗಳಿಗೆ ಅನುದಾನ ಕೊರತೆಯಿದೆ ಎಂದು ಅವರು ಆರೋಪಿಸಿದರು.

# ಕಡತ ವಿಲೇವಾರಿ ವಿಳಂಬಕ್ಕೆ ಕಡಿವಾಣ: ಅದೇ ದಿನ ವಿಲೇವಾರಿಗೆ ಸರ್ಕಾರದ ಕಟ್ಟುನಿಟ್ಟಿನ ಸೂಚನೆ

● ವಿಕ್ರಮ ವಾಹಿನಿ । ಬೆಂಗಳೂರು

ಸರ್ಕಾರಿ ಕಚೇರಿಗಳಲ್ಲಿ ಕಡತಗಳ ವಿಲೇವಾರಿ ತ್ವರಿತಗೊಳಿಸಲು ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ (ಡಿಪಿಎಆರ್) ಕಟ್ಟುನಿಟ್ಟಿನ ಸೂಚನೆ ನೀಡಿದೆ. ಸಚಿವಾಲಯ ಕೈಪಿಡಿ-2005ರ ನಿಯಮ ಪಾಲಿಸಿ, ಹೊಸ ಕಡತಗಳನ್ನು ಅನಗತ್ಯವಾಗಿ ಬಾಕಿ ಉಳಿಸದೆ ಸಾಧ್ಯವಾದಷ್ಟು ಅದೇ ದಿನ ವಿಲೇವಾರಿ ಮಾಡುವಂತೆ ಅಧಿಕಾರಿಗಳಿಗೆ ಸೂಚಿಸಲಾಗಿದೆ.

ವಿಲೇವಾರಿ ಸಾಧ್ಯವಾಗದ ಅನಿವಾರ್ಯ ಸಂದರ್ಭಗಳಲ್ಲಿ ವಿಳಂಬಕ್ಕೆ ಕಾರಣವನ್ನು ಲಿಖಿತವಾಗಿ ದಾಖಲಿಸಬೇಕು. ಕಿರಿಯ ಸಿಬ್ಬಂದಿ ಪ್ರತಿ ತಿಂಗಳ ಮೂರನೇ ಕೆಲಸದ ದಿನದೊಳಗೆ ಬಾಕಿ ಹಾಗೂ ವಿಲೇವಾರಿ ಮಾಡಿದ ಕಡತಗಳ ಪಟ್ಟಿಯನ್ನು ಸಿದ್ಧಪಡಿಸಬೇಕು.

ಎರಡು ವರ್ಷಗಳೊಳಗೆ ಬಾಕಿ ಇರುವ ಕಡತಗಳನ್ನು ಅಧೀನ ಕಾರ್ಯದರ್ಶಿಗಳು, 2ರಿಂದ 4 ವರ್ಷಗಳ ಕಡತಗಳನ್ನು ಸಂಬಂಧಪಟ್ಟ ಹಿರಿಯ ಅಧಿಕಾರಿಗಳು ಹಾಗೂ ನಾಲ್ಕು ವರ್ಷಕ್ಕೂ ಹೆಚ್ಚು ಬಾಕಿ ಇರುವ ಕಡತಗಳನ್ನು ಇಲಾಖಾ ಕಾರ್ಯದರ್ಶಿಗಳು ಪರಿಶೀಲಿಸಬೇಕು.

ಮೂರು ತಿಂಗಳಿಗೂ ಹೆಚ್ಚು ಕಾಲ ಅಂತಿಮ ಆದೇಶಕ್ಕಾಗಿ ಬಾಕಿ ಇರುವ ಪ್ರಕರಣಗಳನ್ನು ಕಾರ್ಯದರ್ಶಿಗಳ ಗಮನಕ್ಕೆ ತರಬೇಕು. ಒಂದು ತಿಂಗಳಿಗೂ ಹೆಚ್ಚು ಬಾಕಿ ಇರುವ ಪ್ರಕರಣಗಳ ಕುರಿತು ಕಾರ್ಯದರ್ಶಿಗಳು ಪ್ರತಿ ತಿಂಗಳು ಮುಖ್ಯ ಕಾರ್ಯದರ್ಶಿಗೆ ವರದಿ ಸಲ್ಲಿಸಬೇಕು ಎಂದು ಸುತ್ತೋಲೆಯಲ್ಲಿ ಸೂಚಿಸಲಾಗಿದೆ.

# ರೈತರ ಸಂಕಷ್ಟಕ್ಕೆ ಸ್ಪಂದಿಸದ ಸರ್ಕಾರ: ವಿಜಯೇಂದ್ರ

● ವಿಕ್ರಮ ವಾಹಿನಿ | ಬಾಗೇಪಲ್ಲಿ

ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದು ಮೂರು ವರ್ಷ ಕಳೆದರೂ ರೈತರು, ಬಡವರು ಹಾಗೂ ಗ್ರಾಮೀಣ ಜನರ ಸಮಸ್ಯೆಗಳಿಗೆ ಸೂಕ್ತವಾಗಿ ಸ್ಪಂದಿಸಿಲ್ಲ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಆರೋಪಿಸಿದರು. ಬಾಗೇಪಲ್ಲಿಯಲ್ಲಿ ನಡೆದ 'ಸೇವಾ ಸಂಕಲ್ಪ ಯಾತ್ರೆ ಹಾಗೂ ವಿಜಯ ಸಂಕಲ್ಪ ಯಾತ್ರೆ' ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಬರ ಹಾಗೂ ಬೆಳೆ ನಷ್ಟದಿಂದ ರೈತರು ಸಂಕಷ್ಟದಲ್ಲಿರುವ ಸಂದರ್ಭದಲ್ಲಿ ಸರ್ಕಾರ ಸಮರ್ಪಕ ಪರಿಹಾರ ನೀಡಬೇಕಿತ್ತು.

ಪ್ರತಿ ಹೆಕ್ಟೇರ್‌ಗೆ ಕನಿಷ್ಠ 50 ಸಾವಿರ ಬೆಳೆ ಪರಿಹಾರ ನೀಡಬೇಕು ಹಾಗೂ ಬಾಕಿ ಇರುವ ಪರಿಹಾರವನ್ನು ಕೂಡಲೇ ಬಿಡುಗಡೆ ಮಾಡಬೇಕು ಎಂದು ಆಗ್ರಹಿಸಿದರು.

ರೈತರ, ಬಡವರ, ಅಲೆಮಾರಿ ಸಮುದಾಯಗಳ ಹಾಗೂ ಗ್ರಾಮೀಣ ಜನರ ಸಮಸ್ಯೆಗಳನ್ನು ಸರ್ಕಾರದ ಗಮನಕ್ಕೆ ತರಲು ಬಿಜೆಪಿ ನಡೆಸಿದ ಪಾದಯಾತ್ರೆ ಕೇವಲ ರಾಜಕೀಯ ಕಾರ್ಯಕ್ರಮವಾಗಿರಲಿಲ್ಲ. ಜನರ ಸಂಕಷ್ಟಗಳನ್ನು ನೇರವಾಗಿ ಆಲಿಸಿ ಸರ್ಕಾರದ ಗಮನ ಸೆಳೆಯುವ ಉದ್ದೇಶದಿಂದ ನಡೆಸಲಾಗಿತ್ತು ಎಂದು ಹೇಳಿದರು. ಗ್ರಾಮೀಣ ಪ್ರದೇಶಗಳಲ್ಲಿ ಶಾಲೆ, ಕಾಲೇಜು, ರಸ್ತೆ ಹಾಗೂ ನೀರಾವರಿ ಸೇರಿದಂತೆ ಮೂಲಸೌಕರ್ಯ ಅಭಿವೃದ್ಧಿಗೆ ವೇಗ ಸಿಗುತ್ತಿಲ್ಲ. ಬಡವರಿಗೆ ಮನೆ, ವಿಕಲಚೇತನರಿಗೆ ಪಿಂಚಣಿ, ವಿಧವಾ ವೇತನ ಸೇರಿದಂತೆ ವಿವಿಧ ಸಾಮಾಜಿಕ ಭದ್ರತಾ ಸೌಲಭ್ಯಗಳು ಸಕಾಲದಲ್ಲಿ ತಲುಪುತ್ತಿಲ್ಲ ಎಂದು ವಿಜಯೇಂದ್ರ ದೂರಿದರು.

ಗ್ಯಾರಂಟಿ ಯೋಜನೆಗಳಿಗೆ ಆದ್ಯತೆ ನೀಡುವ ನೆಪದಲ್ಲಿ ಅಭಿವೃದ್ಧಿ ಕಾಮಗಾರಿಗಳಿಗೆ ಅನುದಾನ ಕಡಿತಗೊಳ್ಳುತ್ತಿದೆ ಎಂಬ ಆರೋಪಗಳಿದ್ದು, ಸರ್ಕಾರದ ಆದ್ಯತೆಗಳ ಬಗ್ಗೆ ಜನರಲ್ಲಿ ಪ್ರಶ್ನೆಗಳು ಮೂಡಿವೆ ಎಂದು ಟೀಕಿಸಿದರು.

ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ ಬಡವರು, ಯುವಕರು, ರೈತರು ಹಾಗೂ ಮಹಿಳೆಯರನ್ನು ಕೇಂದ್ರವಾಗಿಟ್ಟುಕೊಂಡು ಹಲವು ಯೋಜನೆಗಳನ್ನು ಜಾರಿಗೊಳಿಸುತ್ತಿದೆ ಎಂದು ವಿಜಯೇಂದ್ರ ಹೇಳಿದರು.

ಮುಂಬರುವ ಜಿಲ್ಲಾ ಹಾಗೂ ತಾಲೂಕು ಪಂಚಾಯಿತಿ ಚುನಾವಣೆಗಳಿಗೆ ಪಕ್ಷ ಸಂಘಟನೆಯನ್ನು ಬಲಪಡಿಸುವಂತೆ ಕಾರ್ಯಕರ್ತರಿಗೆ ಕರೆ ನೀಡಿದ ಅವರು, ಆಗ್ನೇಯ ಪದವೀಧರ ಕ್ಷೇತ್ರದ ವಿಧಾನ ಪರಿಷತ್ ಚುನಾವಣೆಯಲ್ಲಿ ಬಿಜೆಪಿ ಅಭ್ಯರ್ಥಿ ಕೆ.ವಿ. ಸುರೇಶ್ ಅವರಿಗೆ ಬೆಂಬಲ ನೀಡುವಂತೆ ಮನವಿ ಮಾಡಿದರು.

ಕಾರ್ಯಕರ್ತರು ಸಂಘಟನೆಯನ್ನು ಬಲಪಡಿಸಿ ಜನರ ಸಮಸ್ಯೆಗಳ ಪರ ಹೋರಾಟ ಮುಂದುವರಿಸಬೇಕು. ಜನರ ಬೆಂಬಲದಿಂದ 2028ರಲ್ಲಿ ರಾಜ್ಯದಲ್ಲಿ ಬಿಜೆಪಿ ನೇತೃತ್ವದ ಎನ್‌ಡಿಎ ಸರ್ಕಾರ ಅಧಿಕಾರಕ್ಕೆ ಬರಲಿದೆ ಎಂದು ವಿಜಯೇಂದ್ರ ವಿಶ್ವಾಸ ವ್ಯಕ್ತಪಡಿಸಿದರು.



## ಕಾರ್ಯಕರ್ತರ ಸಮಾವೇಶ

● ವಿಕ್ರಮ ವಾಹಿನಿ | ಬಾಗೇಪಲ್ಲಿ

ಸೇವಾ ಸಂಕಲ್ಪ ಮತ್ತು ವಿಜಯ ಸಂಕಲ್ಪ ಯಾತ್ರೆ ಅಂಗವಾಗಿ ಇಂದು ಇಲ್ಲಿ ನಡೆದ ಬಿಜೆಪಿ ಕಾರ್ಯಕರ್ತರ ಸಮಾವೇಶದಲ್ಲಿ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ, ರಾಜ್ಯ ಕಾರ್ಯದರ್ಶಿಗಳಾದ ಸಿ. ಮುನಿರಾಜು, ಹೆಚ್.ಸಿ. ತಮ್ಮೇಶ್ ಗೌಡ, ಜಿಲ್ಲಾಧ್ಯಕ್ಷ ಎಸ್.ವಿ. ರಾಮಚಂದ್ರ ಗೌಡ (ಸೀಕಲ್), ವಿಧಾನಪರಿಷತ್ ಮಾಜಿ ಸದಸ್ಯ ವೈ.ಎ. ನಾರಾಯಣಸ್ವಾಮಿ, ವಿಭಾಗ ಪ್ರಭಾರಿ ಬ್ಯಾಟರಂಗೇಗೌಡ, ವಿಭಾಗ ಸಹ–ಪ್ರಭಾರಿ ಎಂ.ಕೆ. ವಾಸುದೇವ, ಮಾಜಿ ಜಿಲ್ಲಾಧ್ಯಕ್ಷ ರಾಮಲಿಂಗಪ್ಪ, ಮುಖಂಡ ಮರಿಸ್ವಾಮಿ, ಮಹಿಳಾ ಮೋರ್ಚಾ ರಾಜ್ಯ ಕಾರ್ಯದರ್ಶಿ ಶ್ರೀಮತಿ ನಿರ್ಮಲಾ ಮತ್ತು ಪಕ್ಷದ ಮುಖಂಡರು, ಕಾರ್ಯಕರ್ತರು ಉಪಸ್ಥಿತರಿದ್ದರು.

## ನಾಡಿನ ಒಳಿತಿಗೆ ಪ್ರಾರ್ಥನೆ

● ವಿಕ್ರಮ ವಾಹಿನಿ | ಬಾಗೇಪಲ್ಲಿ

ಬೂತ್ ವಿಜಯ ಸಂಕಲ್ಪ ಯಾತ್ರೆಯ ಅಂಗವಾಗಿ ಇಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅವರು ಬಾಗೇಪಲ್ಲಿಯ ಪ್ರಸಿದ್ಧ ಶ್ರೀ ವೆಂಕಟರಮಣ ದೇವಸ್ಥಾನಕ್ಕೆ ಭೇಟಿ ನೀಡಿ ದರ್ಶನ ಪಡೆದು ಪೂಜೆ ಸಲ್ಲಿಸಿ, ನಾಡಿನ ಒಳಿತಿಗಾಗಿ ಪ್ರಾರ್ಥಿಸಿದರು. ರಾಜ್ಯ ಪ್ರಧಾನ ಕಾರ್ಯದರ್ಶಿ ಪ್ರೀತಮ್ ಗೌಡ, ರಾಜ್ಯ ಕಾರ್ಯದರ್ಶಿಗಳಾದ ಸಿ.ಮುನಿರಾಜು, ತಮ್ಮೇಶ್ ಗೌಡ, ವಿಭಾಗ ಪ್ರಭಾರಿ ಬ್ಯಾಟರಂಗೇಗೌಡ, ವಿಭಾಗ ಸಹ–ಪ್ರಭಾರಿ ಎಂ. ಕೆ. ವಾಸುದೇವ, ಜಿಲ್ಲಾಧ್ಯಕ್ಷ ಎಸ್.ವಿ. ರಾಮಚಂದ್ರ ಗೌಡ, ಪದಾಧಿಕಾರಿಗಳು ಮತ್ತು ಪ್ರಮುಖರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

## ಪಿಜಿಸಿಇಟಿ: ಶುಲ್ಕ ಪಾವತಿಗೆ 7ರವರೆಗೆ ದಿನಾಂಕ ವಿಸ್ತರಣೆ

● ವಿಕ್ರಮ ವಾಹಿನಿ | ಬೆಂಗಳೂರು

ಎಂಬಿಎ, ಎಂಸಿಎ, ಎಂಇ, ಎಂ.ಟೆಕ್, ಎಂ ಆರ್ಕ್ ಕೋರ್ಸ್ ಗಳ ಪ್ರವೇಶಕ್ಕೆ ಮೊದಲ ಸುತ್ತಿನಲ್ಲಿ ಸೀಟು ಹಂಚಿಕೆಯಾಗಿರುವ ಅಭ್ಯರ್ಥಿಗಳಿಗೆ ಶುಲ್ಕ ಪಾವತಿಸಲು ಅ.7ರವರೆಗೆ ದಿನಾಂಕ ವಿಸ್ತರಿಸಲಾಗಿದೆ ಎಂದು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಕಾರ್ಯನಿರ್ವಾಹಕ ನಿರ್ದೇಶಕ ಹೆಚ್.ಪ್ರಸನ್ನ ತಿಳಿಸಿದ್ದಾರೆ.

ಶುಲ್ಕ ಪಾವತಿ ನಂತರ ಸೀಟು ಖಾತರಿ ಚೀಟಿ ಡೌನ್‌ಲೋಡ್ ಮಾಡಿಕೊಂಡು ಕಾಲೇಜಿನಲ್ಲಿ ಪ್ರವೇಶ ಪಡೆಯಲು ಅ.8ರವರೆಗೆ ಅವಕಾಶ ನೀಡಲಾಗಿದೆ ಎಂದು ಅವರು ಹೇಳಿಕೆಯಲ್ಲಿ ತಿಳಿಸಿದ್ದಾರೆ.

## ಗುಜರಾತ್ ಏಕರೂಪ ನಾಗರಿಕ ಸಂಹಿತೆಗೆ ರಾಷ್ಟ್ರಪತಿ ಅಂಕಿತ

● ವಿಕ್ರಮ ವಾಹಿನಿ | ಗಾಂಧಿನಗರ

ಗುಜರಾತ್ ಏಕರೂಪ ನಾಗರಿಕ ಸಂಹಿತೆ (ಯುಸಿಸಿ) ಮಸೂದೆಗೆ ರಾಷ್ಟ್ರಪತಿ ದ್ರೌಪದಿ ಮುರ್ಮು ಅಂಕಿತ ಹಾಕಿದ್ದು, ರಾಜ್ಯದಲ್ಲಿ ಕಾಯ್ದೆ ಜಾರಿಗೆ ಮುಂದಿನ ಹಂತ ಆರಂಭವಾಗಿದೆ. ರಾಜ್ಯ ಸರ್ಕಾರ ನಿಯಮಾವಳಿಗಳ ಅಧಿಸೂಚನೆ ಹೊರಡಿಸಿದ ಬಳಿಕ ಕಾಯ್ದೆ ಜಾರಿಗೆ ಬರಲಿದೆ. ಪರಿಶಿಷ್ಟ ಪಂಗಡಗಳ (ಎಸ್‌ಟಿ) ಸಮುದಾಯವನ್ನು ಕಾಯ್ದೆಯ ವ್ಯಾಪ್ತಿಯಿಂದ ಹೊರಗಿಡಲಾಗಿದೆ.

ಗುಜರಾತ್ ವಿಧಾನಸಭೆಯಲ್ಲಿ ಸುದೀರ್ಘ ಚರ್ಚೆಯ ಬಳಿಕ ಮಸೂದೆಗೆ ಧ್ವನಿಮತದ ಮೂಲಕ ಅನುಮೋದನೆ ದೊರೆತಿತ್ತು. ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಮಸೂದೆ ಅಂಗೀಕಾರದ ಬಳಿಕ ಗುಜರಾತ್ ಮುಖ್ಯಮಂತ್ರಿ ಭೂಪೇಂದ್ರ ಪಟೇಲ್ ಹಾಗೂ ಬೆಂಬಲಿಸಿದ ಶಾಸಕರನ್ನು ಅಭಿನಂದಿಸಿದ್ದರು.

ಮದುವೆ, ವಿಚ್ಛೇದನ, ಉತ್ತರಾಧಿಕಾರ ಹಾಗೂ ಲಿವ್–ಇನ್ ಸಂಬಂಧಗಳಿಗೆ ಏಕರೂಪ ಕಾನೂನು ಚೌಕಟ್ಟು ಕಲ್ಪಿಸುವುದು ಮಸೂದೆಯ ಪ್ರಮುಖ ಅಂಶಗಳಾಗಿವೆ. ಕಾಯ್ದೆಯ ಅನುಷ್ಠಾನಕ್ಕೆ ಅಗತ್ಯವಾದ ನಿಯಮಗಳನ್ನು ರಾಜ್ಯ ಸರ್ಕಾರ ಅಧಿಸೂಚನೆ ಮೂಲಕ ಪ್ರಕಟಿಸಬೇಕಿದೆ.

ಮಸೂದೆ ಕುರಿತು ಆಡಳಿತ ಪಕ್ಷ ಮತ್ತು ಪ್ರತಿಪಕ್ಷಗಳ ನಡುವೆ ಭಿನ್ನಾಭಿಪ್ರಾಯ ವ್ಯಕ್ತವಾಗಿತ್ತು. ಕಾಂಗ್ರೆಸ್ ಸದಸ್ಯರು ಮಸೂದೆಯನ್ನು ಸದನ ಸಮಿತಿಗೆ ಕಳುಹಿಸಬೇಕು ಎಂದು ಆಗ್ರಹಿಸಿ ಸಭಾತ್ಯಾಗ ನಡೆಸಿದ್ದರು.

## ಕಾವೇರಿ ನೀರು: 2,000 ಕ್ಯೂಸೆಕ್‌ಗೆ ಇಳಿಸಲು ಕರ್ನಾಟಕ ಮನವಿ



● ವಿಕ್ರಮ ವಾಹಿನಿ | ಬೆಂಗಳೂರು

ಕಾವೇರಿ ಜಲಾಶಯಗಳಲ್ಲಿನ ನೀರಿನ ಲಭ್ಯತೆ ಕ್ಷೀಣಿಸಿರುವ ಹಿನ್ನೆಲೆಯಲ್ಲಿ ತಮಿಳುನಾಡಿಗೆ ಪ್ರತಿದಿನ ಹರಿಸಬೇಕಿರುವ ನೀರಿನ ಪ್ರಮಾಣವನ್ನು 4,000ರಿಂದ 2,000 ಕ್ಯೂಸೆಕ್‌ಗೆ ಇಳಿಸುವಂತೆ ಕರ್ನಾಟಕ ಸರ್ಕಾರ ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರಕ್ಕೆ (ಸಿಡಬ್ಲ್ಯುಎಂಎ) ಮನವಿ ಮಾಡಿದೆ.

ಕಾವೇರಿ ಕೊಳ್ಳದ ಕೆಆರ್‌ಎಸ್, ಕಬಿನಿ, ಹೇಮಾವತಿ ಹಾಗೂ ಹಾರಂಗಿ ಜಲಾಶಯಗಳಲ್ಲಿ ಒಟ್ಟು ಸುಮಾರು 49 ಟಿಎಂಸಿ ನೀರು ಮಾತ್ರ ಲಭ್ಯವಿದ್ದು, ಕುಡಿಯುವ ನೀರು, ಪರಿಸರ ಹರಿವು ಹಾಗೂ ಮುಂದಿನ ಬೇಸಿಗೆಯ ಅಗತ್ಯಗಳಿಗಾಗಿ ನೀರನ್ನು ಕಾಯ್ದಿರಿಸಬೇಕಿದೆ ಎಂದು ಜಲಸಂಪನ್ಮೂಲ ಸಚಿವ ಎನ್.ಚಲುವರಾಯಸ್ವಾಮಿ ತಿಳಿಸಿದ್ದಾರೆ. ಕಾವೇರಿ ಕೊಳ್ಳದ 47 ತಾಲೂಕುಗಳನ್ನು ಬರಪೀಡಿತ ಎಂದು ಘೋಷಿಸಲಾಗಿದೆ.

ಜೂನ್ 1ರಿಂದ ಸೆಪ್ಟೆಂಬರ್ 30ರವರೆಗೆ ಬಿಳಿಗುಂಡ್ಲುವಿನಲ್ಲಿ 44.21 ಟಿಎಂಸಿ ನೀರು ಹರಿಸಲಾಗಿದೆ ಎಂದು ರಾಜ್ಯ ಸರ್ಕಾರ ತಿಳಿಸಿದೆ. ಒಳಹರಿವು ಗಣನೀಯವಾಗಿ ಕುಸಿದಿರುವ ಹಿನ್ನೆಲೆಯಲ್ಲಿ ಮತ್ತಷ್ಟು ನೀರು ಬಿಡುಗಡೆ ಮಾಡುವುದು ಕಷ್ಟಕರವಾಗಿದ್ದು, ತಮಿಳುನಾಡಿನಲ್ಲಿ ಈಶಾನ್ಯ ಮುಂಗಾರು ಆರಂಭವಾಗುವ ನಿರೀಕ್ಷೆಯನ್ನೂ ಪರಿಗಣಿಸಿ ಪ್ರಮಾಣ ಇಳಿಸುವಂತೆ ಮನವಿ ಮಾಡಲಾಗಿದೆ.

ಸೆಪ್ಟೆಂಬರ್ 24ರಂದು ನಡೆದ ಸಿಡಬ್ಲ್ಯುಎಂಎ ಸಭೆಯಲ್ಲಿ ತಮಿಳುನಾಡಿಗೆ 15 ದಿನಗಳ ಕಾಲ ಪ್ರತಿದಿನ 4,000 ಕ್ಯೂಸೆಕ್ ನೀರು ಹರಿಸುವಂತೆ ನೀಡಿದ್ದ ಆದೇಶವನ್ನು ಪ್ರಾಧಿಕಾರ ಎತ್ತಿಹಿಡಿದಿತ್ತು. ಈ ಆದೇಶವನ್ನು ಮರುಪರಿಶೀಲಿಸುವಂತೆ ಇದೀಗ ಕರ್ನಾಟಕ ಮನವಿ ಮಾಡಿದೆ. ಇದೇ ವೇಳೆ ಕಾವೇರಿ ನೀರು ಹಂಚಿಕೆ ಕುರಿತು ತಮಿಳುನಾಡು ಸಲ್ಲಿಸಿರುವ ಅರ್ಜಿಗೆ ಸಂಬಂಧಿಸಿದಂತೆ ಸುಪ್ರೀಂ ಕೋರ್ಟ್ ಕರ್ನಾಟಕದಿಂದ ಪ್ರತಿಕ್ರಿಯೆ ಕೋರಿದ್ದು, ಪ್ರಕರಣದ ಮುಂದಿನ ವಿಚಾರಣೆಯನ್ನು ಅ.12ಕ್ಕೆ ಮುಂದೂಡಿದೆ.



ಮಲ್ಲೇಶ್ವರಂ ವಿಧಾನಸಭಾ ಕ್ಷೇತ್ರದ ಮತ್ತೀಕೆರೆಯಲ್ಲಿ ಗಾಂಧಿ ಜಯಂತಿ ಅಂಗವಾಗಿ ಸ್ವಚ್ಛತಾ ಅಭಿಯಾನವನ್ನು ಮಾಜಿ ಪಾಲಿಕೆ ಸದಸ್ಯರಾದ ಮುನಿಸ್ವಾಮಿ ಗೌಡರವರ ನೇತೃತ್ವದಲ್ಲಿ 3ನೇ ಮುಖ್ಯ ರಸ್ತೆಯ ಸುಮಾರು 1 ಕಿ. ಮೀ. ನ ರಸ್ತೆಯ ಇಕ್ಕೆಲೆಗಳಲ್ಲಿ ಫುಟ್ಪಾತ್‌ಗಳ ಮೇಲೆ ಅಲ್ಲಲ್ಲಿ ಶೇಖರಣೆಯಾಗಿ, ಪಾದಾಚಾರಿಗಳ ಸರಾಗ ಓಡಾಟಕ್ಕೆ ಅಡ್ಡಿಯನ್ನುಂಟು ಮಾಡುತ್ತಿದ್ದ ಹಳೆಯ ಮುರುಕುಲು ವಸ್ತುಗಳನ್ನು ತೆರವುಗೊಳಸುವ ಕಾರ್ಯಕ್ರಮದಲ್ಲಿ ಮಾಜಿ ಪಾಲಿಕೆ ಸದಸ್ಯ ಜಯಪ್ರಕಾಶ್, ಬಿಜೆಪಿ ಮುಖಂಡರಾದ ಚನ್ನಕೇಶವ, ಭಾರತಿ, ಬಾಬು ಮುಂತಾದ ಪ್ರಮುಖರೊಂದಿಗೆ ಬಿಜೆಪಿ ಕಾರ್ಯಕರ್ತರು ಭಾಗವಹಿಸಿ, ಒಂದು ಟ್ರಾಕ್ಟರ್ ಲೋಡ್ ಕಸವನ್ನು ಪೌರ ಕಾರ್ಮಿಕರ ಸಹಕಾರದೊಂದಿಗೆ ತೆರುವುಗೊಳಸಿದರು.

## ಮತದಾರರ ಪಟ್ಟಿ ಮರುಪರಿಶೀಲನೆಗೆ ಸೂಚನೆ: ಡಿಕೆಶಿ

● ವಿಕ್ರಮ ವಾಹಿನಿ | ಬೆಂಗಳೂರು

ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ಬಳಿಕ ಗೈರು, ಸ್ಥಳಾಂತರಗೊಂಡ, ಮೃತ ಹಾಗೂ ನಕಲಿ ಎಂದು ಗುರುತಿಸಲಾದ ಮತದಾರರ ಪಟ್ಟಿಯನ್ನು ಮರುಪರಿಶೀಲಿಸಿ, ಅರ್ಹ ಮತದಾರರ ಹೆಸರುಗಳನ್ನು ಮತ್ತೆ ಸೇರ್ಪಡೆಗೊಳಿಸಲು ವಿಶೇಷ ಅಭಿಯಾನ ನಡೆಸುವಂತೆ ಭಾರತ ಚುನಾವಣಾ ಆಯೋಗ ಸೂಚಿಸಿರುವುದು ದೇಶದ ಮತದಾರರ ಹಕ್ಕಿಗೆ ಸಂದ ಗೆಲುವು ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೇಳಿದರು. ಚುನಾವಣಾ ಆಯೋಗದ ಅಧಿಕೃತ ವೇಳಾಪಟ್ಟಿಯ ಪ್ರಕಾರ ಕರ್ನಾಟಕದಲ್ಲಿ ಎಸ್‌ಐಆರ್‌ನ ಅಂತಿಮ ಮತದಾರರ ಪಟ್ಟಿ ಅ.7ರಂದು ಪ್ರಕಟವಾಗಬೇಕಿದೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯ ಚುನಾವಣಾ ಆಯೋಗದ ಕಚೇರಿ ಎದುರು ಕಾಂಗ್ರೆಸ್ ನಡೆಸಿದ ಪ್ರತಿಭಟನೆಯ ಬಳಿಕ ಆಯೋಗ ಈ ನಿರ್ದೇಶನ ನೀಡಿರುವುದನ್ನು ಸ್ವಾಗತಿಸಿದರು. ಇದು ಕಾಂಗ್ರೆಸ್ ಅಥವಾ ಸರ್ಕಾರದ ಗೆಲುವಲ್ಲ, ಕರ್ನಾಟಕ ಸೇರಿದಂತೆ ದೇಶದ ಅರ್ಹ ಮತದಾರರ ಗೆಲುವು ಎಂದು ಹೇಳಿದರು.

ಫಾರ್ಮ್–7 ಮೂಲಕ ಮತದಾರರ ಹೆಸರುಗಳನ್ನು ತೆಗೆದುಹಾಕುವ ಪ್ರಕ್ರಿಯೆ, ಅರ್ಹ ಯುವ ಮತದಾರರ ನೋಂದಣಿ ಹಾಗೂ ಅರ್ಜಿಗಳ ಸಲ್ಲಿಕೆಗೆ ಅನುಕೂಲವಾಗುವಂತೆ ವಿಶೇಷ ಶಿಬಿರಗಳನ್ನು ಆಯೋಜಿಸಬೇಕು. ಬೂತ್ ಮಟ್ಟದ ಅಧಿಕಾರಿಗಳು ಫಾರ್ಮ್–6 ಮತ್ತು ಫಾರ್ಮ್–7 ಸೇರಿದಂತೆ ಪ್ರಕ್ರಿಯೆಗಳ ಕುರಿತು ಮತದಾರರಿಗೆ ಅಗತ್ಯ ಮಾಹಿತಿ ನೀಡಬೇಕು ಎಂದು ಆಯೋಗ ಸೂಚಿಸಿದೆ ಎಂದು ಶಿವಕುಮಾರ್ ತಿಳಿಸಿದರು. ಎಸ್‌ಐಆರ್‌ನಲ್ಲಿ ಅರ್ಹ ಮತದಾರರನ್ನು ಪಟ್ಟಿಯಿಂದ ಹೊರಗಿಡದಂತೆ ಕ್ರಮವಹಿಸುವುದು ಆಯೋಗದ ಪ್ರಕ್ರಿಯೆಯ ಭಾಗವಾಗಿದೆ.

ಬಡವರು, ಕಾರ್ಮಿಕರು, ನಿರಾಶ್ರಿತರು ಹಾಗೂ ದುರ್ಬಲ ವರ್ಗಗಳ ಮತಗಳನ್ನು ತೆಗೆದುಹಾಕಲು ಬಿಜೆಪಿ ಅರ್ಜಿಗಳನ್ನು ಸಲ್ಲಿಸಿದೆ ಎಂದು ಶಿವಕುಮಾರ್ ಆರೋಪಿಸಿದರು. ಸುಮಾರು 25 ಸಾವಿರ ಅರ್ಜಿಗಳನ್ನು ಸಲ್ಲಿಸಿರುವುದಾಗಿ ಬಿಜೆಪಿ ಮುಖಂಡರೇ ಒಪ್ಪಿಕೊಂಡಿದ್ದಾರೆ ಎಂದು ಹೇಳಿದ ಅವರು, ಈ ಕುರಿತು ಚುನಾವಣಾ ಆಯೋಗ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಮತದಾನದ ಹಕ್ಕು ದೇಶದ ಪ್ರತಿಯೊಬ್ಬ ನಾಗರಿಕನ ಹಕ್ಕಾಗಿದ್ದು, ಅದನ್ನು ರಕ್ಷಿಸುವುದು ಮುಖ್ಯಮಂತ್ರಿಯಾಗಿ ತಮ್ಮ ಕರ್ತವ್ಯ. ಮತದಾರರ ಪಟ್ಟಿಗೆ ಸಂಬಂಧಿಸಿದ ಅಕ್ರಮಗಳ ಕುರಿತು ಮುಂದಿನ ದಿನಗಳಲ್ಲಿ ಮತ್ತಷ್ಟು ವಿಚಾರಗಳು ಬಹಿರಂಗವಾಗಲಿವೆ ಎಂದು ಶಿವಕುಮಾರ್ ಹೇಳಿದರು.

ಮತದಾರರು ತಮ್ಮ ಹೆಸರು ಅಂತಿಮ ಪಟ್ಟಿಯಲ್ಲಿ ಇರುವುದನ್ನು ಪರಿಶೀಲಿಸಿಕೊಳ್ಳಲು ಹಾಗೂ ಹೆಸರು ಕೈಬಿಟ್ಟಿದ್ದರೆ ನಿಯಮಾನುಸಾರ ಅಗತ್ಯ ಅರ್ಜಿ ಸಲ್ಲಿಸಲು ಅವಕಾಶವಿದೆ.

ಎಸ್‌ಐಆರ್ ವೇಳಾಪಟ್ಟಿಯಂತೆ ಕರ್ನಾಟಕದಲ್ಲಿ ಅಂತಿಮ ಮತದಾರರ ಪಟ್ಟಿ ಅ.7ರಂದು ಪ್ರಕಟವಾಗಲಿದೆ. ಅದಕ್ಕೂ ಮುನ್ನ ಬಾಕಿ ಇರುವ ಆಕ್ಷೇಪಣೆ, ಅರ್ಜಿಗಳು ಹಾಗೂ ಪರಿಶೀಲನಾ ಪ್ರಕ್ರಿಯೆಗಳನ್ನು ಪೂರ್ಣಗೊಳಿಸಲು ಅಧಿಕಾರಿಗಳು ಕ್ರಮ ಕೈಗೊಳ್ಳಬೇಕಿದೆ. ಇದೇ ವೇಳೆ, ಬೃಹತ್ ಪ್ರಮಾಣದಲ್ಲಿ ಫಾರ್ಮ್–7 ಅರ್ಜಿಗಳನ್ನು ಸಲ್ಲಿಸಿ ಮತದಾರರ ಹೆಸರು ಅಳಿಸಲು ಯತ್ನಿಸಲಾಗಿದೆ ಎಂಬ ಆರೋಪಗಳ ಕುರಿತು ಕರ್ನಾಟಕದಲ್ಲಿ ಪ್ರಕರಣಗಳು ದಾಖಲಾಗಿವೆ. ಇಂತಹ ಅರ್ಜಿಗಳ ಸತ್ಯಾಸತ್ಯತೆ ಪರಿಶೀಲಿಸಿ, ತಪ್ಪಿತಸ್ಥರ ವಿರುದ್ಧ ಕಾನೂನು ಕ್ರಮ ಕೈಗೊಳ್ಳುವ ಕುರಿತು ಚುನಾವಣಾ ಅಧಿಕಾರಿಗಳು ಕ್ರಮ ಆರಂಭಿಸಿದ್ದಾರೆ ಎಂದು ವರದಿಯಾಗಿದೆ.

## ಸ್ವಚ್ಛ ಭಾರತ ಅಭಿಯಾನ



● ವಿಕ್ರಮ ವಾಹಿನಿ | ಉಡುಪಿ

ಗಾಂಧಿ ಜಯಂತಿ ಅಂಗವಾಗಿ ಪತಂಜಲಿ ಯೋಗ ಸಮಿತಿ, ಉಡುಪಿ ಹಾಗೂ ಶ್ರೀ ಪುತ್ತಿಗೆ ಮಠದ ಸಹಯೋಗದಲ್ಲಿ ಗೀತಾ ಮಂದಿರ, ರಾಜಾಂಗಣ ಹಾಗೂ ಪತಂಜಲಿ ಕಾರ್ಯಾಲಯದ ಪರಿಸರದಲ್ಲಿ ಸ್ವಚ್ಛ ಭಾರತ ಅಭಿಯಾನ ನಡೆಯಿತು.

ಶ್ರೀ ಪುತ್ತಿಗೆ ಮಠದ ದಿವಾನ ನಾಗರಾಜ ಆಚಾರ್ಯ ದೀಪ ಪ್ರಜ್ವಲಿಸಿ, ತುಳಸಿ ಗಿಡ ನೆಟ್ಟು ನೀರೆರೆಯುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಸ್ವಚ್ಛ ಭಾರತ ಅಭಿಯಾನ ಒಂದು ದಿನಕ್ಕೆ ಸೀಮಿತವಾಗದೆ, ಪ್ರತಿಯೊಬ್ಬರೂ ಸ್ವಯಂಪ್ರೇರಣೆಯಿಂದ ಸ್ವಚ್ಛತಾ ಕಾರ್ಯದಲ್ಲಿ ತೊಡಗಿಸಿಕೊಳ್ಳಬೇಕು ಎಂದು ಕರೆ ನೀಡಿದರು.

ಪತಂಜಲಿ ರಾಜ್ಯ ಸಮಿತಿ ಸದಸ್ಯ ಕೆ. ರಾಘವೇಂದ್ರ ಭಟ್ ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಪತಂಜಲಿ ಯೋಗ ಸಮಿತಿ ಉಡುಪಿ ವತಿಯಿಂದ ಸತತ ಐದು ವರ್ಷಗಳಿಂದ ಪ್ರತಿ ತಿಂಗಳ ಮೊದಲ ಭಾನುವಾರ ಕಕ್ಷೆಗಳ ಪರಿಸರ, ದೇವಸ್ಥಾನ ಹಾಗೂ ಪಾರ್ಕಿಂಗ್ ಪ್ರದೇಶಗಳಲ್ಲಿ ಸ್ವಚ್ಛತಾ ಅಭಿಯಾನ ನಡೆಸಲಾಗುತ್ತಿದೆ ಎಂದು ತಿಳಿಸಿದರು.

ಭಾರತ್ ಸ್ವಾಭಿಮಾನ ಟ್ರಸ್ಟ್‌ನ ವೆಂಕಟೇಶ್ ಮೆಹಂದಲೆ, ಯುವ ಪ್ರಭಾರಿ ಜಗದೀಶ್ ಕುಮಾರ್, ಮಾಧ್ಯಮ ಪ್ರಭಾರಿ ಹರಿಪ್ರಸಾದ್ ಕೆ., ಮಹಿಳಾ ಪ್ರಭಾರಿ ಲೀಲಾ ಆರ್. ಅಮೀನ್, ತಾಲೂಕು ಪ್ರಭಾರಿಗಳಾದ ನಾಗರಾಜ ಶೇಟ್, ಶ್ಯಾಮಲಾ ಕೆ., ಗೌರವ ಸದಸ್ಯ ಸದಾಶಿವ ರಾವ್ ಸೇರಿದಂತೆ ಜಿಲ್ಲಾ ಸಮಿತಿ ಸದಸ್ಯರು, ಯೋಗ ಶಿಕ್ಷಕರು ಹಾಗೂ ಯೋಗಾರ್ಥಿಗಳು ಪಾಲ್ಗೊಂಡಿದ್ದರು. ಮಠದ ವ್ಯವಸ್ಥಾಪನ ಸಮಿತಿ ವತಿಯಿಂದ ಯೋಗಾರ್ಥಿಗಳಿಗೆ ಉಪಾಹಾರದ ವ್ಯವಸ್ಥೆ ಮಾಡಲಾಗಿತ್ತು.

## 50 ಲಕ್ಷ ಮತದಾರರ ಹೆಸರು ಕೈಬಿಡುವ ಸಂಚು ಸಾಬೀತುಪಡಿಸಿ: ವಿಜಯೇಂದ್ರ ಸವಾಲು

● ವಿಕ್ರಮ ವಾಹಿನಿ | ಬೆಂಗಳೂರು



ರಾಜ್ಯದಲ್ಲಿ 50 ಲಕ್ಷ ಮತದಾರರ ಹೆಸರುಗಳನ್ನು ಮತದಾರರ ಪಟ್ಟಿಯಿಂದ ಕೈಬಿಡಲು ಬಿಜೆಪಿ ಸಂಚು ರೂಪಿಸಿದೆ ಎಂಬ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಆರೋಪಕ್ಕೆ ದಾಖಲೆ ಸಮೇತ ಸಾಕ್ಷ್ಯ ಒದಗಿಸಬೇಕು. ಆರೋಪ ಸಾಬೀತುಪಡಿಸಲು ಸಾಧ್ಯವಾಗದಿದ್ದರೆ ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ನೀಡಬೇಕು ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಸವಾಲು ಹಾಕಿದರು.

ಎಸ್‌ಐಆರ್ ಪ್ರಕ್ರಿಯೆ ಹಾಗೂ ಫಾರ್ಮ್–7 ಅರ್ಜಿಗಳ ಕುರಿತು ಬಿಜೆಪಿ ವಿರುದ್ಧ ಮಾಡಿರುವ ಆರೋಪಗಳಿಗೆ ಪ್ರತಿಕ್ರಿಯಿಸಿದ ಅವರು, ದಲಿತರು, ಹಿಂದುಳಿದವರು ಮತ್ತು ಅಲ್ಪಸಂಖ್ಯಾತರ ಮತಗಳನ್ನು ತೆಗೆದುಹಾಕಲು ಬಿಜೆಪಿ ಷಡ್ಯಂತ್ರ ನಡೆಸಿದೆ ಎಂಬುದು ಗಂಭೀರ ಆರೋಪ. ಮುಖ್ಯಮಂತ್ರಿಗಳು ಈ ಬಗ್ಗೆ ಸಾರ್ವಜನಿಕವಾಗಿ ದಾಖಲೆಗಳನ್ನು ಬಿಡುಗಡೆ ಮಾಡಬೇಕು ಎಂದರು.

ಫಾರ್ಮ್–7 ಎಂಬುದು ಚುನಾವಣಾ ಆಯೋಗದ ನಿಯಮಗಳಡಿ ಮತದಾರರ ಪಟ್ಟಿಯಲ್ಲಿರುವ ಮೃತರು, ಸ್ಥಳಾಂತರಗೊಂಡವರು, ದ್ವಂದ್ವ ನೋಂದಣಿ ಹಾಗೂ ಅನರ್ಹ ಮತದಾರರ ಕುರಿತು ಆಕ್ಷೇಪಣೆ ಸಲ್ಲಿಸಲು ನೀಡಿರುವ ಕಾನೂನುಬದ್ಧ ಅವಕಾಶವಾಗಿದೆ. ಅರ್ಜಿ ಸಲ್ಲಿಸಿದ ತಕ್ಷಣ ಯಾವುದೇ ಮತದಾರರ ಹೆಸರು ಪಟ್ಟಿಯಿಂದ ತೆಗೆದುಹಾಕಲು ಸಾಧ್ಯವಿಲ್ಲ. ಪರಿಶೀಲನೆ ನಡೆಸಿ ಅಂತಿಮ ನಿರ್ಧಾರ ಕೈಗೊಳ್ಳುವ ಅಧಿಕಾರ ಚುನಾವಣಾಧಿಕಾರಿಗಳಿಗಿದೆ. ಹೀಗಿರುವಾಗ ಅರ್ಜಿ ಸಲ್ಲಿಕೆಯನ್ನೇ ಅಕ್ರಮ ಎಂದು ಬಿಂಬಿಸುವುದು ಸರಿಯಲ್ಲ ಎಂದು ಹೇಳಿದರು.

ರಾಜ್ಯಾದ್ಯಂತ ಸಲ್ಲಿಕೆಯಾಗಿರುವ ಫಾರ್ಮ್–7 ಅರ್ಜಿಗಳಲ್ಲಿ ಬಿಜೆಪಿ ಕಾರ್ಯಕರ್ತರಷ್ಟೇ ಅಲ್ಲದೆ, ವಿವಿಧ ರಾಜಕೀಯ ಪಕ್ಷಗಳ ಪ್ರತಿನಿಧಿಗಳು ಮತ್ತು ಸಾರ್ವಜನಿಕರೂ ಇದ್ದಾರೆ. 50 ಲಕ್ಷ ಮತದಾರರ ಹೆಸರು ಕೈಬಿಡುವ ಸಂಚು ನಡೆದಿದೆ ಎನ್ನುವುದಕ್ಕೆ ಮುಖ್ಯಮಂತ್ರಿಗಳು ಯಾವ ದಾಖಲೆ ಹೊಂದಿದ್ದಾರೆ ಎಂಬುದನ್ನು ಸ್ಪಷ್ಟಪಡಿಸಲಿ. ಅಂತಿಮ ಅಂಕಿಅಂಶಗಳನ್ನು ಚುನಾವಣಾ ಆಯೋಗವೇ ಪ್ರಕಟಿಸಬೇಕು ಎಂದು ಆಗ್ರಹಿಸಿದರು.

ಮೈಸೂರು ನರಸಿಂಹರಾಜ ವಿಧಾನಸಭಾ ಕ್ಷೇತ್ರದಲ್ಲಿ ಕಳೆದ ಎರಡು ಚುನಾವಣೆಗಳ ಅವಧಿಯಲ್ಲಿ ಸುಮಾರು 1.30 ಲಕ್ಷ ಮತದಾರರ ಸಂಖ್ಯೆ ಹೆಚ್ಚಳವಾಗಿರುವ ಕುರಿತು ಪರಿಶೀಲನೆ ಅಗತ್ಯವಿದೆ. ಬೆಂಗಳೂರು ಸೇರಿದಂತೆ ರಾಜ್ಯದ ವಿವಿಧ ಕ್ಷೇತ್ರಗಳಲ್ಲಿಯೂ ಮತದಾರರ ನೋಂದಣಿ ಕುರಿತು ದೂರುಗಳು ಕೇಳಿಬಂದಿವೆ. ಯಾವುದೇ ಪಕ್ಷದವರಾಗಿದ್ದರೂ ಅಕ್ರಮ ನೋಂದಣಿ ಕಂಡುಬಂದರೆ ಚುನಾವಣಾ ಆಯೋಗ ತನಿಖೆ ನಡೆಸಬೇಕು. ಅರ್ಹ ಮತದಾರರ ಹೆಸರು ಕೈಬೀಳದಂತೆ ಎಚ್ಚರ ವಹಿಸಬೇಕು ಎಂದರು.

ಫಾರ್ಮ್–7 ಸಲ್ಲಿಸಿದ ಬಿಜೆಪಿ ಕಾರ್ಯಕರ್ತರಿಗೆ ಎಫ್‌ಐಆರ್ ದಾಖಲಿಸುವ ಬೆದರಿಕೆ ಹಾಕುವುದು ಸರಿಯಲ್ಲ. ನಿಯಮ ಉಲ್ಲಂಘನೆ ನಡೆದಿದ್ದರೆ ಆಯೋಗ ಕಾನೂನು ಕ್ರಮ ಕೈಗೊಳ್ಳಲಿ. ಆದರೆ ರಾಜಕೀಯ ಉದ್ದೇಶದಿಂದ ಕಾರ್ಯಕರ್ತರನ್ನು ಗುರಿಯಾಗಿಸುವುದನ್ನು ಬಿಜೆಪಿ ಸಹಿಸುವುದಿಲ್ಲ ಎಂದು ಎಚ್ಚರಿಸಿದರು.

ರಾಜ್ಯದಲ್ಲಿನ ಬರ ಪರಿಸ್ಥಿತಿ, ಕೆಪಿಎಸ್‌ಸಿ ನೇಮಕಾತಿ, ಗುತ್ತಿಗೆದಾರರ ಆರೋಪಗಳು ಹಾಗೂ ಹಣಕಾಸಿನ ಸಮಸ್ಯೆಗಳ ಕುರಿತು ಉತ್ತರಿಸುವ ಬದಲು ಸರ್ಕಾರ ಎಸ್‌ಐಆರ್ ವಿಚಾರವನ್ನು ರಾಜಕೀಯಗೊಳಿಸುತ್ತಿದೆ. ಚುನಾವಣಾ ಆಯೋಗದ ಮೇಲೆ ಒತ್ತಡ ಹೇರುವ ಬದಲು ಪಾರದರ್ಶಕ ಚುನಾವಣಾ ಪ್ರಕ್ರಿಯೆಗೆ ಸಹಕರಿಸಬೇಕು ಎಂದು ವಿಜಯೇಂದ್ರ ಆಗ್ರಹಿಸಿದರು.

## ಕಬ್ಬು ಬೆಳೆಗಾರರ ಸಭೆಗೆ ಸಿಎಂಗೆ ಜೋಶಿ ಆಹ್ವಾನ

● ವಿಕ್ರಮ ವಾಹಿನಿ | ನವದೆಹಲಿ

ಕರ್ನಾಟಕದ ಕಬ್ಬು ಬೆಳೆಗಾರರ ಬೇಡಿಕೆ ಹಾಗೂ ಸಮಸ್ಯೆಗಳ ಕುರಿತು ಚರ್ಚಿಸಲು ಅ.12ರಂದು ನವದೆಹಲಿಯಲ್ಲಿ ನಡೆಯಲಿರುವ ಸಭೆಗೆ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರನ್ನು ಕೇಂದ್ರ ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಪ್ರಹ್ಲಾದ್ ಜೋಶಿ ಆಹ್ವಾನಿಸಿದ್ದಾರೆ.

ನವದೆಹಲಿಯ ಕೃಷಿ ಭವನದಲ್ಲಿ ಅ.12ರಂದು ಮಧ್ಯಾಹ್ನ 3 ಗಂಟೆಗೆ ಸಭೆ ನಡೆಯಲಿದ್ದು, ಕಬ್ಬಿನ ದರ ಸೇರಿದಂತೆ ರೈತರ ಸಮಸ್ಯೆಗಳ ಕುರಿತು ರಚನಾತ್ಮಕ ಚರ್ಚೆ ನಡೆಸಲು ಮುಖ್ಯಮಂತ್ರಿ ಖುದ್ದಾಗಿ ಭಾಗವಹಿಸುವಂತೆ ಜೋಶಿ ಪತ್ರದಲ್ಲಿ ಮನವಿ ಮಾಡಿದ್ದಾರೆ.

ಸಾಧ್ಯವಾಗದಿದ್ದರೆ ತಮ್ಮ ಪರವಾಗಿ ಸಂಬಂಧಪಟ್ಟ ರಾಜ್ಯ ಸಚಿವರನ್ನು ಕಳುಹಿಸಬಹುದು ಎಂದೂ ತಿಳಿಸಿದ್ದಾರೆ.

2026–27ನೇ ಸಾಲಿನ ಕಬ್ಬು ಅರೆಯುವ ಹಂಗಾಮು ಅ.1ರಿಂದ ಆರಂಭವಾಗಿದ್ದು, ಕೇಂದ್ರ ಸರ್ಕಾರ ನಿಗದಿಪಡಿಸಿರುವ ನ್ಯಾಯಯುತ ಮತ್ತು ಲಾಭದಾಯಕ ಬೆಲೆ (ಎಫ್‌ಆರ್‌ಪಿ)ಯನ್ನು ಪ್ರತಿ ಕ್ವಿಂಟಲ್‌ಗೆ 365ಕ್ಕೆ ನಿಗದಿಪಡಿಸಲಾಗಿದೆ ಎಂದು ಜೋಶಿ ತಿಳಿಸಿದ್ದಾರೆ.

ಕೇಂದ್ರದ ಎಫ್‌ಆರ್‌ಪಿಗಿಂತ ಹೆಚ್ಚುವರಿ ದರ ನೀಡಬೇಕು ಎಂಬುದು ಕರ್ನಾಟಕದ ಕಬ್ಬು ಬೆಳೆಗಾರರ ಪ್ರಮುಖ ಬೇಡಿಕೆಯಾಗಿದೆ. ರೈತರ ಹಿತಾಸಕ್ತಿ ಹಾಗೂ ಸಕ್ಕರೆ ವಲಯದ ಸಮತೋಲನದ ಕುರಿತು ಸಭೆಯಲ್ಲಿ ಚರ್ಚಿಸಲಾಗುವುದು ಎಂದು ಅವರು ಹೇಳಿದ್ದಾರೆ.

ಕರ್ನಾಟಕದ ರೈತ ಮುಖಂಡರೊಂದಿಗೆ ನಡೆಯಲಿರುವ ಸಭೆಯಲ್ಲಿ ಕೇಂದ್ರ ಕೃಷಿ ಮತ್ತು ರೈತ ಕಲ್ಯಾಣ ಸಚಿವರೂ ಭಾಗವಹಿಸಲಿದ್ದು, ರಾಜ್ಯದ ಕಬ್ಬು ಬೆಳೆಗಾರರ ಸಮಸ್ಯೆಗಳನ್ನು ಆಲಿಸಿ ಪರಿಹಾರ ಕಂಡುಕೊಳ್ಳುವ ಉದ್ದೇಶದಿಂದ ಸಭೆ ಆಯೋಜಿಸಲಾಗಿದೆ ಎಂದು ಜೋಶಿ ತಿಳಿಸಿದ್ದಾರೆ.

# ಕ್ಯಾಪ್ಟನ್ ಸ್ಮಿತ್ ಮಚ್ಚರ್ ಶೀಘ್ರ ಚೇತರಿಕೆಗೆ ರಾಜ್ಯಾದ್ಯಂತ ಪ್ರಾರ್ಥನೆ

● ವಿಕ್ರಮ ವಾಹಿನಿ । ಬೆಂಗಳೂರು

ಫ್ಲೈದುಬೈ ವಿಮಾನದಲ್ಲಿ 180 ಪ್ರಯಾಣಿಕರ ಜೀವ ಉಳಿಸಲು ಧೈರ್ಯ, ಸಮಯಪ್ರಜ್ಞೆ ಹಾಗೂ ಕರ್ತವ್ಯನಿಷ್ಠೆ ಮೆರೆದ ಕ್ಯಾಪ್ಟನ್ ಸ್ಮಿತ್ ಮಚ್ಚರ್ ಅವರ ಶೀಘ್ರ ಚೇತರಿಕೆಗಾಗಿ ಶನಿವಾರ ರಾಜ್ಯದಾದ್ಯಂತ ಸಾವಿರಾರು ದೇವಸ್ಥಾನಗಳಲ್ಲಿ ಬಿಜೆಪಿ ಕಾರ್ಯಕರ್ತರು ಅವರ ಹೆಸರಿನಲ್ಲಿ ವಿಶೇಷ ಪೂಜೆ ಸಲ್ಲಿಸಿ ಪ್ರಾರ್ಥನೆ ಮಾಡಲಿದ್ದಾರೆ ಎಂದು ವಿಧಾನ ಪರಿಷತ್ತಿನ ವಿರೋಧ ಪಕ್ಷದ ಮುಖ್ಯ ಸಚೇತಕ ಎನ್. ರವಿ ಕುಮಾರ್ ತಿಳಿಸಿದ್ದಾರೆ.



ಈ ಕುರಿತು ಶುಕ್ರವಾರ ಬೆಂಗಳೂರಿನಲ್ಲಿ ಪ್ರಕಟಣೆ ನೀಡಿರುವ ಅವರು, ಕ್ಯಾಪ್ಟನ್ ಸ್ಮಿತ್ ಮಚ್ಚರ್ ಅವರು ತಮ್ಮ ಸಹ ಪೈಲಟ್‌ನನ್ನು ನಿಯಂತ್ರಣಕ್ಕೆ ತೆಗೆದುಕೊಂಡು 180 ಪ್ರಯಾಣಿಕರ ಜೀವಗಳನ್ನು ಉಳಿಸುವ ಮೂಲಕ ತೋರಿದ ಅಸಾಧಾರಣ ಧೈರ್ಯ, ಅದ್ಭುತ ಸಮಯಪ್ರಜ್ಞೆ ಹಾಗೂ ಕರ್ತವ್ಯನಿಷ್ಠೆ ದೇಶದ ಕೋಟ್ಯಂತರ ಭಾರತೀಯರ ಹೆಮ್ಮೆ ಹೆಚ್ಚಿಸಿದೆ ಎಂದು ಹೇಳಿದ್ದಾರೆ.

ಕ್ಯಾಪ್ಟನ್ ಸ್ಮಿತ್ ಮಚ್ಚರ್ ಅವರು ತಮ್ಮ ಶ್ಲಾಘನೀಯ ಕಾರ್ಯದಿಂದ 'ಆಕಾಶದ ಹೀರೋ' ಆಗಿ ಹೊರಹೊಮ್ಮಿದ್ದಾರೆ. ಅವರ ಅಸಾಧಾರಣ ಕಾರ್ಯಕ್ಷಮತೆ ಮತ್ತು ಕರ್ತವ್ಯ ಪ್ರಜ್ಞೆ ನಿಜಕ್ಕೂ ಶ್ಲಾಘನೀಯ ಮತ್ತು ಅಭಿನಂದನಾರ್ಹವಾಗಿದೆ. ಅವರು ಶೀಘ್ರವಾಗಿ ಸಂಪೂರ್ಣ ಚೇತರಿಸಿಕೊಳ್ಳಲಿ ಎಂಬುದು ಬಿಜೆಪಿ ಕಾರ್ಯಕರ್ತರ ಹಾರೈಕೆ ಹಾಗೂ ಪ್ರಾರ್ಥನೆಯಾಗಿದೆ ಎಂದು ಎನ್. ರವಿ ಕುಮಾರ್ ತಿಳಿಸಿದ್ದಾರೆ.

# ಫ್ಲೈದುಬೈ ವಿಮಾನದಲ್ಲಿನ ದಾಳಿ ಭಯೋತ್ಪಾದಕ ಕೃತ್ಯ: ಯುಎಇ

● ವಿಕ್ರಮ ವಾಹಿನಿ । ದುಬೈ

ಟೆಲ್ ಅವೀವ್‌ಗೆ ತೆರಳುತ್ತಿದ್ದ ಫ್ಲೈದುಬೈ ವಿಮಾನದ ಕಾಕ್‌ಪಿಟ್‌ನಲ್ಲಿ ನಡೆದ ಹಲ್ಲೆ ಘಟನೆಯನ್ನು ಯುನೈಟೆಡ್ ಅರಬ್ ಎಮಿರೇಟ್ಸ್ (ಯುಎಇ) ಅಧಿಕೃತವಾಗಿ 'ಭಯೋತ್ಪಾದಕ ಕೃತ್ಯ' ಎಂದು ಹೇಳಿದೆ. ಘಟನೆಯ ಉದ್ದೇಶ ಮತ್ತು ಹಿನ್ನೆಲೆ ಕುರಿತು ತನಿಖೆ ಮುಂದುವರಿದಿದೆ.

ಗಂಭೀರ ಅಪಾಯದ ನಡುವೆಯೂ ಪರಿಸ್ಥಿತಿಯನ್ನು ನಿಯಂತ್ರಿಸುವಲ್ಲಿ ಪ್ರಮುಖ ಪಾತ್ರ ವಹಿಸಿದ ಭಾರತೀಯ ಪೈಲಟ್ ಕ್ಯಾಪ್ಟನ್ ಸ್ಮಿತ್ ಮಚ್ಚರ್ ಅವರ ಧೈರ್ಯ ಮತ್ತು ವೃತ್ತಿಪರತೆಯನ್ನು ಯುಎಇ ಅಧ್ಯಕ್ಷರ ಸಲಹೆಗಾರ ಅನ್ವರ್ ಗರ್ಗಾಶ್ ಶ್ಲಾಘಿಸಿದ್ದಾರೆ.

ಸಾಮಾಜಿಕ ಜಾಲತಾಣದ ಪೋಸ್ಟ್‌ನಲ್ಲಿ ಸ್ಮಿತ್ ಮಚ್ಚರ್ ಅವರನ್ನು 'ನಿಜವಾದ ಹೀರೊ' ಎಂದು ಬಣ್ಣಿಸಿರುವ ಗರ್ಗಾಶ್, ಸಂಭವನೀಯ ಭಾರೀ ದುರಂತವನ್ನು ತಪ್ಪಿಸುವ ಸಂದರ್ಭದಲ್ಲಿ ಅವರು ತೋರಿದ ಧೈರ್ಯ ಮತ್ತು ಜವಾಬ್ದಾರಿಯನ್ನು ಪ್ರಶಂಸಿಸಿದ್ದಾರೆ.

ದಾಳಿಯ ಹಿಂದೆ ಯಾವುದೇ ಭಯೋತ್ಪಾದಕ ಸಂಘಟನೆಯ ನಂಟಿದೆಯೇ ಅಥವಾ ಕೃತ್ಯ ಪೂರ್ವನಿಯೋಜಿತವಾಗಿತ್ತೇ ಎಂಬ ಕುರಿತು ಯುಎಇ ತನಿಖಾ ಸಂಸ್ಥೆಗಳು ಪರಿಶೀಲನೆ ನಡೆಸುತ್ತಿವೆ. ಯುಎಇಯಲ್ಲಿ ನೋಂದಣಿಯಾಗಿರುವ ವಿಮಾನವಾಗಿರುವುದರಿಂದ ಪ್ರಕರಣದ ತನಿಖೆ ಅಲ್ಲಿನ ಅಧಿಕಾರಿಗಳ ವ್ಯಾಪ್ತಿಯಲ್ಲಿದೆ ಎಂದು ತಿಳಿಸಲಾಗಿದೆ.

ಘಟನೆಯಲ್ಲಿ ಗಾಯಗೊಂಡ ಕ್ಯಾಪ್ಟನ್ ಸ್ಮಿತ್ ಮಚ್ಚರ್ ಅವರನ್ನು ಹೆಚ್ಚಿನ ಚಿಕಿತ್ಸೆಗಾಗಿ ಯುಎಇಗೆ ಕರೆತರಲಾಗಿದ್ದು, ಅವರು ಚೇತರಿಸಿಕೊಳ್ಳುತ್ತಿದ್ದಾರೆ ಎಂದು ವರದಿ ತಿಳಿಸಿದೆ.

# ಕಿಡ್ನ್ಯಾಪ್ ನಾಟಕವಾಡಿ ತಂದೆಗೆ ರೂ 90 ಲಕ್ಷ ಬೇಡಿಕೆ

● ವಿಕ್ರಮ ವಾಹಿನಿ । ಬೆಂಗಳೂರು

ತನ್ನದೇ ಅಪಹರಣದ ನಾಟಕವಾಡಿ ತಂದೆಯಿಂದ ರೂ 90 ಲಕ್ಷ ಹಣಕ್ಕೆ ಬೇಡಿಕೆ ಇಟ್ಟಿದ್ದ ಮಗನನ್ನು ಆರ್.ಆರ್.ನಗರ ಪೊಲೀಸರು ಬಂಧಿಸಿದ್ದಾರೆ. ಮನೀಷ್ (40) ಬಂಧಿತ ಆರೋಪಿ.

ಹಣದ ವ್ಯವಹಾರಕ್ಕಾಗಿ ಗದಗಕ್ಕೆ ರೈಲಿನಲ್ಲಿ ತೆರಳುವುದಾಗಿ ತಂದೆ ಮನೋಹರ್ ಪಟೇಲ್ (62) ಅವರಿಗೆ ತಿಳಿಸಿದ್ದ ಮನೀಷ್, ಬಳಿಕ ಸ್ನೇಹಿತರ ಮೂಲಕ ತನ್ನದೇ ಮೊಬೈಲ್ ಸಂಖ್ಯೆಯಿಂದ ತಂದೆಗೆ ವಾಟ್ಸ್‌ಆಪ್ ಕರೆ ಮಾಡಿಸಿ, 'ನಿಮ್ಮ ಮಗನನ್ನು ಅಪಹರಿಸಿದ್ದೇವೆ' ಎಂದು ಹೇಳಿಸಿದ್ದ.

ರೂ 90 ಲಕ್ಷಕ್ಕೆ ಬೇಡಿಕೆ ಇಟ್ಟಿದ್ದರಿಂದ ಆತಂಕಗೊಂಡ ತಂದೆ ಪೊಲೀಸರಿಗೆ ಮಾಹಿತಿ ನೀಡಿದ್ದರು. ತನಿಖೆ ನಡೆಸಿದ ಪೊಲೀಸರು ಕರೆ ಬಂದ ಸಂಖ್ಯೆಯನ್ನು ಆಧರಿಸಿ ಹಾಸನದಲ್ಲಿ ಹುಡುಕಾಟ ನಡೆಸಿದಾಗ, ಮನೀಷ್ ಇನ್ನಿಬ್ಬರೊಂದಿಗೆ ಕೊಠಡಿಯಲ್ಲಿ ಆರಾಮವಾಗಿ ಮಲಗಿರುವುದು ಪತ್ತೆಯಾಗಿದೆ. ಆತನನ್ನು ಬಂಧಿಸಿ ವಿಚಾರಣೆ ಮುಂದುವರಿಸಿದ್ದಾರೆ.





ಸಿಎಂ ಡಿ ಕೆ ಶಿವಕುಮಾರ್ ಅವರು 157ನೇ ಮಹಾತ್ಮ ಗಾಂಧಿ ಜಯಂತಿಯ ಅಂಗವಾಗಿ ಬೆಂಗಳೂರಿನ ಗಾಂಧಿ ಭವನದಲ್ಲಿ ಶುಕ್ರವಾರ 'ಮಹಾತ್ಮ ಗಾಂಧಿ ಸೇವಾ ಪ್ರಶಸ್ತಿ ಪ್ರದಾನ, ಗಾಂಧಿ ಡಿಜಿಟಲ್ ಮ್ಯೂಸಿಯಂ ಮತ್ತು ಗಾಂಧಿ ಪುಸ್ತಕಗಳ ಲೋಕಾರ್ಪಣೆ ಕಾರ್ಯಕ್ರಮದಲ್ಲಿ ಮಹಾತ್ಮ ಗಾಂಧೀಜಿ ಹಾಗೂ ಮಾಜಿ ಪ್ರಧಾನಿ ಲಾಲ್ ಬಹದ್ದೂರ್ ಶಾಸ್ತ್ರಿ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಮಾತನಾಡಿದರು ಈ ಸಂದರ್ಭದಲ್ಲಿ ನಾಡೋಜ ಡಾ. ವೂಡೇ ಪಿ. ಕೃಷ್ಣ ಅವರಿಗೆ ಗಾಂಧಿ ಸೇವಾ ಪ್ರಶಸ್ತಿ ಪ್ರದಾನ ಮಾಡಿದರು. ನಾನಾ ಪ್ರಶಸ್ತಿ ಪುರಸ್ಕೃತರನ್ನು ಸನ್ಮಾನಿಸಿದರು. ಸಚಿವ ರಿಜ್ವಾನ್ ಅರ್ಷದ್, ಎಚ್.ಸಿ. ಬಾಲಕೃಷ್ಣ, ಮಾಜಿ ಸಚಿವ ಹಾಗೂ ಗಾಂಧಿ ಭಾರತ ಶತಮಾನೋತ್ಸ ಸಮಿತಿ ಅಧ್ಯಕ್ಷ ಎಚ್.ಕೆ. ಪಾಟೀಲ್, ನಿವೃತ್ತ ನ್ಯಾಯಮೂರ್ತಿ ಟಿ ಜಿ ಶಿವಶಂಕರಗೌಡ, ಕರ್ನಾಟಕ ರಾಜ್ಯ ಮದ್ಯಪಾನ ಸಂಯಮ ಮಂಡಳಿಯ ಅಧ್ಯಕ್ಷ ಶರಣಪ್ಪ ಸಲಾದಪುರ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಕಾರ್ಯದರ್ಶಿ ಜೆ. ಮಂಜುನಾಥ್ , ಆಯುಕ್ತ ಎಂ.ಎನ್. ಅನುಚೇತ್ ಮತ್ತಿತರರು ಉಪಸ್ಥಿತರಿದ್ದರು.

# ನಕಲಿ ಔಷಧ ಪತ್ತೆಗೆ ಸರ್ಕಾರಿ ಪ್ರಯೋಗಾಲಯ

● ವಿಕ್ರಮ ವಾಹಿನಿ । ಬೆಂಗಳೂರು

ನಕಲಿ ಹಾಗೂ ಕಳಪೆ ಗುಣಮಟ್ಟದ ಔಷಧ ಮತ್ತು ಕಲಬೆರಕೆ ಆಹಾರ ಪತ್ತೆಗೆ ಖಾಸಗಿ ಪ್ರಯೋಗಾಲಯಗಳ ಮೇಲಿನ ಅವಲಂಬನೆ ಕಡಿಮೆ ಮಾಡುವ ಉದ್ದೇಶದಿಂದ ಸರ್ಕಾರದಿಂದಲೇ ಅತ್ಯಾಧುನಿಕ ಪರೀಕ್ಷಾ ಪ್ರಯೋಗಾಲಯ ಸ್ಥಾಪಿಸಲು ಚಿಂತನೆ ನಡೆಸಲಾಗುತ್ತಿದೆ ಎಂದು ಆರೋಗ್ಯ ಸಚಿವ ಯು.ಟಿ. ಖಾದರ್ ತಿಳಿಸಿದರು.



ಇತ್ತೀಚೆಗೆ ರಾಜ್ಯದಲ್ಲಿ ಪತ್ತೆಯಾದ ನಕಲಿ ಔಷಧ ಪ್ರಕರಣದ ಹಿನ್ನೆಲೆಯಲ್ಲಿ ಮಾತನಾಡಿದ ಅವರು, ಕಾರ್ಖಾನೆಗಳು, ಆಸ್ಪತ್ರೆಗಳು ಹಾಗೂ ಔಷಧ ಮಳಿಗೆಗಳಿಂದ ನೇರವಾಗಿ ಮಾದರಿ ಸಂಗ್ರಹಿಸಿ ತ್ವರಿತವಾಗಿ ಗುಣಮಟ್ಟ ಪರೀಕ್ಷೆ ನಡೆಸುವ ವ್ಯವಸ್ಥೆ ರೂಪಿಸಲಾಗುವುದು. ಯಾವುದೇ ಕಂಪನಿಯ ಔಷಧದ ಗುಣಮಟ್ಟದ ಬಗ್ಗೆ ಅನುಮಾನ ಬಂದರೂ ಮಾದರಿ ಸಂಗ್ರಹಿಸಿ ಸ್ವತಂತ್ರವಾಗಿ ಪರೀಕ್ಷಿಸುವ ಸಾಮರ್ಥ್ಯ ಸರ್ಕಾರಕ್ಕೆ ಇರಬೇಕು ಎಂಬ ಉದ್ದೇಶದಿಂದ ಹೈಟೆಕ್ ಲ್ಯಾಬ್ ಸ್ಥಾಪನೆ ಅಥವಾ ಅತ್ಯಾಧುನಿಕ ಪ್ರಯೋಗಾಲಯದೊಂದಿಗೆ ಸಹಭಾಗಿತ್ವದ ಬಗ್ಗೆ ಚರ್ಚೆ ನಡೆಯುತ್ತಿದೆ ಎಂದರು.

ಕೆಲವು ಖಾಸಗಿ ಪ್ರಯೋಗಾಲಯಗಳು ಪ್ರತಿಷ್ಠಿತ ಕಂಪನಿಗಳ ಪರವಾಗಿ ವರದಿ ನೀಡುತ್ತಿವೆ ಎಂಬ ಆರೋಪಗಳ ಹಿನ್ನೆಲೆಯಲ್ಲಿ ಸರ್ಕಾರದ ಸ್ವಂತ ಪ್ರಯೋಗಾಲಯದ ಅಗತ್ಯತೆ ಎದುರಾಗಿದೆ. ವಿಶೇಷವಾಗಿ ಔಷಧ ಗುಣಮಟ್ಟಕ್ಕೆ ಸಂಬಂಧಿಸಿದ ಪ್ರಕರಣಗಳು ನ್ಯಾಯಾಲಯಕ್ಕೆ ಹೋದಾಗ ವೈಜ್ಞಾನಿಕವಾಗಿ ವಿಶ್ವಾಸಾರ್ಹ ಹಾಗೂ ಕಾನೂನುಬದ್ಧವಾಗಿ ಮಾನ್ಯವಾಗುವ ಪರೀಕ್ಷಾ ವರದಿ ಅಗತ್ಯವಿರುವುದರಿಂದ ಈ ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಹೇಳಿದರು.

ಬಿಡದಿಯಲ್ಲಿ ನಡೆದ ದಾಳಿಯಲ್ಲಿ 5 ಕೋಟಿಗೂ ಅಧಿಕ ಮೌಲ್ಯದ ನಕಲಿ ಔಷಧ ಪತ್ತೆಯಾದ ಪ್ರಕರಣದ ಬಳಿಕ ಸರ್ಕಾರ ಕ್ರಮಗಳನ್ನು ಮತ್ತಷ್ಟು ಬಿಗಿಗೊಳಿಸಿದೆ. ಪ್ರಕರಣದ ತನಿಖೆಯಲ್ಲಿ ಔಷಧ ನಿಯಂತ್ರಣ ಹಾಗೂ ವಾಣಿಜ್ಯ ತೆರಿಗೆ ಇಲಾಖೆಯ ಅಧಿಕಾರಿಗಳೂ ಭಾಗಿಯಾಗಿದ್ದಾರೆ. ರಾಜ್ಯದಲ್ಲಿ 16 ಔಷಧ ಪರವಾನಗಿಗಳನ್ನು ರದ್ದುಗೊಳಿಸಿ, ಎಂಟು ಪರವಾನಗಿಗಳನ್ನು ಅಮಾನತುಗೊಳಿಸಲಾಗಿದೆ ಎಂದು ಖಾದರ್ ತಿಳಿಸಿದರು.

ಆಹಾರ ಮಾದರಿಗಳ ಪರೀಕ್ಷೆಗೆ ರಾಜ್ಯದಲ್ಲಿ ಈಗಾಗಲೇ ಮಾನ್ಯತೆ ಪಡೆದ ಪ್ರಯೋಗಾಲಯಗಳ ವ್ಯವಸ್ಥೆಯಿದ್ದು, ಹೊಸ ಹೈಟೆಕ್ ಪ್ರಯೋಗಾಲಯ ಕಾರ್ಯರೂಪಕ್ಕೆ ಬಂದರೆ ಆಹಾರ ಮತ್ತು ಔಷಧಗಳ ಗುಣಮಟ್ಟದ ಮೇಲೆ ಸರ್ಕಾರದ ನೇರ ನಿಗಾ ಹೆಚ್ಚಲಿದೆ. ನಕಲಿ ಹಾಗೂ ಕಳಪೆ ಉತ್ಪನ್ನಗಳ ವಿರುದ್ಧದ ಕ್ರಮಕ್ಕೂ ವೈಜ್ಞಾನಿಕ ಬಲ ದೊರೆಯಲಿದೆ ಎಂದು ಅವರು ಹೇಳಿದರು.

# ಯುಜಿಡಿ ಕಾಮಗಾರಿಯಿಂದ
## ಎಚ್‌ಎಸ್‌ಆರ್ ನಿವಾಸಿಗಳಿಗೆ ಸಂಕಷ್ಟ

● ವಿಕ್ರಮ ವಾಹಿನಿ । ಬೆಂಗಳೂರು

ಒಳಚರಂಡಿ (ಯುಜಿಡಿ) ಪೈಪ್ ಅಳವಡಿಕೆಗಾಗಿ ರಸ್ತೆ ಅಗೆದು ಹಲವು ತಿಂಗಳು ಕಳೆದರೂ ಪುನರ್‌ನಿರ್ಮಾಣ ಕಾಮಗಾರಿ ಪೂರ್ಣಗೊಳ್ಳದ ಹಿನ್ನೆಲೆಯಲ್ಲಿ ಎಚ್‌ಎಸ್‌ಆರ್ ಲೇಔಟ್ 6ನೇ ಸೆಕ್ಟರ್‌ನ 1ನೇ ಮುಖ್ಯ ರಸ್ತೆಯ ನಿವಾಸಿಗಳು ಹಾಗೂ ವಾಹನ ಸವಾರರು ತೀವ್ರ ತೊಂದರೆ ಅನುಭವಿಸುತ್ತಿದ್ದಾರೆ.

ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ (ಬಿಡಬ್ಲ್ಯುಎಸ್‌ಎಸ್‌ಬಿ) ರಸ್ತೆ ಅಗೆದಿರುವುದರಿಂದ ಸಡಿಲ ಜಲ್ಲಿ, ಸಮತಟ್ಟಾಗಿರದ ರಸ್ತೆ ಹಾಗೂ ಕೆಸರು ವಾಹನ ಸವಾರರಿಗೆ ಅಪಾಯಕಾರಿಯಾಗಿವೆ. ಈಗಾಗಲೇ ಹಲವು ಅಪಘಾತಗಳು ಸಂಭವಿಸಿದ್ದು, ದ್ವಿಚಕ್ರ ವಾಹನ ಸವಾರರು ಹೆಚ್ಚಿನ ಅಪಾಯ ಎದುರಿಸುತ್ತಿದ್ದಾರೆ ಎಂದು ನಿವಾಸಿಗಳು ದೂರಿದ್ದಾರೆ.

ಯುಜಿಡಿ ಪೈಪ್‌ಗಳ ಬದಲಾವಣೆಗೆ ವಿರೋಧವಿಲ್ಲ. ಆದರೆ ಕಾಮಗಾರಿ ಪೂರ್ಣಗೊಳಿಸಿ ರಸ್ತೆ ಪುನರ್‌ನಿರ್ಮಾಣ ಮಾಡುವಲ್ಲಿ ಆಗುತ್ತಿರುವ ವಿಳಂಬದಿಂದ ಮೂರು ತಿಂಗಳಿಗೂ ಹೆಚ್ಚು ಕಾಲ ಸಮಸ್ಯೆ ಎದುರಿಸುತ್ತಿದ್ದೇವೆ ಎಂದು ನಿವಾಸಿ ಗುಂಜೂರು ಮಂಜು ಹೇಳಿದರು. ಮಳೆ ಬಂದಾಗ ರಸ್ತೆ ಕೆಸರುಮಯವಾಗುತ್ತಿದ್ದು, ಬಿಸಿಲಿನಲ್ಲಿ ಧೂಳು ಹೆಚ್ಚಾಗುತ್ತಿದೆ. ಕಾಮಗಾರಿಯನ್ನು ತ್ವರಿತವಾಗಿ ಪೂರ್ಣಗೊಳಿಸಿ ರಸ್ತೆ ಪುನರ್‌ನಿರ್ಮಿಸಬೇಕು ಎಂದು ಒತ್ತಾಯಿಸಿದರು.

ಒಂದೇ ಬಾರಿಗೆ ಹಲವು ರಸ್ತೆಗಳನ್ನು ಅಗೆದು ಕಾಮಗಾರಿ ನಡೆಸುವ ಬದಲು, ಒಂದು ರಸ್ತೆಯ ಕಾಮಗಾರಿ ಪೂರ್ಣಗೊಳಿಸಿ ಬಳಿಕ ಮತ್ತೊಂದು ರಸ್ತೆಯಲ್ಲಿ ಕೆಲಸ ಆರಂಭಿಸಬೇಕಿತ್ತು ಎಂದು ನಿವಾಸಿ ಕಿರಣ್ ಕುಮಾರ್ ಹೇಳಿದರು. ಕಾಮಗಾರಿ ವೇಗ ಹೆಚ್ಚಿಸಲು ಎಂಜಿನಿಯರ್‌ಗಳು ಸ್ಥಳ ಪರಿಶೀಲನೆ ನಡೆಸಿ ಗುತ್ತಿಗೆದಾರರಿಗೆ ಸೂಚನೆ ನೀಡಬೇಕು ಎಂದು ಆಗ್ರಹಿಸಿದರು.

ಈ ಕುರಿತು ಬಿಡಬ್ಲ್ಯುಎಸ್‌ಎಸ್‌ಬಿ ಕಾರ್ಯನಿರ್ವಾಹಕ ಎಂಜಿನಿಯರ್ ಸ್ನೇಹಾ ವಿ. ಮಾತನಾಡಿ, 1ನೇ ಮುಖ್ಯ ರಸ್ತೆಯ ಪುನರ್‌ನಿರ್ಮಾಣಕ್ಕೆ ಯೋಜನೆ ರೂಪಿಸಲಾಗಿದೆ. ಅಗೆದ ಭಾಗವನ್ನು ಸಮತಟ್ಟುಗೊಳಿಸುವ ಕೆಲಸ ಪೂರ್ಣಗೊಂಡಿದ್ದು, ಇತ್ತೀಚಿನ ಮಳೆಯಿಂದಾಗಿ ಡಾಂಬರೀಕರಣ ವಿಳಂಬವಾಗಿದೆ. ಮಳೆ ಕಡಿಮೆಯಾದ ಕೂಡಲೇ ಡಾಂಬರೀಕರಣ ಕಾಮಗಾರಿ ಆರಂಭಿಸಲಾಗುವುದು ಎಂದು ತಿಳಿಸಿದರು.

ರಸ್ತೆ ದುರಸ್ತಿ ಪೂರ್ಣಗೊಳ್ಳದ ಕಾರಣ ಶಾಲಾ ವಾಹನಗಳು, ಕಚೇರಿ ವಾಹನಗಳು ಹಾಗೂ ಸಾರ್ವಜನಿಕ ಸಾರಿಗೆ ವಾಹನಗಳ ಸಂಚಾರಕ್ಕೂ ತೊಂದರೆಯಾಗುತ್ತಿದೆ. ಬೆಳಗ್ಗೆ ಮತ್ತು ಸಂಜೆ ವಾಹನ ದಟ್ಟಣೆ ಹೆಚ್ಚಾದಾಗ ಅಗೆದ ರಸ್ತೆಯಲ್ಲಿ ಸಂಚಾರ ಮತ್ತಷ್ಟು ನಿಧಾನವಾಗುತ್ತಿದೆ ಎಂದು ಸ್ಥಳೀಯರು ತಿಳಿಸಿದ್ದಾರೆ.

ರಾತ್ರಿ ವೇಳೆ ಸಮರ್ಪಕ ಬೆಳಕಿನ ವ್ಯವಸ್ಥೆ ಇಲ್ಲದ ಸಂದರ್ಭದಲ್ಲಿ ಅಗೆದ ಭಾಗಗಳು ಅಪಾಯಕಾರಿಯಾಗಿದ್ದು, ಸಂಬಂಧಪಟ್ಟ ಇಲಾಖೆ ಸುರಕ್ಷತಾ ಕ್ರಮ ಕೈಗೊಳ್ಳಬೇಕು ಎಂದು ನಿವಾಸಿಗಳು ಮನವಿ ಮಾಡಿದ್ದಾರೆ.

ಯುಜಿಡಿ ಕಾಮಗಾರಿ ಪೂರ್ಣಗೊಂಡಿರುವ ಭಾಗಗಳಲ್ಲಿ ರಸ್ತೆ ಪುನರ್‌ನಿರ್ಮಾಣವನ್ನು ಹಂತ ಹಂತವಾಗಿ ಕೈಗೊಂಡು ಸಾರ್ವಜನಿಕರಿಗೆ ಆಗುತ್ತಿರುವ ತೊಂದರೆ ಕಡಿಮೆ ಮಾಡಬೇಕು. ಕಾಮಗಾರಿ ಪೂರ್ಣಗೊಳ್ಳುವವರೆಗೆ ಅಗತ್ಯವಿರುವ ಕಡೆ ತಾತ್ಕಾಲಿಕವಾಗಿ ರಸ್ತೆ ಸಮತಟ್ಟುಗೊಳಿಸಿ, ಧೂಳು ಹಾಗೂ ಕೆಸರು ನಿಯಂತ್ರಿಸಲು ಕ್ರಮ ಕೈಗೊಳ್ಳುವಂತೆ ನಿವಾಸಿಗಳು ಒತ್ತಾಯಿಸಿದ್ದಾರೆ.

# ರೈತರ ಪರ ಹೋರಾಟಕ್ಕೆ ಬಂದಿದ್ದೇನೆ, ನನ್ನ ಲೋಪವಿದ್ದರೆ ಬಾಯಿ ಮುಚ್ಚಿಸುತ್ತಿದ್ದರು: ನಿಖಿಲ್

● ವಿಕ್ರಮ ವಾಹಿನಿ । ಬಂಗಾರಪೇಟೆ



ರೈತರ ಸಮಸ್ಯೆಗಳ ಕುರಿತು ಸರ್ಕಾರದ ವಿರುದ್ಧ ಧ್ವನಿ ಎತ್ತಿರುವುದಕ್ಕೆ ನನ್ನ ವಿರುದ್ಧ ಹಳ್ಳ ತೋಡುವ ಪ್ರಯತ್ನಗಳು ನಡೆಯುತ್ತಿವೆ. ನನ್ನಲ್ಲಿ ಯಾವುದೇ ಲೋಪವಿದ್ದಿದ್ದರೆ ಈಗಾಗಲೇ ಬಾಯಿ ಮುಚ್ಚಿಸಿಬಿಡುತ್ತಿದ್ದರು. ಹೀಗಾಗಿ ಯಾವುದೇ ಭಯವಿಲ್ಲದೆ ರೈತರ ಪರವಾಗಿ ಹೋರಾಟ ಮಾಡಲು ಬಂದಿದ್ದೇನೆ ಎಂದು ಜೆಡಿಎಸ್ ಯುವ ಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಗುಡುಗಿದರು.

ರೈತ ಸ್ವಾಭಿಮಾನ ಯಾತ್ರೆಯ ಅಂಗವಾಗಿ ಗುರುವಾರ ಬಂಗಾರಪೇಟೆ ಎಪಿಎಂಸಿ ಆವರಣದಲ್ಲಿ ಆಯೋಜಿಸಿದ್ದ ರೈತರೊಂದಿಗಿನ ಸಂವಾದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಚುನಾವಣೆಯಲ್ಲಿ ಸತತ ಸೋಲು ಕಂಡಿದ್ದರೂ ಎದೆಗುಂದಿಲ್ಲ. ವಿಧಾನಸೌಧದಲ್ಲಿ ರೈತರ ಪರವಾಗಿ ಮಾತನಾಡುವ ಅವಕಾಶ ಇನ್ನೂ ಸಿಕ್ಕಿಲ್ಲ. ಆದರೆ ಬೀದಿಗಿಳಿದು ಹೋರಾಟ ನಡೆಸುವ ಹಕ್ಕು ಪ್ರಜಾಪ್ರಭುತ್ವದಲ್ಲಿ ಎಲ್ಲರಿಗೂ ಇದೆ ಎಂದರು.

**ರೈತರ ಬದುಕು ಕತ್ತಲೆಯಲ್ಲಿದೆ:** ರೈತರು ಬೋರ್‌ವೆಲ್ ಕೊರೆಸಲು ಲಕ್ಷಾಂತರ ರೂಪಾಯಿ ಖರ್ಚು ಮಾಡಿದರೂ ನೀರು ಸಿಗುತ್ತಿಲ್ಲ. 1,600 ಅಡಿ ಆಳದವರೆಗೆ ಕೊರೆದರೂ ನೀರಿನ ಲಭ್ಯತೆಯಿಲ್ಲ. ಕೃಷಿ ಚಟುವಟಿಕೆಗಳಿಗೆ ಕನಿಷ್ಠ ಎಂಟು ಗಂಟೆಗಳ ಕಾಲ ತ್ರಿಫೇಸ್ ವಿದ್ಯುತ್ ಪೂರೈಸಬೇಕು. ಲೋಡ್‌ಶೆಡ್ಡಿಂಗ್‌ನಿಂದ ರೈತರು ಸಂಕಷ್ಟ ಎದುರಿಸುತ್ತಿದ್ದಾರೆ. ಎಲ್ಲಿದೆ ಗೃಹಜ್ಯೋತಿ? ರೈತರ ಬದುಕೇ ಕತ್ತಲೆಯಾಗಿದೆ. ಕೇವಲ ಭಾಷಣಗಳಿಂದ ಅಭಿವೃದ್ಧಿ ಸಾಧ್ಯವಿಲ್ಲ ಎಂದು ರಾಜ್ಯ ಸರ್ಕಾರವನ್ನು ಟೀಕಿಸಿದರು.

**ಎಕರೆಗೆ 25 ಸಾವಿರ ಪರಿಹಾರಕ್ಕೆ ಆಗ್ರಹ:** ರಾಜ್ಯದಲ್ಲಿ ಬರ ಪರಿಸ್ಥಿತಿ ಎದುರಾಗಿದ್ದರೂ ಸರ್ಕಾರ ರೈತರ ಸಮಸ್ಯೆಗಳಿಗೆ ಸ್ಪಂದಿಸುತ್ತಿಲ್ಲ. ವಿಶೇಷ ಅಧಿವೇಶನದಲ್ಲಿ ಎಕರೆಗೆ 2,500 ಬರ ಪರಿಹಾರ ಘೋಷಿಸಲಾಗಿದೆ. ಈ ಮೊತ್ತ ಯಾವುದಕ್ಕೂ ಸಾಲದು. ಕನಿಷ್ಠ ಎಕರೆಗೆ 25 ಸಾವಿರ ಪರಿಹಾರ ನೀಡಬೇಕು. ಕೃಷಿಗೆ ಸಮರ್ಪಕ ವಿದ್ಯುತ್ ಹಾಗೂ ಬೆಳೆಗಳಿಗೆ ಬೆಂಬಲ ಬೆಲೆ ಕಲ್ಪಿಸಬೇಕು ಎಂದು ಒತ್ತಾಯಿಸಿದರು.

ಕೆ.ಸಿ. ವ್ಯಾಲಿ ಯೋಜನೆಯ ನೀರಿನ ಶುದ್ಧೀಕರಣದ ಬಗ್ಗೆಯೂ ರೈತರು ಆತಂಕ ವ್ಯಕ್ತಪಡಿಸಿದ್ದಾರೆ. ಸಮರ್ಪಕವಾಗಿ ಮೂರನೇ ಹಂತದ ಶುದ್ಧೀಕರಣ ಮಾಡದೆ ನೀರು ಹರಿಸುವುದರಿಂದ ಅಂತರ್ಜಲ ಕಲುಷಿತಗೊಳ್ಳುತ್ತಿದೆ. ಕೋಲಾರದ ಕೆರೆಗಳಿಗೆ ಕೃಷ್ಣಾ ನದಿಯ ಶುದ್ಧ ನೀರು ಹರಿಸುವುದು ಅಗತ್ಯವಾಗಿದೆ ಎಂದು ಹೇಳಿದರು. ಜೆಡಿಎಸ್ ಪಕ್ಷ ಸದಾ ರೈತರ ಪರವಾಗಿದ್ದು, ರೈತರ ಪ್ರತಿಯೊಂದು ಬೇಡಿಕೆಯನ್ನು ವಿಧಾನಸೌಧದಲ್ಲಿ ಪ್ರಸ್ತಾಪಿಸುತ್ತೇನೆ. ರೈತರ ಸ್ವಾಭಿಮಾನವೇ ನಮ್ಮ ಸ್ವಾಭಿಮಾನ ಎಂದು ತಿಳಿಸಿದರು.

**ರೈತರ ಪ್ರಮುಖ ಬೇಡಿಕೆಗಳು:** ಸಂವಾದದಲ್ಲಿ ರೈತರು ಕಳಪೆ ಬಿತ್ತನೆ ಬೀಜ, ಮಾವು ಮತ್ತು ಟೊಮೆಟೊ ಬೆಳೆಗಳಿಗೆ ಮಾರುಕಟ್ಟೆ ಸೌಲಭ್ಯ, ರೇಷ್ಮೆ ಬೆಳೆಗಾರರ ಸಮಸ್ಯೆ ಸೇರಿದಂತೆ ಹಲವು ವಿಚಾರಗಳನ್ನು ಪ್ರಸ್ತಾಪಿಸಿದರು.

ದುಬಾರಿ ಬೆಲೆಗೆ ಖರೀದಿಸಿದ ಬಿತ್ತನೆ ಬೀಜಗಳಲ್ಲಿ ಶೇ.30ರಷ್ಟು ಮಾತ್ರ ಮೊಳಕೆಯೊಡೆಯುತ್ತಿದ್ದು, ಇದರಿಂದ ಅಪಾರ ನಷ್ಟವಾಗುತ್ತಿದೆ ಎಂದು ರೈತ ಮುನಿಯಪ್ಪ ದೂರಿದರು. ಜಿಲ್ಲೆಯಲ್ಲಿ ವಾರ್ಷಿಕ ಸುಮಾರು 10 ಲಕ್ಷ ಟನ್ ಮಾವು ಉತ್ಪಾದನೆಯಾಗುತ್ತಿದ್ದರೂ ಸಂಸ್ಕರಣಾ ಘಟಕ ಹಾಗೂ ಶೀತಲಗೃಹಗಳಿಲ್ಲ. ಮಾವು ಸಂಸ್ಕರಣಾ ಕಾರ್ಖಾನೆ ಸ್ಥಾಪಿಸುವುದರ ಜತೆಗೆ ಕೋಲಾರದ ಟೊಮೆಟೊ ಮಾರುಕಟ್ಟೆಯನ್ನು 100 ಎಕರೆ ಪ್ರದೇಶದಲ್ಲಿ ಅತ್ಯಾಧುನಿಕವಾಗಿ ಅಭಿವೃದ್ಧಿಪಡಿಸಬೇಕು ಎಂದು ರೈತ ನವೀನ್ ಮನವಿ ಮಾಡಿದರು.

ರೇಷ್ಮೆ ಬೆಳೆಗಾರರಿಗೆ ಮಧ್ಯವರ್ತಿಗಳ ಹಾವಳಿ ತಪ್ಪಿಸಿ ನೇರ ಪ್ರೋತ್ಸಾಹಧನ ನೀಡಬೇಕು. ರೇಷ್ಮೆ ಗುಣಮಟ್ಟ ಪರೀಕ್ಷೆಗೆ ಜಿಲ್ಲಾ ಮಟ್ಟದಲ್ಲಿ ಪ್ರಯೋಗಾಲಯ ಸ್ಥಾಪಿಸಬೇಕು ಎಂದು ರೈತ ಮೂರ್ತಿ ಒತ್ತಾಯಿಸಿದರು.

ಕಾರ್ಯಕ್ರಮದಲ್ಲಿ ಕೋರ್ ಕಮಿಟಿ ಅಧ್ಯಕ್ಷ ಜೆ.ಕೆ. ಕೃಷ್ಣಾರೆಡ್ಡಿ, ಸಂಸದ ಮಲ್ಲೇಶ್ ಬಾಬು, ಶಾಸಕರಾದ ವೆಂಕಟಶಿವಾರೆಡ್ಡಿ, ಸಮೃದ್ಧಿ ಮಂಜುನಾಥ್, ಮಾಜಿ ವಿಧಾನ ಪರಿಷತ್ ಸದಸ್ಯ ಚೌಡರೆಡ್ಡಿ ಸೇರಿದಂತೆ ಪಕ್ಷದ ಮುಖಂಡರು, ರೈತರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

# ಸಿಎಂ, ಸಚಿವರ ವಿರುದ್ಧ ಎಫ್‌ಐಆರ್ ದಾಖಲಿಸಿ: ಆರ್.ಅಶೋಕ್



● ವಿಕ್ರಮ ವಾಹಿನಿ । ಬೆಂಗಳೂರು

ಚುನಾವಣಾಧಿಕಾರಿಗಳ ಕಚೇರಿ ಎದುರು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹಾಗೂ ಸಚಿವರು ಪ್ರತಿಭಟನೆ ನಡೆಸಿರುವುದು ಕಾನೂನು ಉಲ್ಲಂಘನೆಯಾಗಿದ್ದು, ಅವರ ವಿರುದ್ಧ ಎಫ್‌ಐಆರ್ ದಾಖಲಿಸಬೇಕು ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ಆಗ್ರಹಿಸಿದರು. ಈ ಸಂಬಂಧ ಬಿಜೆಪಿ ಮುಖಂಡರೊಂದಿಗೆ ಬೆಂಗಳೂರು ನಗರ ಪೊಲೀಸ್ ಆಯುಕ್ತರನ್ನು ಭೇಟಿ ಮಾಡಿ ಮನವಿ ಸಲ್ಲಿಸಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪ್ರತಿಭಟನೆಗೆ ನಿಷೇಧವಿರುವ ಪ್ರದೇಶದಲ್ಲಿ ಮುಖ್ಯಮಂತ್ರಿ ಹಾಗೂ ಸಚಿವರು ಧರಣಿ ನಡೆಸಿದ್ದು, ಸಾಮಾನ್ಯರಿಗೆ ಅನ್ವಯಿಸುವ ಕಾನೂನು ಸರ್ಕಾರದ ಮುಖ್ಯಸ್ಥರಿಗೂ ಅನ್ವಯಿಸುತ್ತದೆ ಎಂದು ಹೇಳಿದರು. ಈ ಕುರಿತು ಈಗಾಗಲೇ ಪ್ರಕರಣ ದಾಖಲಾಗಿದ್ದು, ಸಿಎಂ ಹಾಗೂ ಸಚಿವರ ವಿರುದ್ಧವೂ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಫಾರ್ಮ್–7 ಕಾನೂನುಬದ್ಧ: ಮತದಾರರ ಪಟ್ಟಿಯಿಂದ ಹೆಸರು ತೆಗೆದುಹಾಕಲು ಫಾರ್ಮ್–7 ಸಲ್ಲಿಸುವುದು ಕಾನೂನುಬದ್ಧ ಪ್ರಕ್ರಿಯೆಯಾಗಿದ್ದು, ಅರ್ಜಿಯಲ್ಲಿ ತಪ್ಪು ಅಥವಾ ಸುಳ್ಳು ಮಾಹಿತಿ ಇದ್ದರೆ ಚುನಾವಣಾಧಿಕಾರಿಗಳು ಪರಿಶೀಲಿಸಿ ಕ್ರಮ ಕೈಗೊಳ್ಳಬಹುದು. ಕಾಂಗ್ರೆಸ್ ನಾಯಕರು ಚುನಾವಣಾಧಿಕಾರಿಗಳ ಮೇಲೆ ಒತ್ತಡ ಹೇರುವ ಬದಲು ತಪ್ಪು ಅರ್ಜಿಗಳಿದ್ದರೆ ಕಾನೂನುಬದ್ಧವಾಗಿ ಪ್ರಶ್ನಿಸಬೇಕು ಎಂದು ಅಶೋಕ ಹೇಳಿದರು.

ಫಾರ್ಮ್–7 ಅರ್ಜಿಗಳ ಕುರಿತು ಚುನಾವಣಾ ಆಯೋಗ ಈಗಾಗಲೇ ಪರಿಶೀಲನೆ ಹಾಗೂ ಕಾನೂನು ಕ್ರಮಕ್ಕೆ ಸೂಚಿಸಿದ್ದು, ಸುಳ್ಳು ಮಾಹಿತಿ ಅಥವಾ ನಕಲಿ ಘೋಷಣೆ ಸಲ್ಲಿಸಿರುವುದು ಪತ್ತೆಯಾದರೆ ಕ್ರಮ ಕೈಗೊಳ್ಳಲಾಗುವುದು ಎಂದು ರಾಜ್ಯ ಮುಖ್ಯ ಚುನಾವಣಾಧಿಕಾರಿ ಸೂಚಿಸಿದ್ದಾರೆ.

ಕಾಂಗ್ರೆಸ್ ನಾಯಕರು ಸಾಂವಿಧಾನಿಕ ಸಂಸ್ಥೆಗಳ ಮೇಲೆ ರಾಜಕೀಯ ಒತ್ತಡ ಹೇರುತ್ತಿದ್ದಾರೆ ಎಂದು ಆರೋಪಿಸಿದ ಅಶೋಕ, ಚುನಾವಣಾ ಆಯೋಗದ ಮುಂದೆ ನಡೆದ ಪ್ರತಿಭಟನೆಗೆ ಸಂಬಂಧಿಸಿದಂತೆ ಮುಖ್ಯಮಂತ್ರಿ ಹಾಗೂ ಸಚಿವರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಪುನರುಚ್ಚರಿಸಿದರು.

# ಮಹಿಳೆಯರು, ಯುವಕರು ಸಂಘಟಿತರಾದಾಗ ಬಲಿಷ್ಠ ಸಮಾಜ ನಿರ್ಮಾಣ: ಡಾ. ಕಜೆ

## ಹವ್ಯಕ ಮಹಿಳಾ ವೇದಿಕೆ, ಯುವ ವೇದಿಕೆ ವಿಸ್ತರಣೆಗೆ ಒತ್ತು; ಡಿಸೆಂಬರ್ 20ಕ್ಕೆ ಮಹಿಳಾ ಸಮಾವೇಶ

● ವಿಕ್ರಮ ವಾಹಿನಿ । ಬೆಂಗಳೂರು

ಮಹಿಳೆಯರು ಹಾಗೂ ಯುವಕರು ಸಂಘಟಿತರಾದಾಗ ಮಾತ್ರ ಬಲಿಷ್ಠ ಮತ್ತು ಸಮಗ್ರ ಸಮಾಜ ನಿರ್ಮಾಣ ಸಾಧ್ಯ ಎಂದು ಶ್ರೀ ಅಖಿಲ ಹವ್ಯಕ ಮಹಾಸಭೆ ಅಧ್ಯಕ್ಷ ಡಾ. ಗಿರಿಧರ ಕಜೆ ಹೇಳಿದರು. ಮಲ್ಲೇಶ್ವರದ ಹವ್ಯಕ ಭವನದಲ್ಲಿ ಶುಕ್ರವಾರ ನಡೆದ ಮಹಾಸಭೆಯ 83ನೇ ವರ್ಷದ ಸರ್ವಸದಸ್ಯರ ವಾರ್ಷಿಕ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಸಂಘಸಂಸ್ಥೆಗಳು ಸಕ್ರಿಯವಾಗಿ ಕಾರ್ಯನಿರ್ವಹಿಸಿದಾಗ ಸಮಾಜದಿಂದ ಸಹಜ ಬೆಂಬಲ ದೊರೆಯುತ್ತದೆ. ಹವ್ಯಕ ಮಹಾಸಭೆ ಪ್ರಾದೇಶಿಕವಾಗಿ ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸುವ ಮೂಲಕ ಸಮಾಜವನ್ನು ತಲುಪುತ್ತಿದೆ ಎಂದರು.




ಮಹಿಳಾ ಸಂಘಟನೆಯನ್ನು ಬಲಪಡಿಸುವ ಉದ್ದೇಶದಿಂದ ಹವ್ಯಕರು ಹೆಚ್ಚಿನ ಸಂಖ್ಯೆಯಲ್ಲಿರುವ 83 ಪ್ರಾಂತ್ಯಗಳಲ್ಲಿ ಹವ್ಯಕ ಮಹಿಳಾ ವೇದಿಕೆ ಆರಂಭಿಸಲಾಗುತ್ತಿದೆ. ಡಿಸೆಂಬರ್ 20ರಂದು ಬೃಹತ್ ಹವ್ಯಕ ಮಹಿಳಾ ಸಮಾವೇಶ ಆಯೋಜಿಸಲಾಗುವುದು. ಮುಂದಿನ ವರ್ಷ ದೇಶ–ವಿದೇಶಗಳ 84 ಪ್ರಾಂತ್ಯಗಳಲ್ಲಿ ಹವ್ಯಕ ಯುವ ವೇದಿಕೆ ಆರಂಭಿಸಲು ಯೋಜಿಸಲಾಗಿದೆ ಎಂದು ತಿಳಿಸಿದರು.

ವೈವಾಹಿಕ ಸಮಸ್ಯೆಗಳು ಸೇರಿದಂತೆ ಸಮಾಜದ ಹಲವು ಜ್ವಲಂತ ಸಮಸ್ಯೆಗಳಿಗೆ ಸಂಘಟನೆಯೇ ಪರಿಹಾರವಾಗಿದ್ದು, ಸಂಘಟನೆ ಬಲಿಷ್ಠವಾದರೆ ಸಮಾಜವೂ ಸುಭಿಕ್ಷವಾಗಿರಲು ಸಾಧ್ಯ ಎಂದರು. ಮೂಲ ನೆಲೆಗಳು ಎದುರಿಸುತ್ತಿರುವ ನದಿ ತಿರುವು ಯೋಜನೆ ಹಾಗೂ ಪರಿಸರ ಹಾನಿ ಸೇರಿದಂತೆ ವಿವಿಧ ಸಮಸ್ಯೆಗಳ ವಿರುದ್ಧ ಅ.10ರಂದು ನಡೆಯಲಿರುವ ಪ್ರತಿಭಟನೆಯಲ್ಲಿ ಎಲ್ಲರೂ ಭಾಗವಹಿಸುವಂತೆ ಕರೆ ನೀಡಿದರು.

**12ನೇ ಬಾರಿಗೆ ಅಧ್ಯಕ್ಷರಾಗಿ ಪುನರಾಯ್ಕೆ**

ಸಭೆಯಲ್ಲಿ ಡಾ. ಗಿರಿಧರ ಕಜೆ ಅವರು ಶ್ರೀ ಅಖಿಲ ಹವ್ಯಕ ಮಹಾಸಭೆಯ ಅಧ್ಯಕ್ಷರಾಗಿ 12ನೇ ಬಾರಿಗೆ ಸರ್ವಾನುಮತದಿಂದ ಪುನರಾಯ್ಕೆಯಾದರು. ಆರ್.ಎಂ. ಹೆಗಡೆ ಬಾಳೆಸರ ಹಾಗೂ ಶ್ರೀಧರ ಜೆ. ಭಟ್ಟ ಕೆಕ್ಕಾರು ಉಪಾಧ್ಯಕ್ಷರಾಗಿ, ಸಿ.ಎ. ವೇಣುವಿಘ್ನೇಶ ಸಂಪ ಪ್ರಧಾನ ಕಾರ್ಯದರ್ಶಿಯಾಗಿ, ಪ್ರಶಾಂತ ಕುಮಾರ ಭಟ್ಟ ಮಲವಳ್ಳಿ ಹಾಗೂ ಆದಿತ್ಯ ಹೆಗಡೆ ಕಲಗಾರು ಕಾರ್ಯದರ್ಶಿಗಳಾಗಿ ಮತ್ತು ಕೃಷ್ಣಮೂರ್ತಿ ಎಸ್. ಭಟ್ ಯಲಹಂಕ ಕೋಶಾಧಿಕಾರಿಯಾಗಿ ಆಯ್ಕೆಯಾದರು. ಸಭೆಯಲ್ಲಿ ಸಾಗರ, ಮಂಗಳೂರು, ಬೆಂಗಳೂರು, ಉತ್ತರ ಕನ್ನಡ, ಕಾಸರಗೋಡು ಸೇರಿದಂತೆ ವಿವಿಧ ಪ್ರಾಂತ್ಯಗಳ ನಿರ್ದೇಶಕರು ಹಾಗೂ ಸದಸ್ಯರು ಭಾಗವಹಿಸಿದ್ದರು.

Vikrama Vahini Kannada Daily, #204, Forest Layout, Jnanabharathi, Bangalore-560095
PRGI NO: KARKAN/2018/78481 vikramavahini@gmail.com
93535 91145
Printed by B.N. Murali Prasad, Published by Swarna Latha B.N., and Printed at Swarna Graphics, Forest Layout, Jnanabharathi, Bangalore -560059 and Published at Bangalore, Editor: B.N. Murali Prasad., Volume:9, Issue : 179,